ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೨೨

**ಪಟ್ಟಿ – ೨೫**

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತಮೂರನೇ ಅಧಿವೇಶನ
( ಮುಂದುವರೆದ ಉಪವೇಶನ )

ಮಂಗಳವಾರ, ದಿನಾಂಕ : ೧೪ನೇ ನವೆಂಬರ್, ೨೦೧೭

---

## ಸಮೂಹ – II

೧. ಇಂಧನ ಸಚಿವರು.

೨. ಕೃಷಿ ಸಚಿವರು.

೩. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೪. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.

೫. ಸಹಕಾರ ಸಚಿವರು.

೬. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು.

೭. ಜವಳಿ ಹಾಗೂ ಮುಜರಾಯಿ ಸಚಿವರು.

---

## ೩೭೧ (ಜೆ) ಪ್ರಕಾರ ಜೆಸ್ಕಾಂ, ಬೆಸ್ಕಾಂ, ಕೆ.ಪಿ.ಟಿ.ಸಿ.ಎಲ್ ಗಳಲ್ಲಿ ಹೈದ್ರಾಬಾದ್ ಕರ್ನಾಟಕ ಭಾಗದವರಿಗೆ ಮೀಸಲಾತಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೩೦೬೬ (೩೬೩೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಂವಿಧಾನದ ಕಲಂ ೩೭೧ (ಜೆ) ಪ್ರಕಾರ ಇಂಧನ ಇಲಾಖೆ ಅಡಿ ಜೆಸ್ಕಾಂ, ಬೆಸ್ಕಾಂ, ಕೆ.ಪಿ.ಟಿ.ಸಿ.ಎಲ್. ನಲ್ಲಿ ಹೈದ್ರಾಬಾದ್ ಕರ್ನಾಟಕ ಭಾಗದವರಿಗೆ ನೇಮಕಾತಿ ಹಾಗೂ ಬಡ್ತಿಗಳಲ್ಲಿ ಮೀಸಲಾತಿ ಕಲ್ಪಿಸಲಾಗಿದೆಯೇ; ಇದ್ದರೆ, ನೇಮಕಾತಿಗಾಗಿ ಹಾಗೂ ಬಡ್ತಿಗಳಿಗಾಗಿ ಮೀಸಲಿರಿಸಿದ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು, ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಿರಿಯ ಇಂಜಿನಿಯರ್ (ವಿದ್ಯುತ್) / (ಕಾಮಗಾರಿ) ಪದವೃಂದ ಹುದ್ದೆಯಿಂದ ಸಹಾಯಕ ಇಂಜಿನಿಯರ್ (ವಿದ್ಯುತ್) (ಕಾಮಗಾರಿ) ಪದವೃಂದದ ಹುದ್ದೆಗಳಿಗೆ ಇತ್ತೀಚೆಗೆ ಬಡ್ತಿ ನೀಡಲಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆ ; ಬಂದಿದ್ದಲ್ಲಿ, ಜೇಷ್ಠತಾ ಪಟ್ಟಿ ತಯಾರಿಸಿ ೩೭೧ (ಜೆ) ಅಡಿಯಲ್ಲಿ ಹೈದ್ರಾಬಾದ್ ಕರ್ನಾಟಕ ಭಾಗದ ಹುದ್ದೆಗಳಿಗೆ ಬಡ್ತಿ ನೀಡಲಾಗಿದೆಯೇ ? (ಹುದ್ದೆವಾರು, ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಹೈದ್ರಾಬಾದ್ ಕರ್ನಾಟಕ ಮೀಸಲಾತಿಯ ವಿಚಾರವಾಗಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದಲ್ಲಿ ವಿದ್ಯುತ್ ಸರಬರಾಜು ಕಂಪನಿಗಳಾದ ಜೆಸ್ಕಾಂ ಮತ್ತು ಬೆಸ್ಕಾಂಗಳಲ್ಲಿನ ಹುದ್ದೆಗಳನ್ನು ಪರಿಗಣಿಸದೆ ಹುದ್ದೆಗಳನ್ನು ಅಧಿಸೂಚಿಸಲಾಗಿದೆಯೇ ; ವಿದ್ಯುತ್

ಸರಬರಾಜು ಕಂಪನಿಗಳ ಹುದ್ದೆಗಳು ಹೈದ್ರಾಬಾದ್ ಕರ್ನಾಟಕ ಮೀಸಲಾತಿಯಿಂದ ಹೊರತುಪಡಿಸಲು ಕಾರಣವೇನು ; (ಕಾರಣಗಳೊಂದಿಗೆ ವಿವರ ನೀಡುವುದು)

(ಈ) ಇಂಧನ ಇಲಾಖೆಯಲ್ಲಿ ಜೆಸ್ಕಾಂ, ಬೆಸ್ಕಾಂನಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಅಭಿಯಂತರರ ಮತ್ತು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಹುದ್ದೆಗಳಿಗೆ ೩೭೧ (ಜೆ) ಮೀಸಲಾತಿ ಅಡಿಯಲ್ಲಿ ಜೇಷ್ಠತಾ ಪಟ್ಟಿಗಳನ್ನು ಸಿದ್ಧಗೊಳಿಸಲಾಗಿದೆಯೇ ; (ಇದ್ದರೆ ಜೇಷ್ಠತಾ ಪಟ್ಟಿಯ ಪ್ರತಿ ಒಗಿಸುವುದು)

(ಉ) ಜೆಸ್ಕಾಂ ಹಾಗೂ ಬೆಸ್ಕಾಂಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಅಭಿಯಂತರರ ಮತ್ತು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಹುದ್ದೆಗಳ ಸೇವಾ ಜೇಷ್ಠತಾ ಪಟ್ಟಿಯನ್ನು ೩೭೧ (ಜೆ) ಪ್ರಕಾರ ತಯಾರಿಸುವ ಅಧಿಕಾರ ಜೆಸ್ಕಾಂ ಹಾಗೂ ಬೆಸ್ಕಾಂ ಹಾಗೂ ಬೆಸ್ಕಾಂಗಳಿಗೆ ನೀಡಲಾಗಿದೆಯೇ ; (ಮಾಹಿತಿ ನೀಡುವುದು)

(ಊ) ಜೆಸ್ಕಾಂ, ಬೆಸ್ಕಾಂ ಹೆಸ್ಕಾಂ ಮೆಸ್ಕಾಂ, ಸೆಸ್ಕೆನಲ್ಲಿ ಸಹಾಯಕ ಅಭಿಯಂತರರ ಮತ್ತು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಂಪನಿವಾರು ಜೇಷ್ಠತಾ ಪಟ್ಟಿ ಇದೆಯೇ ? (ಇದ್ದರೆ, ಕಂಪನಿವಾರು ಜೇಷ್ಠತಾ ಪಟ್ಟಿ ಒದಗಿಸುವುದು)

## ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿ "ಸೋಲಾರ್ ರೂಫ್ ಟಾಪ್" ಯೋಜನೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೩೦೬೭ (೩೬೩೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್ – ಕರ್ನಾಟಕ ಭಾಗದ ೬ ಜಿಲ್ಲೆಗಳು ಹಾಗೂ ಹರಪ್ಪನ ಹಳ್ಳಿಯಲ್ಲಿ "ಸೋಲಾರ್ ರೂಫ್ ಟಾಪ್" ಯೋಜನೆಯು ಜಾರಿಗೆ ಬಂದಿದೆಯೇ ; ಬಂದಿದ್ದರೆ, ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಮಂಜೂರಾದ ಯೋಜನೆಗಳಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬೇಸಿಗೆ ಕಾಲದಲ್ಲಿ ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ವಿದ್ಯುತ್ ಸಮಸ್ಯೆಯನ್ನು ಬಗೆಹರಿಸಲು ಸೋಲಾರೀಕರಣಗೊಳಿಸಲು ಸರ್ಕಾರಿ ಕಛೇರಿ, ಶಾಲಾ ಕಾಲೇಜುಗಳಲ್ಲಿ ಹಾಗೂ ಇತರೆ ಸ್ಥಳಗಳಲ್ಲಿ "ಸೋಲಾರ್ ರೂಫ್ ಟಾಪ್" ಅಳವಡಿಸಲು ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) "ಸೋಲಾರ್ ರೂಫ್ ಟಾಪ್" ಯೋಜನೆಯಲ್ಲಿರುವ ಮಾನದಂಡಗಳೇನು ; ಈ ಯೋಜನೆಯಿಂದ ಹೈದ್ರಾಬಾದ್–ಕರ್ನಾಟಕ ಭಾಗಕ್ಕೆ ಯಾವ ರೀತಿಯ ಸೌಲಭ್ಯಗಳು ಒದಗಿಸಬಹುದು ? (ಸಂಪೂರ್ಣ ಮಾಹಿತಿ ನೀಡುವುದು)

## ತೊಗರಿಬೆಲೆ ಕುಸಿತದಿಂದ ರೈತರ ಸಂಕಷ್ಟಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೩೦೬೮ (೩೬೩೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ, ಬೀದರ್ ಹಾಗೂ ಇತರೆ ಜಿಲ್ಲೆಗಳಲ್ಲಿ ತೊಗರಿ ಬೆಲೆ ಕುಸಿತದಿಂದ ರೈತರು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಮಾಹಿತಿ ನೀಡುವುದು)

(ಆ) ಸಂಕಷ್ಟ ನಿರ್ವಹಣೆಗೆ ಕಳೆದ ೨ ವರ್ಷಗಳಲ್ಲಿ ತೆರೆದ ದಾಸ್ತಾನು ಕೇಂದ್ರಗಳೆಷ್ಟು ; ರೈತರಿಂದ ತೊಗರಿ ಎಷ್ಟು ಕ್ವಿಂಟಲ್ ಖರೀದಿಸಲಾಗಿದೆ ; (ತಾಲ್ಲೂಕುವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಜಿಲ್ಲೆಗಳಲ್ಲಿ ಕಳೆದ ೨ ವರ್ಷಗಳಿಂದ ಬೆಳೆದ ತೊಗರಿ ಬೆಳೆ ಪ್ರಮಾಣವೆಷ್ಟು ; ಕ್ವಿಂಟಲ್‌ವಾರು ಹಾಗೂ ಎಕರೆವಾರು ಮಾಹಿತಿ ನೀಡುವುದು ;

(ಈ) ಪ್ರತಿ ಕ್ವಿಂಟಾಲ್ ತೊಗರಿ ಬೆಲೆಗೆ ನಿಗಧಿಪಡಿಸಿರುವ ಬೆಂಬಲ ಬೆಲೆ ಎಷ್ಟು ? (ಮಾಹಿತಿ ನೀಡುವುದು)

## ಕೃಷಿ ಮಹಾವಿದ್ಯಾಲಯಗಳು ಸ್ಥಾಪಿಸುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೩೦೬೯ (೩೬೩೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈಶಾನ್ಯ ಪದವೀಧರ ಕ್ಷೇತ್ರದ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಬಳ್ಳಾರಿ, ಕೊಪ್ಪಳ ಹಾಗೂ ಹರಪ್ಪನಹಳ್ಳಿಯಲ್ಲಿ ಕೃಷಿ ಮಹಾವಿದ್ಯಾಲಯಗಳು ಸ್ಥಾಪಿಸಲಾಗಿದೆಯೇ ; (ಇದ್ದರೆ, ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಮೇಲ್ಕಾಣಿಸಿದ ಈ ಶಾನ್ಯ ಜಿಲ್ಲೆಗಳಲ್ಲಿ ಕೃಷಿ ಮಹಾವಿದ್ಯಾಲಯ ಇಲ್ಲದೇ ಇರುವ ಜಿಲ್ಲೆಗಳು ಯಾವುವು ; ಈ ಸ್ಥಳಗಳಲ್ಲಿ ಕೃಷಿ ಮಹಾವಿದ್ಯಾಲಯ ಸ್ಥಾಪಿಸಲು ಸರ್ಕಾರ ಮುಂದಾಗುವುದೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕೃಷಿ ಮಹಾವಿದ್ಯಾಲಯ ಶೈಕ್ಷಣಿಕ ಕೋರ್ಸ್‌ಗಳ ಅಡಿಯಲ್ಲಿ ಕೊಯಿಲೋತ್ತರ ತಂತ್ರಜ್ಞಾನ ಅಳವಡಿಸಲು ಕ್ರಮ ಕೈಗೊಳ್ಳಲು ಇಲಾಖೆಯು ಮುಂದಾಗುವುದೇ ;

(ಈ) ಈಶಾನ್ಯ ಪದವೀಧರರ ಕ್ಷೇತ್ರದಲ್ಲಿ ಅರಣ್ಯ ಮಹಾವಿದ್ಯಾಲಯ, ಗ್ರಾಮೀಣ ಗೃಹ ಮಹಾವಿದ್ಯಾಲಯ ಸ್ಥಾಪಿಸಲಾಗಿದೆಯೇ ? (ಮಾಹಿತಿ ನೀಡುವುದು)

## ಕರ್ನಾಟಕ ಪಶು ವೈದ್ಯಕೀಯ ಹಾಗೂ ಮೀನುಗಾರಿಕೆ ವಿ.ವಿ.ಯ ಸ್ಥಿತಿಗತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೩೦೭೦ (೩೫೮೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಪಶು ವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವ ವಿದ್ಯಾಲಯ ಹೊಂದಿರುವ ವಿಭಾಗಗಳು ಯಾವುವು ; ರಾಜ್ಯಾದ್ಯಂತ ಹೊಂದಿರುವ ಈ ವಿ.ವಿ.ಯ ಕ್ಯಾಂಪಸ್‌ಗಳು ಎಷ್ಟು ಹಾಗೂ ಅಲ್ಲಿ ನಡೆಯುತ್ತಿರುವ ಕೋರ್ಸ್‌ಗಳು ಯಾವುವು ; (ವಿವರ ನೀಡುವುದು)

(ಆ) ಈ ವಿಶ್ವ ವಿದ್ಯಾಲಯ ಕುಲಪತಿ, ಕುಲಸಚಿವರ ಹಾಗೂ ಎಲ್ಲ ಆಡಳಿತಾತ್ಮಕ ಮುಖ್ಯಸ್ಥರ ಹುದ್ದೆ ಪೂರ್ಣಾವಧಿಯೋ ಅಥವಾ ಪ್ರಭಾರತ್ವದಲ್ಲಿ ನಡೆಯುತ್ತಿದೆಯೋ ಎಂಬುದರ ಮಾಹಿತಿ ಒದಗಿಸುವುದು ; ಎಲ್ಲ ಕ್ಯಾಂಪಸ್ ಮುಖ್ಯಸ್ಥರು ಪ್ರಭಾರ ಕಾರ್ಯಭಾರದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆಯೇ ; ಅಥವಾ ಪೂರ್ಣ ಕಾರ್ಯಭಾರದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆಯೇ ; (ಪ್ರತಿಯೊಂದರ ವಿವರ ನೀಡುವುದು)

(ಇ) ವಿಶ್ವ ವಿದ್ಯಾಲಯಕ್ಕೆ ಮಂಜೂರಾದ ಬೋಧಕ ಹಾಗೂ ಬೋಧಕೇತರರ ಹುದ್ದೆಗಳ ಸಂಖ್ಯೆ ಎಷ್ಟು; ಪ್ರಸ್ತುತ, ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ಹೆಸರು ಸಹಿತ ವಿವರ ನೀಡುವುದು) ಆ ಪೈಕಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು ಯಾವಾಗ ; (ಹುದ್ದೆವಾರು ವಿವರ ನೀಡುವುದು)

(ಈ) ಈ ವಿಶ್ವ ವಿದ್ಯಾಲಯದಲ್ಲಿ ಪ್ರಭಾರ ಕಾರ್ಯಭಾರ ಹೊಂದಿರುವ ಪ್ರತಿಯೊಂದು ವ್ಯಕ್ತಿ ಕಾರ್ಯ ನಿರ್ವಹಿಸತ್ತಿರುವ ಹುದ್ದೆ ಹಾಗೂ ಎಷ್ಟು ಸಮಯದಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ ಎನ್ನುವುದರ ಕುರಿತು ಸಂಪೂರ್ಣ ಮಾಹಿತಿ ನೀಡುವುದು ;

(ಉ) ಈ ವಿಶ್ವ ವಿದ್ಯಾಲಯಗೆ ಕಳೆದ ೩ ವರ್ಷಗಳಿಂದ ಒದಗಿಸಿದ ಅನುದಾನ, ಖರ್ಚಾದ ಅನುದಾನದ ವಿವರ ನೀಡುವುದು ? (ಪ್ರತಿಯೊಂದು ಕ್ಯಾಂಪಸ್‌ಗೆ ಬೇಕಾಗಿರುವ ಅಗತ್ಯ ಅನುದಾನ, ಒದಗಿಸಿದ ಅನುದಾನ ಹಾಗೂ ಖರ್ಚಾದ ಅನುದಾನದ ವಿವರ ಒದಗಿಸುವುದು)

## ಲೇವಾದೇವಿ ವ್ಯವಹಾರದಲ್ಲಿ ವಂಚನೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೭೧ (೩೬೦೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಲೇವಾದೇವಿ ವ್ಯವಹಾರ ಹೆಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ನೋಂದಣಿ ಇಲ್ಲದೆ ಬಡ್ಡಿ ವ್ಯವಹಾರ ಮಾಡುತ್ತಿರುವುದು ಮತ್ತು ಚೀಟಿ ಸಂಸ್ಥೆಗಳು ಮಹಿಳೆಯರನ್ನು ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರಾಜ್ಯದಲ್ಲಿ ಇಂತಹ ಎಷ್ಟು ಸಂಸ್ಥೆಗಳನ್ನು ಪತ್ತೆ ಹಚ್ಚಲಾಗಿದೆ ; ಅವುಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಇ) ಗಿರಿವಿದಾರರು ಬಡವರ ವಸ್ತುಗಳನ್ನು ಗಿರಿವಿ ಇಟ್ಟುಕೊಂಡು, ತದನಂತರ ಆ ವಸ್ತುಗಳನ್ನು ಬಿಡಿಸಿಕೊಳ್ಳಲು ಬಂದಾಗ ಗಿರವಿದಾರರು ಅವರ ವಸ್ತುಗಳನ್ನು ವಾಪಸ್ಸು ಬಡಜನರಿಗೆ ನೀಡದೆ ಬಡ ಜನರನ್ನು ವಂಚಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಕೈಗೊಂಡ ಕ್ರಮಗಳೇನು ?

## ಮಂಡ್ಯ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆ ಕೈಗೊಂಡ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೭೨ (೩೬೦೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಕಳೆದ ೪ ವರ್ಷಗಳಿಂದ ಲೋಕೋಪಯೋಗಿ ಇಲಾಖೆಯ ಅಡಿಯಲ್ಲಿ ಯಾವ ಯಾವ ಕಾಮಗಾರಿಗಳು ಕೈಗೆತ್ತಿಕೊಳ್ಳಲಾಗಿದೆ ; ಅವುಗಳಲ್ಲಿ ಪೂರ್ಣಗೊಂಡ ಮತ್ತು ಬಾಕಿ ಇರುವ ಕಾಮಗಾರಿಗಳೆಷ್ಟು ; (ತಾಲ್ಲೂಕುವಾರು ಪಂಚಾಯತಿವಾರು ವಿವರ ನೀಡುವುದು)

(ಆ) ಈ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ;

(ಇ) ಸದರಿ ಕಾಮಗಾರಿಗಳನ್ನು ಯಾವ ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ ? (ಪೂರ್ಣ ವಿವರ ನೀಡುವುದು)

## ಗುಬ್ಬಿ ರಸ್ತೆ ಕಾಮಗಾರಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೭೩ (೩೬೦೯) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯದಿಂದ ಗುಬ್ಬಿ ರಸ್ತೆ ಕಾಮಗಾರಿ ಮಂದಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸದರಿ ಕಾಮಗಾರಿಯನ್ನು ಯಾವಾಗ ಸಾರ್ವಜನಿಕರ ಅನುಕೂಲಕ್ಕೆ ಪೂರ್ಣಗೊಳಿಸಲಾಗುವುದು ?

## ಪಂಚಾಯಿತಿಗಳ ಮಟ್ಟದಲ್ಲಿ V.S.S.N ಸೊಸೈಟಿಗಳನ್ನು ಪ್ರಾರಂಭಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್ ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೭೪ (೩೫೬೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಪಂಚಾಯಿತಿಗಳ ಮಟ್ಟದಲ್ಲಿ V.S.S.N ಸಂಘಗಳನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ರಾಯಚೂರಿನಲ್ಲಿರುವ ಕೋ–ಆಪರೇಟಿವ್ ಸೊಸೈಟೀಸ್‌ನ ಡೆಪ್ಯೂಟಿ ರಿಜಿಸ್ಟ್ರಾರ್ (Deputy Registrar Office) ಕಛೇರಿ ಶಿಥಿಲಗೊಂಡಿದ್ದು ನೂತನ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯಲ್ಲಿರುವ ಲೋಕೋಪಯೋಗಿ ರಸ್ತೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್ ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೭೫ (೩೫೬೪) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಇತ್ತೀಚಿಗೆ ಸೆಪ್ಟೆಂಬರ್–ಅಕ್ಟೋಬರ್ ತಿಂಗಳಲ್ಲಿ ಹೆಚ್ಚು ಮಳೆಯಾಗಿರುವುದರಿಂದ ಹಾಳಾಗಿರುವ ಲೋಕೋಪಯೋಗಿ ರಸ್ತೆಗಳನ್ನು ದುರಸ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಮಾನ್ವಿ, ಸಿರವಾರ, ಹಾಗೂ ಕವಿತಾಳ ಪಟ್ಟಣ ಪ್ರದೇಶಗಳಲ್ಲಿ ರಸ್ತೆಗಳ ಅಭಿವೃದ್ಧಿ ಮಾಡಲು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ರಾಜ್ಯ ಹೆದ್ದಾರಿ–೨೦ ರಾಯಚೂರುನಿಂದ ಹುನಗುಂದಾವರವಿಗೂ ಹಾಗೂ ರಾಜ್ಯ ಹೆದ್ದಾರಿ–೨೩ ಕಲ್ಮಲೂ ಕ್ರಾಸ್‌ನಿಂದ ಸಿಂದನೂರ್ (ಬೂದಿಗುಂಪಾ ಕ್ರಾಸ್) ವರಗೂ ರಾಷ್ಟ್ರೀಯ ಹೆದ್ದಾರಿ (ಎನ್.ಹೆಚ್) ಆಗಿ ಪರಿವರ್ತಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಕೃಷ್ಣಾ ನದಿಯ ಮೇಲೆ ನೂತನ ಸೇತುವೆ ನಿರ್ಮಾಣ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಉ) ರಾಯಚೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ತುಂಗಾಭದ್ರ ಸೇತುವೆಯಿಂದ ಕೃಷ್ಣಾ ಸೇತುವೆವರೆಗೂ ರಾಷ್ಟ್ರೀಯ ಹೆದ್ದಾರಿಯ ಕಾಮಗಾರಿಯು ಯಾವ ಹಂತದಲ್ಲಿದೆ ; ನಿಗಧಿತ ಸಮಯದಲ್ಲಿ ಕಾಮಗಾರಿಯನ್ನು ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಪಶುಸಂಗೋಪನೆ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಎನ್.ಎಸ್.ಬೋಸ್ ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೭೬ (೩೫೬೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿರುವ ಪಶುಸಂಗೋಪನೆ ಇಲಾಖೆಯಲ್ಲಿರುವ ವಿವಿಧ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ೨೦೧೬–೧೭, ಹಾಗೂ ೨೦೧೭–೧೮ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ಪಶುಭಾಗ್ಯ ಯೋಜನೆಯಲ್ಲಿ ಸೌಲಭ್ಯ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; ಇದಕ್ಕೆ ಜಿಲ್ಲೆಗೆ ನೀಡಿರುವ ಅನುದಾನ ಎಷ್ಟು ?

## ಟೋಲ್ ರಸ್ತೆ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೩೦೭೭ (೩೫೯೦+೩೫೯೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ರಸ್ತೆ ಟೋಲ್‌ಗಳ ಸಂಖ್ಯೆ ಎಷ್ಟು; ಅವು ಯಾವುವು ;

(ಆ) ಇವುಗಳನ್ನು ಯಾವ ಸಂಸ್ಥೆಯವರು ನಿರ್ವಹಿಸುತ್ತಿದ್ದಾರೆ ; ಟೋಲ್‌ವಾರು ಮಾಹಿತಿ ನೀಡುವುದು ;

(ಇ) ಅಂಬುಲೆನ್ಸ್ ಮತ್ತು ವಿ.ಐ.ಪಿ ವಾಹನಗಳಿಗೆ ಪ್ರತ್ಯೇಕ ದ್ವಾರ ನಿರ್ಮಿಸಿದ್ದಾರೆಯೇ ;

(ಈ) ನಿರ್ಮಿಸಿದ್ದರೆ ಟೋಲ್‌ವಾರು ವಿವರವಾದ ಮಾಹಿತಿ ನೀಡುವುದು ;

(ಉ) ನಿರ್ಮಿಸದಿದ್ದರೆ ಯಾವಾಗ ನಿರ್ಮಿಸಲಾಗುವುದು ;

(ಊ) ಅಂಬುಲೆನ್ಸ್ ಮತ್ತು ವಿ.ಐ.ಪಿ ವಾಹನಗಳಿಗೆ ಇಲ್ಲಿಯವರೆಗೆ ಪ್ರತ್ಯೇಕ ದ್ವಾರ ನಿರ್ಮಿಸದೇ ಇರುವ ಸಂಸ್ಥೆಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ವಿವರವಾದ ಮಾಹಿತಿ ನೀಡುವುದು ;

(ಋ) ಟೋಲ್ ಸಂಸ್ಥೆಯವರು NHAI ನೊಂದಿಗೆ ಮಾಡಿಕೊಂಡ ಒಪ್ಪಂದವೇನು ; (ಮಾಹಿತಿ ನೀಡುವುದು)

(ೠ) ಒಪ್ಪಂದದಂತೆ ಸಂಸ್ಥೆಯವರು ರಸ್ತೆ ಹಾಗೂ ಸುರಕ್ಷತಾ ಕ್ರಮಗಳನ್ನು ಅಳವಡಿಸಿಕೊಂಡಿದ್ದಾರೆಯೇ ; (ಮಾಹಿತಿ ನೀಡುವುದು)

(ಎ) ಟೋಲ್ ಮಾಲೀಕರು ಅಲ್ಲಿ ಕನ್ನಡ ಮಾತನಾಡಲು ಬರದ ನೌಕರರನ್ನು ನಿಯೋಜಿಸಿರುವುದರಿಂದ ಟೋಲ್‌ನಲ್ಲಿ ಅಂಬುಲೆನ್ಸ್ ಮತ್ತು ವಿ.ಐ.ಪಿ. ವಾಹನಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ಮಳೆಯಿಂದ ರಸ್ತೆ ಹಾನಿಯಾಗಿರುವ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೭೮ (೩೫೫೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಕಳೆದ ಸೆಪ್ಟೆಂಬರ್–೧೭ ರಿಂದ ೨ ತಿಂಗಳು ಸುರಿದ ಮಳೆಯಿಂದ ರಸ್ತೆಗಳು ಮತ್ತು ಸಿ.ಡಿ.ಗಳು ಹಾನಿಗೀಡಾಗಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ತುರ್ತು ಕಾಮಗಾರಿಗಳನ್ನು ಯಾವಾಗ ಕೈಗೊಳ್ಳಲಾಗುವುದು ;

(ಇ) ಎಷ್ಟು ಗ್ರಾಮಗಳು, ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳಿಗೆ ಸಂಪರ್ಕ ಕಡಿತಗೊಂಡಿರುತ್ತದೆ ? (ತಾಲ್ಲೂಕುವಾರು ವಿವರ ನೀಡುವುದು)

## ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ರಸ್ತೆ ಕಾಮಗಾರಿ ಸ್ಥಗಿತಗೊಂಡ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೭೯ (೩೫೫೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ದೇವದುರ್ಗದಿಂದ ಗೂಗಲ್ ಮತ್ತು ಗೂಗಲ್ ನಿಂದ ಸುಂಕೇಶ್ವರಾಳ ರಸ್ತೆ ಕಾಮಗಾರಿ ವರ್ಷದಿಂದ ಸ್ಥಗಿತ ಆಗಿರುವುದು ನಿಜವೇ (Appendix-E) ;

(ಆ) ಕಾಮಗಾರಿಗಳು ಸ್ಥಗಿತಗೊಂಡು ಎರಡು ವರ್ಷಗಳು ಕಳೆದರೂ ಅದರ ನಿರ್ವಹಣೆ ಮಾಡುವವರ್ಯಾರು ;

(ಇ) ಈ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು ಯಾವಾಗ ?

# ವಿವಿಧ ಸಂಸ್ಥೆಗಳಿಂದ ಖರೀದಿಸಿದ ವಿದ್ಯುತ್ ಬಿಲ್ ಪಾವತಿಸುವ ಬಗ್ಗೆ

**ಶ್ರೀ ಬಸನಗೌಡ ಆರ್.ಪಾಟೀಲ್ (ಯತ್ನಾಳ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೮೦ (೩೫೭೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪, ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನವರೆಗೆ ಹೆಸ್ಕಾಂ, ಬೆಸ್ಕಾಂ, ಮೆಸ್ಕಾ, ಚೆಸ್ಕಾಂ ವಿದ್ಯುತ್ ಸರಬರಾಜು ಸಂಸ್ಥೆಗಳು ಯಾವ ಯಾವ ಸಂಸ್ಥೆಗಳಿಂದ ವಿದ್ಯುತನ್ನು ಖರೀದಿಸಿದೆ ; ವಿವರವಾದ ಮಾಹಿತಿ ನೀಡುವುದು ;

(ಆ) ಗ್ಲೋಬಲ್ ಎನರ್ಜಿ ಪ್ರೈ.ಲಿ., (ರಿ) ಕಂಪನಿ ಗೋವಾ ಇದರಿಂದ ಎಲ್ಲಾ ವಿದ್ಯುತ್ ಸರಬರಾಜು ಸಂಸ್ಥೆಗಳು ವಿದ್ಯುತ್ ಖರೀದಿಸಿದೆ ಎಂಬುದು ಸರಿಯೇ ; ಹಾಗಾದರೆ ಯಾವ ಯಾವ ಕಂಪನಿಗಳು ಎಷ್ಟೆಷ್ಟು ವಿದ್ಯುತ್ ಖರೀದಿಸಿದೆ ; (ಕಂಪನಿವಾರು ವಿವರವಾದ ಮಾಹಿತಿ ನೀಡುವುದು)

(ಇ) ಈ ಗ್ಲೋಬಲ್ ಎನರ್ಜಿ ಪ್ರೈ.ಲಿ., (ರಿ) ಕಂಪನಿ ಗೋವಾ ಮತ್ತು ಅನೇಕ ಸಕ್ಕರೆ ಕಾರ್ಖಾನೆಗಳಿಂದ ವಿದ್ಯುತ್ ಖರೀದಿಸಿ, ಆ ಸಕ್ಕರೆ ಕಾರ್ಖಾನೆಗಳಿಗೆ ವಿದ್ಯುತ್ ಬಿಲ್ಲನ್ನು ಸಮಯಕ್ಕೆ ಸರಿಯಾಗಿ ನೀಡಲ್ಲವೆಂಬ ಗಂಭೀರ ಆರೋಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಕಂಪನಿಯು ಸಕ್ಕರೆ ಕಾರ್ಖಾನೆಗಳಿಗೆ ವಿದ್ಯುತ್ ಬಿಲ್ ನೀಡದೇ ಇರುವುದರಿಂದ ಸಕ್ಕರೆ ಕಾರ್ಖಾನೆಗಳು ರೈತರ ಕಬ್ಬಿನ ಬಿಲ್ಲನ್ನು ಕೊಡದೇ ತೊಂದರೆ ಅನುಭವಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸಕ್ಕರೆ ಕಾರ್ಖಾನೆಗಳ ಬಿಲ್ಲನ್ನು ಕೂಡಲೇ ಪಾವತಿಸಿ ರೈತರ ಕಬ್ಬಿನ ಬಿಲ್ಲನ್ನು ಪಾವತಿಸುವ ಚಿಂತನೆ ಸರ್ಕಾರಕ್ಕಿದೆಯೇ ; ಇದ್ದರೆ ಸರ್ಕಾರವು ಯಾವ ಕಾಲಮಿತಿಯೊಳಗೆ ವಿದ್ಯುತ್ ಬಿಲ್ಲನ್ನು ಪಾವತಿಸುವುದು ? (ವಿವರವಾದ ಮಾಹಿತಿ ನೀಡುವುದು)

## ಕೃಷಿ ಭಾಗ್ಯ ಯೋಜನೆಯಡಿ ನಿರ್ಮಾಣಗೊಂಡ ಕೃಷಿ ಹೊಂಡಗಳ ಬಗ್ಗೆ.

**ಶ್ರೀ ಬಸನಗೌಡ ಆರ್.ಪಾಟೀಲ್ (ಯತ್ನಾಳ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೮೧ (೩೫೬೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿಭಾಗ್ಯ ಹಾಗೂ ಕೃಷಿ ಇಲಾಖೆಯ ವಿವಿಧ ಯೋಜನೆಯಡಿ ನಿರ್ಮಾಣಗೊಂಡ ಕೃಷಿ ಹೊಂಡಗಳೆಷ್ಟು ; (ಹೋಬಳಿವಾರು ವಿವರ ನೀಡುವುದು)

(ಆ) ಕೃಷಿಭಾಗ್ಯ ಯೋಜನೆಯಡಿ ನಿರ್ಮಾಣಗೊಂಡ ಕೃಷಿ ಹೊಂಡಗಳಲ್ಲಿ ಇಲ್ಲಿಯವರೆಗೆ ಶೇಖರಣೆಯಾದ ಮಳೆ ನೀರಿನ ಪ್ರಮಾಣವೆಷ್ಟು ; (ವಿವರವಾದ ಮಾಹಿತಿ ನೀಡುವುದು)

(ಇ) ಕೃಷಿಭಾಗ್ಯ ಯೋಜನೆಯಡಿ ನಿರ್ಮಾಣಗೊಂಡ ಕೃಷಿ ಹೊಂಡಗಳಲ್ಲಿ ಶೇಖರಣೆಗೊಂಡ ಉತ್ಪಾದನೆಯಲ್ಲಿ ಎಷ್ಟು ಪ್ರಮಾಣ ಹೆಚ್ಚಳವಾಗಿದೆ ? (ವಿವರವಾದ ಮಾಹಿತಿ ನೀಡುವುದು)

## ಸಹಕಾರ ಸಂಘಗಳಲ್ಲಿ ರೈತರು ಪಡೆದ ಸಾಲದ ಬಗ್ಗೆ

**ಶ್ರೀ ಬಸನಗೌಡ ಆರ್.ಪಾಟೀಲ್ (ಯತ್ನಾಳ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೮೨ (೩೫೬೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹಕಾರ ಸಂಘಗಳಲ್ಲಿ ಪಡೆದ ರೈತರ ಸಾಲ ಮನ್ನಾ ಮಾಡಿದ ಸರ್ಕಾರ ನಿಗಧಿಪಡಿಸಿದ ಮತ್ತು ಬಿಡುಗಡೆ ಮಾಡಿದ ಅನುದಾನ ಎಷ್ಟು ;

(ಆ) ಸಾಲ ಮನ್ನಾ ಪಡೆದ ರೈತ ಫಲಾನುಭವಿಗಳ ಸಂಖ್ಯೆ ಎಷ್ಟು ; ಇನ್ನೂ ಪಡೆಯಬೇಕಾದ ರೈತ ಫಲಾನುಭವಿಗಳು ಎಷ್ಟು ;

(ಇ) ಈ ಕುರಿತು ರೈತ ಫಲಾನುಭವಿಗಳಿಗೆ ಮಾಹಿತಿಯನ್ನು ಯಾವ ರೀತಿಯಾಗಿ ನೀಡಲಾಗಿದೆ ; ಎಲ್ಲಾ ಸಾಲ ಪಡೆದ ರೈತರಿಗೆ ಇದರ ಲಾಭವಾಗಿದೆಯೇ ;

(ಈ) ರಾಜ್ಯದ ರೈತರು ರಾಷ್ಟ್ರೀಕೃತ ಬ್ಯಾಂಕಿನಿಂದ ಕೃಷಿಗಾಗಿ ಪಡೆದ ಸಾಲವನ್ನು ಮನ್ನಾ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಉ) ಸಹಕಾರ ಸಂಘದಿಂದ ಸಾಲವನ್ನು ಪಡೆಯದೇ ರಾಷ್ಟ್ರೀಕೃತ ಬ್ಯಾಂಕಿನಿಂದ ಸಾಲ ಪಡೆದ ಫಲಾನುಭವಿ ಇದರಿಂದ ವಂಚಿತನಾಗುವುದಿಲ್ಲವೇ ? (ವಿವರವಾದ ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ದೇವಸ್ಥಾನಗಳ ಪುನರುತ್ಥಾನದ/ಜೀರ್ಣೋದ್ಧಾರದ ಕಾಮಗಾರಿಗಳ ಬಗ್ಗೆ.

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೮೩ (೩೫೮೧+೩೬೦೫) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ರಾಜ್ಯ ಧಾರ್ಮಿಕ ದತ್ತಿ ಇಲಾಖೆಯ ಅಧೀನದಲ್ಲಿರುವ "ಎ" ಶ್ರೇಣಿ ದೇವಾಲಯಗಳಲ್ಲಿ ದೇಣಿಗೆ/ ಕಾಣಿಕೆ ರೂಪದಲ್ಲಿ ಸಂಗ್ರಹವಾಗಿರುವ ಒಟ್ಟು ಹಣವೆಷ್ಟು ;

(ಆ) ಈ ರೀತಿ ಭಕ್ತಾದಿಗಳ ದೇಣಿಗೆಯಿಂದ ಸಂಗ್ರಹವಾದ ಹಣವನ್ನು ಯಾವ ಚಟುವಟಿಕೆಗಳಿಗೆ ಉಪಯೋಗಿಸಲಾಗಿದೆ ; (ವಿವರ ನೀಡುವುದು)

(ಇ) ಈ ರೀತಿ ಸಂಗ್ರಹವಾದ ದೇಣಿಗೆಯಿಂದ ರಾಜ್ಯದಲ್ಲಿರುವ ಬಡ ದೇವಸ್ಥಾನಗಳ ಪುನರುತ್ಥಾನದ/ಜೀರ್ಣೋದ್ಧಾರದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆಯೇ ; (ವಿವರ ನೀಡುವುದು)

(ಈ) ಧಾರ್ಮಿಕ ದತ್ತಿ ಇಲಾಖೆಯ ಅಧೀನದಲ್ಲಿರುವ ದೇವಸ್ಥಾನಗಳ ಅರ್ಚಕ ಸಿಬ್ಬಂದಿಗಳಿಗೆ ಯಾವ ಸೇವಾ ಸೌಲಭ್ಯಗಳನ್ನು ನೀಡಲಾಗುತ್ತದೆ ; (ವಿವರ ನೀಡುವುದು)

(ಉ) ದೇವಾಲಯಗಳಿಂದ ಸಂಗ್ರಹವಾಗುವ ಹಣವನ್ನು ಹೊರತುಪಡಿಸಿ ಕಳೆದ ೩ ವರ್ಷಗಳ ಆಯವ್ಯಯದಲ್ಲಿ ಇಲಾಖೆಗೆ ನೀಡಿರುವ ಅನುದಾನವೆಷ್ಟು ? (ವಿವರ ನೀಡುವುದು)

## ರಾಜ್ಯದ ಶಾಖೋತ್ಪನ್ನ ಕೇಂದ್ರಗಳಲ್ಲಿ ಬೇಕಾಗುವ ಕಲ್ಲಿದ್ದಲಿನ ಪ್ರಮಾಣದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೩೦೮೪ (೩೫೮೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಶಾಖೋತ್ಪನ್ನ ಕೇಂದ್ರಗಳಲ್ಲಿ ವರ್ಷಕ್ಕೆ ಬೇಕಾಗುವ ಕಲ್ಲಿದ್ದಲಿನ ಪ್ರಮಾಣವೆಷ್ಟು ;

(ಆ) ಈ ಕಲ್ಲಿದ್ದಲನ್ನು ಯಾವ ಯಾವ ಮೂಲಗಳಿಂದ ಖರೀದಿಸಲಾಗುತ್ತದೆ ;

(ಇ) ರಾಷ್ಟ್ರದಲ್ಲಿ ಕಲ್ಲಿದ್ದಲಿನ ಸಾಕಷ್ಟು ನಿಕ್ಷೇಪಗಳಿದ್ದರೂ ಹೊರ ದೇಶದಿಂದ ಆಮದು ಮಾಡಿಕೊಳ್ಳುವ ಪ್ರಕ್ರಿಯೆ ನಡೆದಿದೆಯೆಂದು ವರದಿಯಾಗಿದ್ದು, ಇದರ ಬಗ್ಗೆ ಸರ್ಕಾರದ ಸ್ಪಷ್ಟನೆ ಏನು ;

(ಈ) ಒಂದು ವೇಳೆ ಕಲ್ಲಿದ್ದಲನ್ನು ಆಮದು ಮಾಡಿಕೊಳ್ಳುವ ಅನಿವಾರ್ಯತೆ ಒದಗಿದ್ದಲ್ಲಿ, ಅದಕ್ಕೆ ಇರುವ ಮಾನದಂಡಗಳ ಬಗ್ಗೆ ವಿವರ ನೀಡುವುದು ?

# ಮಳೆಗಾಲದ ಸಂದರ್ಭದಲ್ಲಿ ಗಾಳಿ, ಮಳೆ ಬಂದರೂ ವಿದ್ಯುತ್ ಕಂಬಗಳು ಉರುಳುತ್ತಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೩೦೮೫ (೩೪೭೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಳೆಗಾಲದ ಸಂದರ್ಭದಲ್ಲಿ ಕನಿಷ್ಠ ಗಾಳಿ ಮಳೆ ಬಂದರೂ ವಿದ್ಯುತ್ ಕಂಬಗಳು ಧರೆಗೆ ಉರುಳಿ ಸಾವು ನೋವು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ;

(ಆ) ಮಳೆಗಾಲದಲ್ಲಿ ವಿದ್ಯುತ್ ಕಂಬಗಳು ಸ್ವಲ್ಪ ಪ್ರಮಾಣದ ಗಾಳಿ, ಮಳೆ ಬಂದರು ಧರೆಗೆ ಉರುಳಲು ಕಾರಣವೇನು ;

(ಇ) ಸದರಿ ಅವಘಡಗಳನ್ನು ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಕಳೆದ ಒಂದು ವರ್ಷದಲ್ಲಿ ಈ ರೀತಿಯ ಅವಘಡಗಳಿಂದಾಗಿ ವಿದ್ಯುತ್ ತಂತಿಗಳ ಮೂಲಕ ಪ್ರವಹಿಸುವ ವಿದ್ಯುತ್ತಿನಿಂದಾಗಿ ಸಾವನ್ನಪ್ಪಿರುವ ಮತ್ತು ದೈಹಿಕ ಅಶಕ್ತಿ ಹೊಂದಿರುವ ಎಷ್ಟು ಘಟನೆಗಳು ವರದಿಯಾಗಿವೆ ; (ಜಾನುವಾರು ಸೇರಿ ವಿವರ ನೀಡುವುದು)

(ಉ) ಈ ರೀತಿ ಸಂಭವಿಸಿದ ಅವಘಡಗಳಲ್ಲಿ ಸಂತ್ರಸ್ತರಿಗೆ/ ಜಾನುವಾರುಗಳಿಗೆ ನೀಡಲು ಲಭ್ಯವಿರುವ ಪರಿಹಾರದ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೩೦೮೬ (೩೪೭೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ರೈತರ ಪೈಕಿ ಸಾಲ ಬಾಧೆಯಿಂದ ಹಾಗೂ ಬೆಳೆ ನಷ್ಟದಿಂದ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಆತ್ಮಹತ್ಯೆ ಮಾಡಿಕೊಂಡ ರೈತರಿಗೆ ಪರಿಹಾರ ವಿತರಿಸಿದ ಸಂಖ್ಯೆ ಎಷ್ಟು ; ಹಾಗೂ ಹಣ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಪರಿಹಾರ ನೀಡದೇ ಇರುವ ಪ್ರಕರಣಗಳೆಷ್ಟು ಹಾಗೂ ಕಾರಣಗಳೇನು ?

## ಕರ್ನಾಟಕ ವಿದ್ಯುತ್ ನಿಗಮದ ಬಗ್ಗೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೩೦೮೭ (೩೫೯೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ವಿದ್ಯುತ್ ನಿಗಮ ನಿಯಮಿತವನ್ನು ಯಾವಾಗ ಸ್ಥಾಪಿಸಲಾಯಿತು ; ಇದರ ದೇಯೋದ್ದೇಶಗಳೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಈ ನಿಗಮದ ಅಧೀನದಲ್ಲಿ ಎಷ್ಟು ವಿದ್ಯುತ್ ಉತ್ಪಾದನೆ ಮಾಡಲಾಗುತ್ತದೆ ; ಯೋಜನಾ ಪ್ರದೇಶಗಳಾವುವು ; (ವಿವರ ಮಾಹಿತಿ ನೀಡುವುದು)

(ಇ) ನಿಗಮದ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಹಾಲಿ ಭರ್ತಿ ಆಗಿರುವ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರವಾಗಿ ಹುದ್ದೆಯ ಪದನಾಮ ವೇತನ ಶ್ರೇಣಿ, ವಿದ್ಯಾರ್ಹತೆ, ಮತ್ತು ಆಯ್ಕೆಯ ವಿಧಾನಗಳು ಒಳಗೊಂಡಂತೆ ಮಾಹಿತಿ ಒದಗಿಸುವುದು)

(ಈ) ನಿಗಮವು ೨೦೦೧ ರಿಂದ ಇಲ್ಲಿಯವರೆಗೆ ಎಷ್ಟು ನೇಮಕಾತಿಗಳನ್ನು ಮಾಡಿಕೊಂಡಿರುತ್ತದೆ ; (ವರ್ಷವಾರು ಹುದ್ದೆಯ ಪದನಾಮ, ವೇತನ ಶ್ರೇಣಿ, ವಿದ್ಯಾರ್ಹತೆ, ಮತ್ತು ಸಂಖ್ಯೆಯೊಂದಿಗೆ ಮಾಹಿತಿ ಕೊಡುವುದು)

(ಉ) ಸದರಿ ನೇಮಕಾತಿಯಡಿ ಗ್ರಾಮೀಣ ಮೀಸಲಾತಿಯಡಿ ನೇಮಕಗೊಂಡ ಅಭ್ಯರ್ಥಿಗಳ ಸಂಖ್ಯೆ ಎಷ್ಟು ? (ವರ್ಷಾವಾರು ವಿವರವಾಗಿ ಮಾಹಿತಿ ಕೊಡುವುದು)

## ರೈತರಿಗೆ ಗುರುತಿನ ಪತ್ರ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೩೦೮೮ (೩೫೫೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿರುವ ಕೃಷಿ ಮಾರುಕಟ್ಟೆಗಳೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕೃಷಿ ಮಾರುಕಟ್ಟೆ ಸಮಿತಿಗಳಿಂದ ಎನ್.ಜಿ.ಓ ಗಳ ಸಹಯೋಗದೊಂದಿಗೆ ರೈತರಿಗೆ ಗುರುತಿನ ಪತ್ರ ನೀಡುತ್ತಿರುವುದು ನಿಜವೇ ;

(ಇ) ಹಾಗಾದರೆ ಒಂದು ಗುರುತಿನ ಪತ್ರಕ್ಕೆ ಸಮಿತಿಯವರು ಎನ್.ಜಿ.ಓ ಗಳಿಗೆ ನೀಡುತ್ತಿರುವ ಹಣ ಎಷ್ಟು ;

(ಈ) ಎನ್.ಜಿ.ಓ ದವರು ರೈತರಿಂದ ಒಂದು ಗುರುತಿನ ಪತ್ರದ ರಶೀದಿಗೆ ಹತ್ತು ರೂ. ತೆಗೆದುಕೊಳ್ಳುತ್ತಿರುವುದು ಸರಿಯೇ ;

(ಉ) ಒಡಂಬಡಿಕೆ ಮಾಡಿಕೊಂಡಿರುವ ಎನ್.ಜಿ.ಓ ಗಳು ಯಾವುವು ; ಇವುಗಳಿಗೆ ಈಗಾಗಲೇ ಸಮಿತಿಯವರು ಪಾವತಿ ಮಾಡಿರುವ ಹಣ ಎಷ್ಟು ? (ಜಿಲ್ಲಾ ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

## ತಿರುಮಲದಲ್ಲಿರುವ ಕರ್ನಾಟಕ ಭವನದ ಬಗ್ಗೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೩೦೯೮ (೩೫೫೨) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತಿರುಪತಿ ತಿರುಮಲದಲ್ಲಿ ಕರ್ನಾಟಕದ ಯಾತ್ರಿಗಳಿಗಾಗಿ ಭವನ ನಿರ್ಮಾಣ ಮಾಡುವ ಸಂಬಂಧ ಸರ್ಕಾರದ ಅಧೀನದಲ್ಲಿ ಎಷ್ಟು ಜಮೀನು ಇದೆ ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಜಮೀನಿನಲ್ಲಿ ಯಾತ್ರಿಗಳಿಗೆ ಉತ್ತಮವಾದ ಛತ್ರ/ಭವನ/ಯಾತ್ರಿ ನಿವಾಸಗಳನ್ನು ನಿರ್ಮಾಣ ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

(ಇ) ಈ ತೊಂದರೆಗಳನ್ನು ಯಾವ ಕಾಲಮಿತಿಯೊಳಗೆ ಪರಿಹರಿಸಲಾಗುವುದು ;

(ಈ) ಯಾವ ಕಾಲಮಿತಿಯೊಳಗೆ ಛತ್ರ/ಭವನ/ಯಾತ್ರಿ ನಿವಾಸಗಳನ್ನು ನಿರ್ಮಾಣ ಮಾಡಲಾಗುವುದು ; (ವಿವರವಾದ ಮಾಹಿತಿ ನೀಡುವುದು)

(ಉ) ಕರ್ನಾಟಕ ಭವನದಲ್ಲಿ ಹಾಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು ; ಅವರು ಪಡೆಯುತ್ತಿರುವ ವೇತನವೆಷ್ಟು ? (ಸಿಬ್ಬಂದಿ ಹೆಸರು, ಹುದ್ದೆಯ ಪದನಾಮ, ವಿದ್ಯಾರ್ಹತೆ, ವೇತನ ಶ್ರೇಣಿ ಹಾಗೂ ಗುತ್ತಿಗೆ ನೌಕರರ ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿನ VSSN ಗಳ ಲಾಭ ನಷ್ಟದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೩೨೯೦ (೩೪೫೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿರುವ ವ್ಯವಸಾಯ ಸೇವಾ ಸಹಕಾರಿ ನಿಯಮಿತ ಬ್ಯಾಂಕುಗಳ ಸಂಖ್ಯೆ (VSSN) ಎಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಇದರಲ್ಲಿ ಲಾಭದಲ್ಲಿರುವ ಮತ್ತು ನಷ್ಟದಲ್ಲಿರುವ (VSSN) ಬ್ಯಾಂಕುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ೨೦೦೧ ರಿಂದ ಇಲ್ಲಿಯುವರೆಗೆ ಗುಬ್ಬಿ ತಾಲ್ಲೂಕು, ಎಸ್. ಕೊಡಗೀಹಳ್ಳಿ ಗ್ರಾಮದ ವ್ಯವಸಾಯ ಸೇವಾ ಸಹಕಾರಿ ನಿಯಮಿತ ಬ್ಯಾಂಕಿನ ಲಾಭ ಮತ್ತು ನಷ್ಟದ ಮಾಹಿತಿ ನೀಡುವುದು; ನಷ್ಟದಲ್ಲಿರಲು ಕಾರಣಗಳೇನು;

(ಈ) ಈ VSSN ನಿಂದ ಎಷ್ಟು ಜನರಿಗೆ ಸಾಲ ನೀಡಲಾಗಿದೆ; (ವಿವರವಾಗಿ ಹೆಸರು, ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಉ) ಸಾಲ ಪಡೆದವರಲ್ಲಿ ಬಾಕಿ ಇರುವವರು ಮತ್ತು ಪೂರ್ತಿ ಪಾವತಿ ಮಾಡಿದವರು ಎಷ್ಟು; (ವಿವರವಾಗಿ ಹೆಸರು, ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಊ) ಎಸ್. ಕೊಡಗೀಹಳ್ಳಿ VSSN ಅಭಿವೃದ್ಧಿಗೆ ಸರ್ಕಾರ ಇಲ್ಲಿಯವರೆಗೆ ನೀಡಿರುವ ಸೌಲಭ್ಯಗಳೇನು? ( ವಿವರವಾಗಿ ಮಾಹಿತಿ ನೀಡುವುದು)

## ಹಾಪ್ ಕಾಮ್ಸ್‌ಗಳಲ್ಲಿ ಹಣ್ಣು/ತರಕಾರಿ ಬೆಲೆಪಟ್ಟಿ ಪ್ರದರ್ಶಿಸುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೯೧ (೩೬೧೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿರುವ ಅನೇಕ ಹಾಪ್ ಕಾಮ್ಸ್ ಮಳಿಗೆಗಳ ಮುಂದೆ ಹಣ್ಣು ಮತ್ತು ತರಕಾರಿಗಳ ಬೆಲೆ ಪಟ್ಟಿ ನಮೂದಿಸಿ ಬೋರ್ಡ್‌ಗಳನ್ನು ಹಾಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಹಿಂದೆ ಕಡ್ಡಾಯವಾಗಿ ಬೋರ್ಡುಗಳನ್ನು ಹಾಕಲು ಕ್ರಮ ಕೈಗೊಳ್ಳುವುದಾಗಿ ಸರ್ಕಾರ ಆಶ್ವಾಸನೆ ನೀಡಿದ್ದರೂ ಅದನ್ನು ಪರಿಣಾಮಕಾರಿಯಾಗಿ ಜಾರಿಗೆ ತರದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಇ) ಈ ನಿಟ್ಟಿನಲ್ಲಿ ಕಳೆದ ೨ ವರ್ಷಗಳಿಂದ ಎಷ್ಟು ಮಳಿಗೆಗಳನ್ನು ತಪಾಸಣೆ ನಡೆಸಿದ್ದಾರೆ; ತಪ್ಪಿತಸ್ಥ ನೌಕರರ ವಿರುದ್ಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ?

## ದೇವಾಲಯಗಳ ಅಭಿವೃದ್ಧಿಗೆ ಅನುದಾನ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೯೨ (೩೬೧೫) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿರುವ ಎಷ್ಟು ದೇವಾಲಯಗಳ ಜೀರ್ಣೋದ್ಧಾರಕ್ಕಾಗಿ ಅನುದಾನ ಮಂಜೂರು ಮಾಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಜಿಲ್ಲೆಗಳ ಅನೇಕ ದೇವಾಲಯಗಳ ಅಭಿವೃದ್ಧಿಗಾಗಿ ಅನುದಾನ ಕೋರಿ ಸರ್ಕಾರಕ್ಕೆ ಮನವಿಗಳನ್ನು ಸಲ್ಲಿಸಿದ್ದರೂ ಇನ್ನೂ ಮಂಜೂರಾಗದಿರುವುದು ಸರ್ಕಾರದ ಗಮನದಲ್ಲಿದೆಯೇ;

(ಇ) ಅನುದಾನ ನೀಡಿಕೆಯಲ್ಲಿ ವಿಳಂಬವಾಗುತ್ತಿರಲು ಕಾರಣಗಳೇನು; ಯಾವ ಕಾಲ ಮಿತಿಯೊಳಗೆ ಅನುದಾನವನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದು?

## ಶಿರಾಡಿ ಘಾಟ್‌ನಲ್ಲಿ ಕಾಮಗಾರಿಗಳು ಪ್ರಾರಂಭಗೊಳ್ಳದೆ ಇರುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೦೯೩ (೩೫೮೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿರಾಡಿ ಘಾಟ್ ೨ನೇ ಹಂತದ ಕಾಮಗಾರಿ ಪ್ರಾರಂಭಗೊಳ್ಳದೆ ಇರಲು ಕಾರಣಗಳೇನು; ಕಾಮಗಾರಿ ಪ್ರಾರಂಭಿಸಲು ಇಲಾಖೆಗೆ ಇರುವ ತೊಂದರೆಗಳೇನು; (ವಿವರ ಒದಗಿಸುವುದು)

(ಆ) ೨ನೇ ಹಂತದ ಕಾಮಗಾರಿ ಕೈಗೊಳ್ಳದೆ ರಸ್ತೆಗಳು ದುರಸ್ಥಿಯಲ್ಲಿರುವುದು ಇಲಾಖೆಯ ಗಮನದಲ್ಲಿದೆಯೇ;

(ಇ) ೨ನೇ ಹಂತದ ಕಾಮಗಾರಿ ಪ್ರಾರಂಭಗೊಂಡರೆ ಬದಲಿ ರಸ್ತೆ ಒದಗಿಸಲಾಗುವುದೇ; (ವಿವರ ಒದಗಿಸುವುದು)

(ಈ) ಶಿರಾಡಿ ಘಾಟಿನ ಸುರಂಗ ಮಾರ್ಗದ ಪ್ರಸ್ತಾವನೆ ಯಾವ ಹಂತದಲ್ಲಿದೆ? (ವಿವರ ಒದಗಿಸುವುದು)

## ರಾಜ್ಯದಲ್ಲಿ ಸೋಲಾರ್ ವಿದ್ಯುತ್ ಉತ್ಪಾದನೆಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೦೯೪ (೩೫೮೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಉತ್ಪಾದನೆ ಆಗುವ ಸೋಲಾರ್ ವಿದ್ಯುತ್ ಎಷ್ಟು; ಯಾವ ದರದಲ್ಲಿ ವಿದ್ಯುತ್‌ನ್ನು ಖರೀದಿ ಮಾಡಲಾಗುತ್ತಿದೆ; (ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಸೋಲಾರ್ ರೂಫ್ ಟಾಪ್ (ಸೋಲಾರ್ ಮೇಲ್ಚಾವಣಿ ಘಟಕ) ಘಟಕಗಳನ್ನು ಅಳವಡಿಸಲಾಗಿದೆ; ಎಷ್ಟು ವಿದ್ಯುತ್‌ನ್ನು ಉತ್ಪಾದಿಸಲಾಗುತ್ತಿದೆ;

(ಇ) ಯಾವ ದರದಲ್ಲಿ ವಿದ್ಯುತ್‌ನ್ನು ಖರೀದಿಸಲಾಗುತ್ತಿದೆ; ರೂಫ್ ಟಾಪ್ ಅಳವಡಿಸಿದವರಿಗೆ ಸಬ್ಸಿಡಿ ನೀಡಲಾಗುತ್ತಿಲ್ಲವೆಂಬ ದೂರು ಸರಿಯೇ; ರಾಜ್ಯ ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು;

(ಈ) ಸೋಲಾರ್ ವಿದ್ಯುತ್ ಉತ್ಪಾದನೆಯಲ್ಲಿ ಸೋಲಾರ್ ಘಟಕಗಳನ್ನು ಅಳವಡಿಸಲು ರಾಜ್ಯ ಸರ್ಕಾರ ಒದಗಿಸುವ ಪ್ರೋತ್ಸಾಹ ಏನು? (ವಿವರ ಒದಗಿಸುವುದು)

## ರಾಜ್ಯದಲ್ಲಿರುವ ರೈತರುಗಳ ಆತ್ಮಹತ್ಯೆಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೦೯೫ (೩೫೮೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೪ರಿಂದ ೨೦೧೭ರವರೆಗೆ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಆತ್ಮಹತ್ಯೆ ಮಾಡಿಕೊಂಡ ರೈತರಿಗೆ ಯಾವ ಮಾನದಂಡದಲ್ಲಿ ಪರಿಹಾರ ಒದಗಿಸಲಾಗಿದೆ; ನೀಡಿದ ಪರಿಹಾರ ಮೊತ್ತವೆಷ್ಟು; (ಪರಿಹಾರದ ವಿವರ ಒದಗಿಸುವುದು)

(ಇ) ಪರಿಹಾರ ನೀಡಲು ಬಾಕಿಯಿರುವ ರೈತರಿಗೆ ಎಂದು ಪರಿಹಾರಧನವನ್ನು ವಿತರಿಸಲಾಗುವುದು; (ವಿವರ ಒದಗಿಸುವುದು)

(ಈ) ರೈತರ ಆತ್ಮಹತ್ಯೆ ತಡೆಯಲು ಇಲಾಖೆ ಮುಂದಿರುವ ಪ್ರಸ್ತಾವನೆಗಳಾವುವು; ಆತ್ಮಹತ್ಯೆಗೆ ಕಾರಣಗಳಾವುವು? (ವಿವರ ಒದಗಿಸುವುದು)

## ಅಡಿಕೆ ಬೆಳೆಗಾರರು ಎದುರಿಸುತ್ತಿರುವ ತೊಂದರೆಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೧೯೬ (೩೫೮೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಡಿಕೆ ಮಂಡಳಿ ರಚಿಸುವ ಬಗ್ಗೆ ಸರ್ಕಾರಕ್ಕೆ ಕೃಷಿ ವಿಶ್ವವಿದ್ಯಾಲಯವು ಶಿಫಾರಸ್ಸು ಮಾಡಿದ್ದು ಇದು ಯಾವ ಹಂತದಲ್ಲಿದೆ; ಮಂಡಳಿಯನ್ನು ರಚಿಸಲಾಗುವುದು ಯಾವಾಗ; (ವಿವರ ಒದಗಿಸುವುದು)

(ಆ) ಅಡಿಕೆ ಮಂಡಳಿ ರಚಿಸಲು ಇಲಾಖೆ ಎದುರಿಸುತ್ತಿರುವ ತೊಂದರೆಗಳೇನು; ರಾಜ್ಯದಲ್ಲಿ ಎಷ್ಟು ಹೆಕ್ಟೇರ್ ಅಡಿಕೆ ಬೆಳೆಯನ್ನು ಬೆಳೆಸಲಾಗುತ್ತಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಅಡಿಕೆ ಬೆಳೆಗಾರರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ನೀಡುತ್ತಿರುವ ಸವಲತ್ತುಗಳಾವುವು? (ವಿವರ ಒದಗಿಸುವುದು)

## ರಾಜ್ಯದಲ್ಲಿನ ರೈತರು ವಿವಿಧ ಬ್ಯಾಂಕ್‌ಗಳಲ್ಲಿ ಪಡೆದ ಸಾಲಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೯೭೭ (೩೫೮೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ರೈತರು ಪಡೆದ ಒಟ್ಟು ಸಾಲವೆಷ್ಟು; ರಾಜ್ಯದ ಸಹಕಾರಿ ಬ್ಯಾಂಕಿನಿಂದ ಪಡೆದ ಸಾಲ ಎಷ್ಟು; ರಾಷ್ಟ್ರೀಕೃತ ಬ್ಯಾಂಕಿನಿಂದ ಪಡೆದ ಸಾಲ ಎಷ್ಟು; (ವಿವರ ಒದಗಿಸುವುದು)

(ಆ) ರಾಜ್ಯ ಸರ್ಕಾರ ಸಾಲ ಮನ್ನಾ ಮಾಡಿದ ರೈತರ ಸಂಖ್ಯೆ ಎಷ್ಟು; ಯಾವ ಮಾನದಂಡದಲ್ಲಿ ಮನ್ನಾ ಮಾಡಲಾಗಿದೆ; (ವಿವರ ಒದಗಿಸುವುದು)

(ಇ) ರೈತರಿಗೆ ರಾಜ್ಯ ಸರ್ಕಾರದಿಂದ ಸಿಗುವ ಸವಲತ್ತುಗಳು ಯಾವುವು; ಆಯವ್ಯಯದಲ್ಲಿ ಇದಕ್ಕಾಗಿ ಒದಗಿಸಿದ ಹಣದ ಮೊತ್ತವೆಷ್ಟು? (ವಿವರ ಒದಗಿಸುವುದು)

## ಕೃಷಿ ಇಲಾಖೆಗೆ ಸಂಬಂಧಿಸಿದ ಸರ್ಕಾರಿ ಯೋಜನೆ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೩೯೭೮ (೩೫೭೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಇಲಾಖೆಗೆ ಸಂಬಂಧಿಸಿದ ಯೋಜನೆಗಳು ಯಾವುವು; ಯಾವ ಯಾವ ಯೋಜನೆಗೆ ಎಷ್ಟು ಸಹಾಯಧನವಿದೆ; ರೈತರಿಗೆ ಇರುವ ಸವಲತ್ತು ಯಾವುವು;

(ಆ) ಈ ಯೋಜನೆಗಳ ಬಗ್ಗೆ ರೈತರಿಗೆ ತಿಳಿಸಲು ಯಾವ ರೀತಿ ಪ್ರಚಾರ ನೀಡಲಾಗಿದೆ; ಪ್ರಚಾರದ ಕೊರತೆಯಿಂದ ಯೋಜನೆಗಳ ವಿವರ, ಸವಲತ್ತುಗಳ ಬಗ್ಗೆ ತಿಳಿಯದೇ ರೈತರು ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಕೈಗೊಳ್ಳುವ ಕ್ರಮವೇನು;

(ಇ) ಬಾಗಲಕೋಟೆ ಜಿಲ್ಲೆಯ ಬೀಳಗಿ ತಾಲ್ಲೂಕಿಗೆ ೩ ವರ್ಷಗಳಿಂದ ಸರ್ಕಾರದ ಸಹಾಯಧನ ಮತ್ತು ಯೋಜನೆಯಿಂದ ಯಾವ ಯಾವ ಸಲಕರಣೆಗಳನ್ನು ರೈತರಿಗೆ ವಿತರಿಸಲಾಗಿದೆ; ಈ ಸಹಾಯಧನದಿಂದ ಸಲಕರಣೆಗಳನ್ನು ಪಡೆದುಕೊಂಡ ರೈತ ಫಲಾನುಭವಿಗಳ ವಿವರ ನೀಡುವುದು?

## ಗಾಳಿ ವಿದ್ಯುತ್ ಯಂತ್ರಗಳ ಅಳವಡಿಕೆ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೩೦೯೯ (೩೫೭೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕಿನಲ್ಲಿ ಎಷ್ಟು ಗಾಳಿ ವಿದ್ಯುತ್ ಯಂತ್ರಗಳನ್ನು ಅಳವಡಿಸಲು ಉದ್ದೇಶಿಸಲಾಗಿದೆ; ಪ್ರಸ್ತುತ ಎಷ್ಟು ವಿದ್ಯುತ್ ಯಂತ್ರಗಳನ್ನು ಅಳವಡಿಸಲಾಗಿದೆ; (ವಿವರ ನೀಡುವುದು)

(ಆ) ಈ ಯೋಜನೆಯಿಂದ ಉತ್ಪಾದನೆಯಾಗಲಿರುವ ವಿದ್ಯುತ್ ಪ್ರಮಾಣ ಎಷ್ಟು; (ತಾಲ್ಲೂಕುವಾರು, ಸ್ಥಳವಾರು ವಿವರ ನೀಡುವುದು)

(ಇ) ಈ ಗಾಳಿ ವಿದ್ಯುತ್ ಯಂತ್ರವನ್ನು ಅಳವಡಿಸಲು ಪ್ರತಿ ಎಕರೆಗೆ ರೈತರಿಗೆ ನೀಡಿದ ಭೂ ಪರಿಹಾರ ಎಷ್ಟು? (ವಿವರ ನೀಡುವುದು)

## ಬಾಗಲಕೋಟೆ ನಗರದಲ್ಲಿ ಹೈಟೆಕ್ ಹಾಲಿನ ಡೈರಿ ಪ್ರಾರಂಭಿಸುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೩೧೦೦ (೩೫೭೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ–ಬಾಗಲಕೋಟೆ ಹಾಲು ಒಕ್ಕೂಟದ ವ್ಯಾಪ್ತಿಯಲ್ಲಿ ಬಾಗಲಕೋಟೆ ನವನಗರದಲ್ಲಿ ಹೈಟೆಕ್ ಹಾಲಿನ ಡೈರಿ ನಿರ್ಮಿಸುವ ವಿಚಾರ ಸರ್ಕಾರದ ಮುಂದಿದೆಯೇ; ನವನಗರ ಗ್ರೀನ್ ಫುಡ್ ಪಾರ್ಕ್‌ನಲ್ಲಿ ಡೈರಿ ನಿರ್ಮಾಣಕ್ಕೆ ಸ್ಥಳ ಒದಗಿಸಿದ ಬಗ್ಗೆ ಸರ್ಕಾರಕ್ಕೆ ಮಾಹಿತಿಯಿದೆಯೇ;

(ಆ) ಈ ಹೈಟೆಕ್ ಹಾಲಿನ ಡೈರಿ ನಿರ್ಮಾಣಕ್ಕೆ ಸರ್ಕಾರದಿಂದ ಮಂಜೂರಾದ ಅನುದಾನವೆಷ್ಟು;

(ಇ) ಈ ಕಾಮಗಾರಿ ಇನ್ನೂ ಪ್ರಾರಂಭವಾಗದೇ ಇರುವುದಕ್ಕೆ ಕಾರಣವೇನು;

(ಈ) ಈ ಕಾಮಗಾರಿಗೆ ಮಂಜೂರಾದ ಅನುದಾನ ಬೇರೆ ಕಡೆ ವರ್ಗಾವಣೆಯಾಗಿದೆಯೇ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು)

## ಕೃಷಿ ಮಹಾವಿದ್ಯಾಲಯ ಪ್ರಾರಂಭಿಸುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೩೧೦೧ (೩೫೭೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಕೃಷಿ ಮಹಾವಿದ್ಯಾಲಯಗಳ ಸಂಖ್ಯೆ ಎಷ್ಟು;

(ಆ) ಕೃಷಿ ವಿಶ್ವವಿದ್ಯಾಲಯ, ಧಾರವಾಡದ ವ್ಯಾಪ್ತಿಯಲ್ಲಿ ಬರುವ ಬಾಗಲಕೋಟೆ ಜಿಲ್ಲೆಯ ಮುಧೋಳನಗರದಲ್ಲಿ ಕೃಷಿ ಮಹಾವಿದ್ಯಾಲಯ ಸ್ಥಾಪಿಸಬೇಕೆಂದು ಕೂಗು ಸಾರ್ವಜನಿಕ ವಲಯದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಮುಧೋಳ ತಾಲ್ಲೂಕಿನ ಕೃಷಿ ಸಂಶೋಧನಾ ಕೇಂದ್ರದಲ್ಲಿ ಎಲ್ಲಾ ಅನುಕೂಲತೆಗಳಿದ್ದು ಸುಮಾರು ೫೦ ಎಕರೆ ಜಮೀನು ಇರುವುದರಿಂದ ಇಲ್ಲಿ ಕೃಷಿ ಮಹಾವಿದ್ಯಾಲಯ ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ; ಇದ್ದಲ್ಲಿ, ಯಾವಾಗ, ಪ್ರಾರಂಭಿಸಲಾಗುವುದು?

## ಅಮಾಸೆಬೈಲು ಗ್ರಾಮ ಪಂಚಾಯತ್ ಮಾದರಿಯಲ್ಲಿ ರಾಜ್ಯದಾದ್ಯಂತ ಸೋಲಾರೀಕರಣ ಯೋಜನೆ ಅನುಷ್ಠಾನಗೊಳಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೦೨ (೩೪೮೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ಅಮಾಸೆಬೈಲು ಗ್ರಾಮ ಪಂಚಾಯತ್‌ನಲ್ಲಿನ ಎಲ್ಲಾ ವಾಸ್ತವ್ಯದ ಮನೆಗಳು, ದಾರಿ ದೀಪ ವ್ಯವಸ್ಥೆಯೂ ಸೇರಿದಂತೆ, ಪೂರ್ಣ ಪ್ರಮಾಣದ ಸೋಲಾರ್ ಗ್ರಾಮವಾಗಿ ರೂಪಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ರಾಜ್ಯದ ಇತರೆ ಯಾವ ಗ್ರಾಮಗಳಲ್ಲಿ ಸಂಪೂರ್ಣ ಸೋಲಾರೀಕರಣ ಯೋಜನೆ ಅನುಷ್ಠಾನಗೊಳಿಸಲಾಗಿದೆ;

(ಆ) ಗ್ರಾಮ ಪಂಚಾಯತ್‌ನ ಸೋಲಾರೀಕರಣ ಯೋಜನೆಗೆ ಸರ್ಕಾರದ ಕೆ.ಆರ್.ಇ.ಡಿ.ಎಲ್. ನಿಗಮದಿಂದ ಬಿಡುಗಡೆಯಾಗಬೇಕಿರುವ ಅನುದಾನ ಬಾಕಿ ಉಳಿದಿದ್ದು, ಗ್ರಾಮಪಂಚಾಯತ್ ಸಂಕಷ್ಟದಲ್ಲಿದ್ದು, ಯಾವಾಗ ಅನುದಾನ ಬಿಡುಗಡೆ ಮಾಡಲಾಗುವುದು;

(ಇ) ಸ್ಥಳೀಯಾಡಳಿತ ಸಂಸ್ಥೆಯೊಂದು, ಸ್ವಯಂ ಪ್ರೇರಿತವಾಗಿ ಇಂಧನ ಉಳಿಸುವ ನಿಟ್ಟಿನಲ್ಲಿ ಅಪರೂಪದ ಕೆಲಸ ಮಾಡುವಾಗ ಸರ್ಕಾರ ಮತ್ತು ಇಲಾಖೆ ಯಾವ ರೀತಿಯಲ್ಲಿ ಸಹಕಾರ ನೀಡಲಿದೆ; ತೊಂದರೆ ನಿವಾರಣೆಗೆ ಯಾವ ಕ್ರಮ ಕೈಗೊಳ್ಳಲಿದೆ;

(ಈ) ಗ್ರಾಮ ಪಂಚಾಯತ್ ಮಾದರಿಯಾಗಿ ಸೋಲಾರೀ–ಕರಣಗೊಂಡಿದ್ದು, ಸದರಿ ಸೋಲಾರೀಕರಣವನ್ನು ರಾಜ್ಯ ವ್ಯಾಪ್ತಿಯಾಗಿ ಹಮ್ಮಿಕೊಂಡು ಅನುಷ್ಠಾನಿಸಲು ಸರ್ಕಾರ ಯೋಜನೆ ರೂಪಿಸುವ ಕುರಿತು ನಿಲುವೇನು; ಈ ಬಗ್ಗೆ ಸರ್ಕಾರ ಯಾವ ಹಂತದಲ್ಲಿ ಯಾವ ಕ್ರಮ ಕೈಗೊಳ್ಳಲಿದೆ?

## ಗಣಿಗಾರಿಕೆಯ ರಾಜಧನದಲ್ಲಿನ ಶೇ. ೨೫ ರಷ್ಟು ಗ್ರಾಮ ಪಂಚಾಯತ್‌ಗಳಿಗೆ ನೀಡದಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೦೩ (೩೫೫೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮರಳುಗಾರಿಕೆಯಿಂದ ವಸೂಲಾದ ರಾಜಧನದ ಶೇಕಡಾ ೨೫ರಷ್ಟನ್ನು ಸಂಬಂಧಪಟ್ಟ ಗ್ರಾಮ ಪಂಚಾಯತ್‌ಗಳಿಗೆ ಪಾವತಿಸದೇ ಕೋಟ್ಯಾಂತರ ರೂಪಾಯಿ ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಳೆದ ೫ ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯ ಮೂಲಕ ಮರಳುಗಾರಿಕೆ ಸಂಬಂಧ ವಸೂಲಾದ ರಾಜಧನದ ಒಟ್ಟು ಮೊತ್ತವೆಷ್ಟು; (ವರ್ಷಾವಾರು, ಜಿಲ್ಲಾವಾರು ವಿವರ ನೀಡುವುದು)

(ಇ) ಗ್ರಾಮ ಪಂಚಾಯತ್‌ಗಳಿಗೆ/ಸ್ಥಳೀಯ ಸಂಸ್ಥೆಗಳಿಗೆ ಪಾವತಿಸಲು ಬಾಕಿ ಇರುವ ಒಟ್ಟು ಮೊತ್ತವೆಷ್ಟು; (ವರ್ಷಾವಾರು, ಜಿಲ್ಲಾವಾರು ವಿವರ ನೀಡುವುದು)

(ಈ) ೩–೪ ವರ್ಷದಷ್ಟು ವಿಳಂಬಕ್ಕೆ ಕಾರಣಗಳೇನು; ವಿಳಂಬಕ್ಕೆ ಕಾರಣವಾದ ಅಧಿಕಾರಿಗಳಾರು; (ವಿವರ ನೀಡುವುದು)

(ಉ) ಗ್ರಾಮ ಪಂಚಾಯತ್‌ಗಳು ಸೇರಿದಂತೆ ಸ್ಥಳೀಯಾಡಳಿತ ಸಂಸ್ಥೆಗಳಿಗೆ ಪಾವತಿಸಲು ಬಾಕಿ ಇರುವ ರಾಜಧನದ ಮೊತ್ತವನ್ನು ಶೀಘ್ರವಾಗಿ ಬಿಡುಗಡೆ ಮಾಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ಸಂಪೂರ್ಣ ವಿವರ ನೀಡುವುದು)

## ಬಂದರು ಮತ್ತು ಜೆಟ್ಟಿ ನಿರ್ಮಾಣ ಕಾಮಗಾರಿ ಪ್ರಗತಿ ಕುಂಠಿತದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೦೪ (೩೪೮೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿಯ ಕಡಲ ತೀರದ ಕಡಲ್ಕೊರೆತ ಸಮಸ್ಯೆಗೆ ಶಾಶ್ವತ ಪರಿಹಾರದ ಕಾಮಗಾರಿಗಳ ಪ್ರಗತಿ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಪ್ರಸಕ್ತ ಪ್ರಗತಿಯಲ್ಲಿರುವ ಶಾಶ್ವತ ಕಡಲ್ಕೊರೆತ ತಡೆ ಕಾಮಗಾರಿಗಳು ಯಾವುವು; ಯೋಜನಾ ವೆಚ್ಚ, ಪ್ರಗತಿಯ ಹಂತ ಮತ್ತು ಕಾಮಗಾರಿ ನಿರ್ವಹಿಸುತ್ತಿರುವ ಸಂಸ್ಥೆಯ ವಿವರಗಳೇನು;

(ಆ) ಕಳೆದ ಮೂರು ವರ್ಷದಲ್ಲಿ ಉತ್ತರಕನ್ನಡ, ದಕ್ಷಿಣಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿ ಮಳೆಗಾಲದ ಅವಧಿಯ ತುರ್ತು ಕಡಲ್ಕೊರೆತ ತಡೆ ಕಾಮಗಾರಿಗೆ ಮಂಜೂರಾದ ಹಣವೆಷ್ಟು; ಕಳೆದ ೩ ವರ್ಷದಲ್ಲಿ ಕೈಗೆತ್ತಿಕೊಂಡ ತುರ್ತು ಕಡಲ್ಕೊರೆತ ಕಾಮಗಾರಿಗಳ ಬಿಲ್ಲು ಪಾವತಿಗೆ ಬಾಕಿ ಇದೆಯೇ; ಅದಕ್ಕೆ ಕಾರಣಗಳೇನು; (ಜಿಲ್ಲಾವಾರು ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಗೆ ಮಂಜೂರಾದ ಬಂದರು ಮತ್ತು ಜೆಟ್ಟಿ ಕಾಮಗಾರಿಗಳಾವುವು; ಪ್ರಗತಿಯ ವಿಳಂಬಕ್ಕೆ ಕಾರಣಗಳೇನು;

(ಈ) ವಿವಿಧ ಕಾಮಗಾರಿಗಳ ಅನುಷ್ಠಾನದಲ್ಲಿನ ವಿಳಂಬದ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು?

## ವಿದ್ಯುತ್ ಉತ್ಪಾದನಾ ಘಟಕಗಳು ಸ್ಥಳೀಯ ಸಂಸ್ಥೆಗಳಿಗೆ ಶುಲ್ಕ ಪಾವತಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೦೫ (೩೪೮೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಕಿರು ಜಲವಿದ್ಯುತ್ ಸ್ಥಾವರಗಳು ಯಾವುವು ; (ಖಾಸಗಿ ಜಲವಿದ್ಯುತ್ ಘಟಕಗಳೆಷ್ಟು) ಅವುಗಳಿಗೆ ಯಾವ ರೀತಿಯ ಅನುಮತಿ ನೀಡಲಾಗುತ್ತಿದೆ ; ಸರ್ಕಾರದಿಂದ ಯಾವ ರೀತಿಯ ರಿಯಾಯಿತಿಗಳನ್ನು ಒದಗಿಸಲಾಗುತ್ತಿದೆ ; ಅವುಗಳಿಂದ ಉತ್ಪತ್ತಿಯಾಗುವ ವಿದ್ಯುತ್ ಪ್ರಮಾಣವೆಷ್ಟು ;

(ಆ) ರಾಜ್ಯದಲ್ಲಿರುವ ಕಿರು/ಬೃಹತ್ ಸೌರ ವಿದ್ಯುತ್ ಅಂಡ್ ವಿಂಡ್ ಮಿಲ್ ಘಟಕಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ಅವುಗಳಿಗೆ ಯಾವ ರೀತಿಯ ಅನುಮತಿ ನೀಡಲಾಗುತ್ತಿದೆ ; ಸರ್ಕಾರದಿಂದ ಯಾವ ರೀತಿಯ ರಿಯಾಯಿತಿಗಳನ್ನು ಒದಗಿಸಲಾಗುತ್ತಿದೆ ; ಅವುಗಳಿಂದ ಉತ್ಪತ್ತಿಯಾಗುವ ವಿದ್ಯುತ್ ಪ್ರಮಾಣವೆಷ್ಟು ;

(ಇ) ಪ್ರಸಕ್ತ ಖಾಸಗಿ ಸಂಸ್ಥೆಗಳಿಂದ ಖರೀದಿಸುತ್ತಿರುವ ವಿದ್ಯುತ್‌ನ ಪ್ರಮಾಣ ಮತ್ತು ದರ ಎಷ್ಟು ;

(ಈ) ಕಿರು/ಬೃಹತ್ ಸೌರ ವಿದ್ಯುತ್ ಅಂಡ್ ವಿಂಡ್ ಮಿಲ್ ಘಟಕಗಳು, ವಿದ್ಯುತ್ ಸ್ಥಾವರಗಳ ಸ್ಥಾಪನೆಗೆ ಸ್ಥಳೀಯ ಸಂಸ್ಥೆಗಳ ಪರವಾನಿಗೆ ಅಗತ್ಯವೇ ; ಸ್ಥಳೀಯ ಸಂಸ್ಥೆಗಳಿಗೆ ಶುಲ್ಕ ಪಾವತಿಸುತ್ತಿವೆಯೇ ; ಸಿಎಸ್‌ಆರ್ ಫಂಡ್‌ಗಳನ್ನು ಕಾರ್ಯಚರಿಸುವ ಗ್ರಾಮ ಪಂಚಾಯತ್ ಅಭಿವೃದ್ಧಿಗೆ ವ್ಯಯ ಮಾಡಲಾಗುತ್ತಿದೆಯೇ ; ಇಲ್ಲವಾದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಿದೆ ? (ವಿವರ ನೀಡುವುದು)

## ಗೇರು ಅಭಿವೃದ್ಧಿ ಮಂಡಳಿಯನ್ನು ಪ್ರಾರಂಭಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೦೬ (೩೪೮೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆ ಇಲಾಖೆಯ ವ್ಯಾಪ್ತಿಗೆ 'ಕೃಷಿ ಭಾಗ್ಯ' ಯೋಜನೆಯನ್ನು ತರಲಾಗಿದೆಯೇ ; ಸದರಿ ಯೋಜನೆಯಡಿ ಯಾವ-ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; ಜಿಲ್ಲಾವಾರು ಗುರಿಗಳೇನು;

(ಆ) ಗೇರು ಅಭಿವೃದ್ಧಿ ಮಂಡಳಿಯನ್ನು ಪ್ರಾರಂಭಿಸಲಾಗಿದೆಯೇ ; ಹಾಗಿದ್ದಲ್ಲಿ, ಎಲ್ಲಿ-ಯಾವಾಗ ಪ್ರಾರಂಭಿಸಲಾಗುವುದು ;

(ಇ) ಗೇರು ಅಭಿವೃದ್ಧಿ ಮಂಡಳಿಯ ಮೂಲಕ ಅನುಷ್ಠಾನಗೊಳಿಸುವ ಕಾರ್ಯಕ್ರಮಗಳೇನು ;

(ಈ) ಕರಾವಳಿಯ ಜಿಲ್ಲೆಗಳಲ್ಲಿನ ಗೇರು ಬೆಳೆಗಳ ಮತ್ತು ಬೆಳೆಗಾರರಿಗೆ ಗೇರು ಅಭಿವೃದ್ಧಿ ಮಂಡಳಿಯ ಮೂಲಕ ಸಿಗುವ ಪ್ರಯೋಜನಗಳೇನು ? (ವಿವರ ನೀಡುವುದು)

## ರಾಷ್ಟ್ರೀಯ ಹೆದ್ದಾರಿ ೪ರ ಬಳಿ ಕ್ಯಾತಸಂದ್ರದ ಹತ್ತಿರ ಮೇಲ್ ಸೇತುವೆ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಬಿ.ಎಂ.ಎಲ್.ಕಾಂತರಾಜು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೧೦೭ (೩೪೯೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಷ್ಟ್ರೀಯ ಹೆದ್ದಾರಿ ೪ಕ್ಕೆ ಸೇರಿದಂತೆ ತುಮಕೂರು ನಗರ ಕ್ಯಾತಸಂದ್ರ ಬಳಿ ಸಾರ್ವಜನಿಕರು ರಸ್ತೆ ದಾಟಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ರಾಷ್ಟ್ರೀಯ ಹೆದ್ದಾರಿ ೪ಕ್ಕೆ ಹೊಂದಿಕೊಂಡಂತೆ, ಶ್ರೀ ಸಿದ್ಧಗಂಗಾ ಮಠವಿದ್ದು, ಈ ಮಠಕ್ಕೆ ದೇಶ ವಿದೇಶಗಳಿಂದ ಅತಿ ಗಣ್ಯಾತಿ ಗಣ್ಯ ವ್ಯಕ್ತಿಗಳು ಭೇಟಿ ನೀಡುತ್ತಿದ್ದು, ಮಠಕ್ಕೆ ಹೋಗಲು ಕ್ಯಾತಸಂದ್ರ ಜಂಕ್ಷನ್‌ನಲ್ಲಿ ರಸ್ತೆ ದಾಟುವುದು ಕಷ್ಟಕರವಾಗಿರುವುದರಿಂದ ಜಂಕ್ಷನ್– ಮಠಕ್ಕೆ ಸಂಪರ್ಕ ನೀಡುವ ೨ವೇ ಮಾರ್ಗದ ರೀತಿಯ ಮೇಲು ಸೇತುವೆ (ಫ್ಲೈಓವರ್) ನಿರ್ಮಾಣ ಮಾಡಲು ಸರ್ಕಾರ ಕೂಡಲೇ ಕ್ರಮ ತೆಗೆದುಕೊಳ್ಳುವುದೇ ;

(ಇ) ಕಳೆದ ಹತ್ತಾರು ವರ್ಷಗಳಿಂದ ಈ ಕ್ಯಾತಸಂದ್ರ ಜಂಕ್ಷನ್‌ನಲ್ಲಿ ಹಲವಾರು ಅಪಘಾತಗಳು ನಡೆದು ಸಾರ್ವಜನಿಕರು ಪ್ರಾಣ ಕಳೆದುಕೊಂಡಿರುವ ಉದಾಹರಣೆ ಇರುವುದರಿಂದ ಈ ಬಗ್ಗೆ ತಕ್ಷಣ ಒಂದು ವಿಸ್ತೃತ ಯೋಜನಾ ವರದಿ (ಡಿ.ಪಿ.ಆರ್) ಸಿದ್ದಪಡಿಸಿ ಕೂಡಲೇ ಕಾಮಗಾರಿ ಪ್ರಾರಂಭಿಸಲಾಗುವುದೇ ?

## ತುಮಕೂರು ಜಿಲ್ಲೆಯಲ್ಲಿರುವ ಬಗ್ಗೆ

**ಶ್ರೀ ಬಿ.ಎಂ.ಎಲ್.ಕಾಂತರಾಜು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೦೮ (೩೪೯೭) ಮಾನ್ಯ ಪಶುಸಂಗೋಪನಾ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯಲ್ಲಿ ಒಟ್ಟು ಎಷ್ಟು ರೇಷ್ಮೆ ಫಾರಂಗಳಿವೆ, ಈ ಫಾರಂಗಳ ಚಟುವಟಿಕೆಗಳಿಂದ ರೈತರಿಗೆ ಯಾವ ರೀತಿಯ ಅನುಕೂಲವಾಗುತ್ತಿದೆ ; (ವಿವರ ನೀಡುವುದು)

(ಆ) ರಾಜ್ಯದಲ್ಲಿಯೇ ತುಮಕೂರು ಜಿಲ್ಲೆ, ಪಾವಗಡ ತಾಲ್ಲೂಕು ಅತ್ಯಂತ ಉತ್ಕೃಷ್ಟ ರೇಷ್ಮೆ ಬೆಳೆಯನ್ನು ಬೆಳೆಯುತ್ತಿರುವ ರೈತರಿಗೆ ಕಳೆದ ಎರಡು ವರ್ಷಗಳಿಂದ ಒದಗಿಸಿರುವ ಸೌಲಭ್ಯಗಳೇನು ; (ವಿವರ ನೀಡುವುದು)

(ಇ) ತುಮಕೂರು ಜಿಲ್ಲೆಯಲ್ಲಿರುವ ಫಾರಂಗಳನ್ನು ಅಭಿವೃದ್ಧಿಪಡಿಸಲು ಕಳೆದ ಎರಡು ವರ್ಷದಲ್ಲಿ ಖರ್ಚು ಮಾಡಿರುವ ಹಣವೆಷ್ಟು, ಖರ್ಚು ಮಾಡಿದ ಹಣದಲ್ಲಿ ಯಾವ ಯಾವ ರೀತಿ ಅಭಿವೃದ್ಧಿ ಕಾಮಗಾರಿಗಳು ಮತ್ತು ಮೂಲಭೂತ ಸೌಕರ್ಯವನ್ನು ಕಲ್ಪಿಸಲಾಗಿದೆ ?

## ಕೃಷಿ ಮಾರುಕಟ್ಟೆ ಸಮಿತಿಗಳಿಗೆ ಮೂಲಸೌಕರ್ಯ ಒದಗಿಸುವ ಬಗ್ಗೆ

**ಶ್ರೀ ಬಿ.ಎಂ.ಎಲ್.ಕಾಂತರಾಜು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೯೯ (೩೪೯೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಕೃಷಿ ಮಾರುಕಟ್ಟೆ ಸಮಿತಿ ಮತ್ತು ಉಪ ಮಾರುಕಟ್ಟೆ ಸಮಿತಿಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲೆಯಲ್ಲಿರುವ ಕೃಷಿ ಮಾರುಕಟ್ಟೆ ಸಮಿತಿಗಳಲ್ಲಿ ಮೂಲ ಸೌಕರ್ಯಗಳಿಲ್ಲದೆ ರೈತರಿಗೆ ಮತ್ತು ವರ್ತಕರಿಗೆ ಆಗುತ್ತಿರುವ ಸಮಸ್ಯೆಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ತುಮಕೂರು ಜಿಲ್ಲಾ ಮಟ್ಟದ ಮಾರುಕಟ್ಟೆಯಲ್ಲೇ ಕನಿಷ್ಠ ಪಕ್ಷದ ಮೂಲ ಸೌಲಭ್ಯಗಳಾದ ಕುಡಿಯುವ ನೀರು, ಶೌಚಾಲಯದ ವ್ಯವಸ್ಥೆ, ರೈತರಿಗೆ ವಿಶ್ರಾಂತಿ ತಾಣಗಳ ವ್ಯವಸ್ಥೆ, ರಸ್ತೆಗಳೆಲ್ಲ ಗುಂಡಿ ಬಿದ್ದಿರುವುದು, ಅದಕ್ಕಿಂತ ಹೆಚ್ಚಾಗಿ ಸ್ವಚ್ಛತೆ ಇಲ್ಲದಿರುವ ಬಗ್ಗೆ ಇವುಗಳನ್ನು ಒದಗಿಸಲು ಸರ್ಕಾರ ತಕ್ಷಣವೇ ಕ್ರಮ ವಹಿಸುವುದೇ;

(ಉ) ರಾಜ್ಯದ ಎಷ್ಟು ಕೃಷಿ ಮಾರುಕಟ್ಟೆಗಳಲ್ಲಿ ಡಿಜಿಟಲ್ ತೂಕ ಯಂತ್ರವನ್ನು ಅಳವಡಿಸಲಾಗಿದೆ ಈ ಬಗ್ಗೆ ಜಿಲ್ಲಾವಾರು ಮಾಹಿತಿ ನೀಡುವುದು, ಹಾಗೆಯೇ ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ಮಾರುಕಟ್ಟೆಗಳಲ್ಲಿ ಡಿಜಿಟಲ್ ತೂಕ ಯಂತ್ರಗಳನ್ನು ಸ್ಥಾಪಿಸಲಾಗಿದೆ ? (ಮಾಹಿತಿ ನೀಡುವುದು)

## ೨೦೧೭–೧೮ನೇ ಸಾಲಿನಲ್ಲಿ ಬಿತ್ತನೆ ಆಗಿರುವ ಬಗ್ಗೆ

**ಶ್ರೀ ಬಿ.ಎಂ.ಎಲ್.ಕಾಂತರಾಜು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೧೦ (೩೪೯೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಲ್ಲಿ ಮಳೆ ಆಶ್ರಯದಲ್ಲಿ ಎಷ್ಟು ಎಕರೆ ಪ್ರದೇಶದಲ್ಲಿ ಯಾವ ಯಾವ ಬೆಳೆಗಳನ್ನು ಬಿತ್ತನೆ ಮಾಡಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬಿತ್ತನೆ ಮಾಡಿದ ಬೆಳೆ ಸಂಪೂರ್ಣವಾಗಿ ರೈತನ ಕೈಸೇರಲಿದೆಯೇ; ಇಲ್ಲದಿದ್ದಲ್ಲಿ, ಯಾವ ಯಾವ ಬೆಳೆಗಳು ಮಳೆ ಇಲ್ಲದೆ ಎಷ್ಟು ಎಕರೆಯಲ್ಲಿ ಬೆಳೆ ನಷ್ಟವಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಬಿತ್ತನೆ ಮಾಡಿ ಬೆಳೆ ಬಾರದಿದ್ದರಿಂದ ರೈತರಿಗೆ ಸರ್ಕಾರದಿಂದ ಬೆಳೆ ನಷ್ಟ ಪರಿಹಾರ ನೀಡಲಾಗುವುದೇ ; (ವಿವರ ನೀಡುವುದು)

(ಈ) ೨೦೧೬–೧೭ನೇ ಸಾಲಿನ ಬೆಳೆ ನಷ್ಟಕ್ಕೆ ವಿಮೆ ಮಾಡಿಸಿದ ರೈತರಿಗೆ ಸಂಪೂರ್ಣವಾಗಿ ವಿಮೆ ಹಣ ನೀಡಲಾಗಿದೆಯೇ ; ನೀಡಿದ್ದಲ್ಲಿ ಮತ್ತು ಬಾಕಿ ಇದ್ದಲ್ಲಿ, ಜಿಲ್ಲಾವಾರು ಮಾಹಿತಿ ನೀಡುವುದು ?

## ರಾಜ್ಯದಲ್ಲಿರುವ ತೋಟಗಾರಿಕೆ ಫಾರಂಗಳ ಬಗ್ಗೆ

**ಶ್ರೀ ಬಿ.ಎಂ.ಎಲ್.ಕಾಂತರಾಜು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೧೧ (೩೪೯೬) ಮಾನ್ಯ ಕೃಷಿ ಮಾರುಕಟ್ಟೆ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ತೋಟಗಾರಿಕೆ ಫಾರಂಗಳೆಷ್ಟು ಹಾಗೂ ಎಷ್ಟು ಎಕರೆ ಪ್ರದೇಶದಲ್ಲಿದೆ ;

(ಆ) ಈ ಫಾರಂಗಳ ನಿರ್ವಹಣೆ ಮಾಡಲು ಸರ್ಕಾರ ೨೦೧೬–೧೭ನೇ, ಮತ್ತು ೨೦೧೭–೧೮ನೇ ಸಾಲಿನಲ್ಲಿ ಎಷ್ಟು ಅನುದಾನವನ್ನು ನೀಡಿದೆ, ಇದರಲ್ಲಿ ಖರ್ಚು ಮಾಡಿರುವ ಹಣವೆಷ್ಟು; (ವಿವರ ನೀಡುವುದು)

(ಇ) ಈ ತೋಟಗಾರಿಕೆ ಫಾರಂಗಳಿಂದ ಕಳೆದ ಎರಡು ವರ್ಷಗಳಲ್ಲಿ ಸರ್ಕಾರಕ್ಕೆ ಬಂದಿರುವ ಆದಾಯವೆಷ್ಟು ; (ವಿವರ ನೀಡುವುದು)

(ಈ) ತುಮಕೂರು ಜಿಲ್ಲೆಯಲ್ಲಿರುವ ತೋಟಗಾರಿಕೆ ಫಾರಂಗಳೆಷ್ಟು ; ಎಷ್ಟು ಎಕರೆ ಪ್ರದೇಶದಲ್ಲಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಜಿಲ್ಲೆಯಲ್ಲಿರುವ ಫಾರಂಗಳನ್ನು ನಿರ್ವಹಣೆ ಮಾಡಲು ಕಳೆದ ಎರಡು ವರ್ಷದಲ್ಲಿ ಎಷ್ಟು ಹಣ ಖರ್ಚು ಮಾಡಲಾಗಿದೆ ಮತ್ತು ಈ ಫಾರಂಗಳಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು? (ವಿವರ ನೀಡುವುದು)

## ಸಹಕಾರ ಸಂಘಗಳಿಗೆ ಸಾಲದ ಮೊತ್ತ ತುಂಬದೆ ರೈತ ಸಂಕಷ್ಟಕ್ಕೆ ಸಿಲುಕಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೧೨ (೩೫೬೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ರಾಜ್ಯದ ರೈತರ ಸಾಲ ಮನ್ನಾ ಮಾಡಿ, ಸಹಕಾರ ಸಂಘಗಳಿಗೆ ಸಾಲದ ಮೊತ್ತ ತುಂಬದೇ ಸಹಕಾರ ಸಂಘಗಳು ತೀರಾ ಸಂಕಷ್ಟದಲ್ಲಿದ್ದು, ಅವು ರೈತರ ಹಿಂಗಾರು ಬೆಳೆಗೆ ಸಾಲ ನೀಡದೇ ರೈತರು ಕಂಗಾಲಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸಹಕಾರ ಸಂಘಗಳಿಗೆ ರೈತರ ಸಾಲದ ಮೊತ್ತ ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಯಾವ ಕಾಲಮಿತಿಯಲ್ಲಿ ಈ ಸಹಕಾರ ಸಂಘಗಳ ಸಾಲದ ಮೊತ್ತವನ್ನು ತುಂಬಲಾಗುವುದು ;

(ಇ) ಸಕಾಲದಲ್ಲಿ ರೈತರು ಬೀಜ, ಗೊಬ್ಬರ, ಕ್ರಿಮಿನಾಶಕಗಳನ್ನು ಕೊಳ್ಳಲು ಹಿಂಗಾರು ಬೆಳೆ ಸಾಲ ಸಿಗದೇ ದಿಕ್ಕೇ ತೋಚದಂತಾಗಿರುವ ರೈತರಿಗೆ ಸರ್ಕಾರವು ಯಾವ ರೀತಿಯ ಪ್ರೋತ್ಸಾಹ ನೀಡುವುದು? (ವಿವರ ನೀಡುವುದು)

## ಖಾದಿ ಪ್ಲಾಜಾ ನಿರ್ಮಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೧೩ (೩೫೩೯) ಮಾನ್ಯ ಜವಳಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಮಹಾನಗರದಲ್ಲಿ ಕೇಂದ್ರ ಸರ್ಕಾರದ ಸಹಯೋಗದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಖಾದಿ ಪ್ಲಾಜಾಗೆ ಸ್ಥಳ ಗುರುತಿಸುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಖಾದಿ ಪ್ಲಾಜಾ ನಿರ್ಮಿಸಲು ಈಗಾಗಲೇ ಸ್ಥಳ ಗುರುತಿಸಲಾಗಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ಸ್ಥಳಗಳನ್ನು ಗುರುತಿಸಲಾಗಿದೆ ;

(ಇ) ಈ ಖಾದಿ ಪ್ಲಾಜಾ ನಿರ್ಮಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕ್ರಮವಾಗಿ ಯಾವ ಅನುಪಾತದಲ್ಲಿ ಅನುದಾನ ವಿನಿಯೋಗಿಸುತ್ತವೆ ; ಮೀಸಲಿಟ್ಟಿರುವ ಅನುದಾನ ಎಷ್ಟು ;

(ಈ) ಬೆಳಗಾವಿ ಜಿಲ್ಲೆಯಲ್ಲಿರುವ ಒಟ್ಟು ಖಾದಿ ಸಂಸ್ಥೆಗಳೆಷ್ಟು ; ಮತ್ತು ವಾರ್ಷಿಕ ಖಾದಿ ಉತ್ಪನ್ನಗಳ ವಹಿವಾಟು ಎಷ್ಟು ? (ವಿವರ ನೀಡುವುದು)

## ರಾಜ್ಯದಲ್ಲಿ ರಾಷ್ಟ್ರೀಯ ಜಾನುವಾರು ಮಿಷನ್ ಯೋಜನೆಯು ವಿಫಲವಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೧೪ (೩೫೫೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರಾಷ್ಟ್ರೀಯ ಜಾನುವಾರು ಮಿಷನ್ ಯೋಜನೆಯು ಸಂಪೂರ್ಣ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರೈತರ ಪಾಲಿಗೆ ವರವಾಗಬೇಕಿದ್ದ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ "ರಾಷ್ಟ್ರೀಯ ಜಾನುವಾರು ಮಿಷನ್ ಯೋಜನೆ" ರಾಜ್ಯದಲ್ಲಿ ಸಂಪೂರ್ಣ ವಿಫಲವಾಗಲು ಕಾರಣಗಳೇನು ;

(ಇ) ಯಾವ ಕಾಲಮಿತಿಯಲ್ಲಿ ರಾಷ್ಟ್ರೀಯ ಜಾನುವಾರು ಮಿಷನ್ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುವುದು ; ಇದಕ್ಕಾಗಿ ಕೇಂದ್ರ ಸರ್ಕಾರ ರಾಜ್ಯ ಸರ್ಕಾರಕ್ಕೆ ನೀಡಿರುವ ಅನುದಾನವೆಷ್ಟು ;

(ಈ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ವಿದ್ಯುತ್ ಅವಘಡ, ಅಪಘಾತ, ಹಾವು ಕಡಿತ, ಮಾರಕ ಖಾಯಿಲೆ, ಕಾಲುಬಾಯಿ ರೋಗ, ಚಪ್ಪೆ ರೋಗ ಮುಂತಾದ ಕಾರಣಗಳಿಂದ ಮೃತಪಟ್ಟ ಜಾನುವಾರುಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

# ಸದನ ಸಮಿತಿಯಿಂದ ನೈಸ್ ಕಂಪನಿ ವಿರುದ್ಧದ ವರದಿಯು ಸಲ್ಲಿಕೆಯಾಗಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೧೫ (೩೫೫೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿ.ಎಂ.ಐ.ಸಿ. ಯೋಜನೆಯ ಅಕ್ರಮ ಆಪಾದನೆಗಳ ಸಂಬಂಧ, ರಚಿಸಿದ್ದ ಸದನ ಸಮಿತಿಯು ವರದಿಯು ಸರ್ಕಾರಕ್ಕೆ ಸಲ್ಲಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಸದನ ಸಮಿತಿಯ ವರದಿಯನ್ನಾಧರಿಸಿ ಕಂಪನಿಯ ವಿರುದ್ಧ ಸರ್ಕಾರವು ಕೈಗೊಂಡ ಕ್ರಮಗಳೇನು ;

(ಇ) ಸದರಿ ವರದಿಯ ಶಿಫಾರಸ್ಸಿನನ್ವಯ ಕಂಪನಿಯು ಈವರೆಗೆ ಅಕ್ರಮವಾಗಿ ಟೋಲ್ ವಸೂಲು ಮಾಡಿರುವ ೧,೩೫೦ ಕೋಟಿ ರೂಪಾಯಿ ಹಣವನ್ನು ವಾಪಸ್ಸು ವಸೂಲು ಮಾಡಲಾಗಿದೆಯೇ; ಮಾಡಲಾಗಿದ್ದಲ್ಲಿ, ವಸೂಲಾಗಿರುವ ಹಣ ಎಷ್ಟು; ಕಂಪನಿಯಿಂದ ಅಕ್ರಮವಾಗಿ ಸಂಗ್ರಹಿಸಿದ ಇನ್ನೂ ಎಷ್ಟು ಬಾಕಿ ಹಣ ವಸೂಲಾಗಬೇಕಾಗಿದೆ ; (ಸಂಪೂರ್ಣ ವಿವರ ಒದಗಿಸುವುದು)

(ಈ) ಕಂಪನಿಯು ಹೆಚ್ಚುವರಿಯಾಗಿ ತನ್ನ ವಶದಲ್ಲಿಟ್ಟುಕೊಂಡಿರುವ ೧೧,೬೬೦ ಎಕರೆ ಭೂಮಿಯನ್ನು ವಾಪಸ್ಸು ಪಡೆಯಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು ; ಸದರಿ ಪ್ರಕ್ರಿಯೆಯು ಯಾವ ಹಂತದಲ್ಲಿದೆ ? (ವಿವರ ನೀಡುವುದು)

## ಪಶುಸಂಗೋಪನೆ ಯೋಜನೆ ಅಡಿ ಫಲ ಪಡೆದ ಫಲಾನುಭವಿಗಳ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೧೧೬ (೩೬೨೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಪಶುಭಾಗ್ಯ ಯೋಜನೆ ಅಡಿ ಪ್ರಸಕ್ತ ಸಾಲಿನಲ್ಲಿ ಸ್ವೀಕೃತವಾಗಿರುವ ಅರ್ಜಿಗಳೆಷ್ಟು ; (ಫಲಾನುಭವಿಗಳ ವಿಳಾಸ ಸಹಿತ ವಿವರ ನೀಡುವುದು)

(ಆ) ಸರ್ಕಾರ ಪ್ರಸಕ್ತ ಸಾಲಿನಲ್ಲಿ ನಿಗಧಿ ಮಾಡಿದ ಗುರಿ ಎಷ್ಟು ;

(ಇ) ಹರಿಜನ, ಗಿರಿಜನರಿಗೆ ಎಷ್ಟು ನಿಗಧಿ ಮಾಡಲಾಗಿದೆ ; ಬಂದಿರುವ ಅರ್ಜಿ ಎಷ್ಟು ; ಯಾವುವು ;

(ಈ) ಅರ್ಜಿ ಸಲ್ಲಿಸಿರುವ ಎಲ್ಲಾ ಫಲಾನುಭವಿಗಳನ್ನು ಪ್ರಸಕ್ತ ಸಾಲಿನಲ್ಲಿ ಪರಿಗಣಿಸಲಾಗುವುದೆ ?

## ಸಹಕಾರಿ ಸಂಘಗಳ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೧೧೭ (೩೫೯೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಸಹಕಾರಿ ಸಂಘಗಳು ಎಷ್ಟು ; ಯಾವುವು ; (ವಿಳಾಸ ಸಮೇತ ವರದಿ ನೀಡುವುದು)

(ಆ) ಚಾಲ್ತಿಯಲ್ಲಿರುವ ಸಂಘಗಳು ಹಾಗೂ ಸ್ಥಗಿತವಾಗಿರುವ ಸಂಘಗಳ ವಿವರ ನೀಡುವುದು ;

(ಇ) ಸಂಘಗಳು ಸ್ಥಗಿತವಾಗಲು ಕಾರಣಗಳೇನು ; (ಪ್ರತಿ ಸಂಘದ ವಿವರ ನೀಡುವುದು)

(ಈ) ಇವುಗಳನ್ನು ಪುನಶ್ಚೇತನ ಮಾಡಲು ತೆಗೆದುಕೊಂಡ ಕ್ರಮಗಳೇನು?

## ಕಳೆದ ೫ ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯಿಂದ ತೆಗೆದುಕೊಂಡ ಯೋಜನೆ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೧೧೮ (೩೯೯) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಲ್ಲಿ ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ವಿವಿಧ ಯೋಜನೆಯಡಿ ತೆಗೆದುಕೊಂಡ ಕಾಮಗಾರಿಗಳು ಯಾವುವು; (ವಿವರ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ವಿವಿಧ ಯೋಜನೆ ಅಡಿ ತೆಗೆದುಕೊಂಡ ಕಾಮಗಾರಿಗಳು ಯಾವುವು ;

(ಇ) ಆ ಪೈಕಿ ಅಪೂರ್ಣ ಕಾಮಗಾರಿಗಳು ಯಾವುವು ; ಕಾರಣವೇನು; (ವಿವರ ನೀಡುವುದು)

(ಈ) ಈ ಕ್ಷೇತ್ರದಲ್ಲಿ ನೂತನವಾಗಿ ಪ್ರವಾಸಿ ಮಂದಿರ ನಿರ್ಮಾಣ ಮಾಡುವ ಬಗ್ಗೆ ಸರ್ಕಾರ ಉದ್ದೇಶಿಸಿದೆಯೇ ; ಇದಕ್ಕಾಗಿ ಸ್ಥಳವನ್ನು ಗುರುತಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಗುರುತಿಸಲಾಗುವುದು ?

## ನೇಕಾರರು ಮೂಲಭೂತ ಸೌಕರ್ಯದಿಂದ ವಂಚಿತರಾಗಿರುವ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೧೧೯ (೩೬೦೦) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಅತೀ ಹೆಚ್ಚು ನೇಕಾರರು ನೇಕಾರಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಹಲವಾರು ವರ್ಷಗಳಿಂದ ಜವಳಿ ಇಲಾಖೆಗೆ ಮೂಲಭೂತ ಸೌಕರ್ಯ ನೀಡಲು ಅನೇಕ ಬೇಡಿಕೆ ಇಟ್ಟಿದ್ದರೂ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಇ) ಕಳೆದ ೫ ವರ್ಷದಲ್ಲಿ ಬಡ ನೇಕಾರರಿಗೆ, ಕೂಲಿ ಕಾರ್ಮಿಕ ನೇಕಾರರಿಗೆ, ಅಸಂಘಟಿತ ನೇಕಾರರಿಗೆ ಕೈಗೊಂಡಿರುವ ಕಾರ್ಯಕ್ರಮಗಳೇನು ;

(ಈ) ಪ್ರಸಕ್ತ ಸಾಲಿನಲ್ಲಿ ತೆಗೆದುಕೊಂಡಿರುವ ಕಾರ್ಯಕ್ರಮಗಳೇನು ?

## ನೇಕಾರರು ವಿದ್ಯುತ್ ಸಂಪರ್ಕದಿಂದ ವಂಚಿತರಾಗಿರುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೧೨೦ (೩೫೪೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ವಿಧಾನ ಸಭಾ ಕ್ಷೇತ್ರದಲ್ಲಿ ಅತಿ ಹೆಚ್ಚು ನೇಕಾರರು ವಿದ್ಯುತ್ ಸಂಪರ್ಕ ಪಡೆದಿರುವರೆ ;

(ಆ) ಬಡ ನೇಕಾರರಿಗೆ ಸರ್ಕಾರ ಸಬ್ಸಿಡಿ ದರದಲ್ಲಿ ವಿದ್ಯುತ್ ನೀಡಲು ಎಂದಿನಿಂದ ಪ್ರಾರಂಭಿಸಿತು ;

(ಇ) ಈ ವಿಧಾನ ಸಭಾ ಕ್ಷೇತ್ರದಲ್ಲಿ ಸಬ್ಸಿಡಿ ದರದಲ್ಲಿ ವಿದ್ಯುತ್ ಪಡೆದು ನೇಕಾರಿಕೆ ಮಾಡುತ್ತಿರುವವರ ಸಂಖ್ಯೆ ಎಷ್ಟು;

(ಈ) ಸಬ್ಸಿಡಿ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು? (ಹೆಸರು, ವಿಳಾಸ ಸಹಿತ ವಿವರ ನೀಡುವುದು)

## ರಾಜ್ಯ ಧಾರ್ಮಿಕ ದತ್ತಿ ಇಲಾಖೆಯ ದೇವಾಲಯಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೧೨೧ (೩೪೬೭) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಿಂದ ರಾಜ್ಯ ಧಾರ್ಮಿಕ ದತ್ತಿ ಇಲಾಖೆ ಅಧೀನದಲ್ಲಿರುವ 'ಎ' ಶ್ರೇಣಿ ದೇವಾಲಯಗಳಲ್ಲಿ ದೇಣಿಗೆ ಕಾಣಿಕೆ ರೂಪದಲ್ಲಿ ಸಂಗ್ರಹವಾಗಿರುವ ಒಟ್ಟು ಹಣವೆಷ್ಟು; (ದೇವಸ್ಥಾನಗಳು ಹಾಗೂ ಸಂಗ್ರಹವಾದ ಮೊತ್ತದ ವಿವರ ನೀಡುವುದು)

(ಆ) ಈ ರೀತಿ ಭಕ್ತಾದಿಗಳ ದೇಣಿಗೆಯಿಂದ ಸಂಗ್ರಹವಾದ ಹಣವನ್ನು ಯಾವ ರೀತಿಯ ಚಟುವಟಿಕೆಗಳಿಗೆ ಉಪಯೋಗಿಸಲಾಗಿದೆ; (ವಿವರ ನೀಡುವುದು)

(ಇ) ಸಂಗ್ರಹವಾದ ದೇಣಿಗೆಯಿಂದ ರಾಜ್ಯದಲ್ಲಿರುವ ಬಡ ದೇವಸ್ಥಾನಗಳ ಪುನರುತ್ಥಾನದ / ಜೀರ್ಣೋದ್ಧಾರದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆಯೇ; (ವಿವರ ನೀಡುವುದು)

(ಈ) ಧಾಮಿಕ ದತ್ತಿ ಇಲಾಖೆಯ ಅಧೀನದಲ್ಲಿರುವ ದೇವಸ್ಥಾನಗಳ ಅರ್ಚಕ ಸಿಬ್ಬಂದಿಗಳಿಗೆ ಯಾವ ಸೇವಾ ಸೌಲಭ್ಯಗಳನ್ನು ನೀಡಲಾಗುತ್ತದೆ? (ವಿವರ ನೀಡುವುದು)

## ರಾಜ್ಯದಲ್ಲಿನ ಸೌರಶಕ್ತಿಯ ಸ್ಥಾವರಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೧೨೨ (೩೪೬೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸೌರಶಕ್ತಿ ಸ್ಥಾವರಗಳು ಎಲ್ಲೆಲ್ಲಿ ಸ್ಥಾಪಿತವಾಗಿವೆ ;

(ಆ) ಸೌರಶಕ್ತಿ ಉತ್ಪಾದನೆ ಬೇರೆ ವಿದ್ಯುತ್ ಉತ್ಪಾದನೆಗಿಂತ ಶೇಕಡಾವಾರು ಎಷ್ಟು ಲಾಭದಾಯಕ ;

(ಇ) ಸೌರಶಕ್ತಿ ವಿದ್ಯುತ್ ಉತ್ಪಾದನೆಗೆ ಸರ್ಕಾರ ನೀಡುವ ಉತ್ತೇಜನಕಾರಿ ಕಾರ್ಯಕ್ರಮಗಳೇನು ?

## ಕೃಷಿ ಭಾಗ್ಯ ಯೋಜನೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೧೨೩ (೩೪೯೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ ರೈತರ ಅಭಿವೃದ್ಧಿಗಾಗಿ “ಕೃಷಿ ಭಾಗ್ಯ” ಯೋಜನೆಯನ್ನು ಜಾರಿಗೆ ತಂದಿರುವುದು ನಿಜವೇ ;

(ಆ) ಹಾಗಿದ್ದರೆ, ಇದರಲ್ಲಿ ಯಾವ ಯಾವ ಯೋಜನೆಗಳನ್ನು ಸರ್ಕಾರ ಜಾರಿ ಮಾಡಿದೆ ;

(ಇ) ೨೦೧೩–೧೪ ರಿಂದ ಇದುವರೆವಿಗೆ ಈ ಯೋಜನೆಗಳಿಗೆ ಆಯವ್ಯಯದಲ್ಲಿ ನಿಗಧಿ ಮಾಡಿದ ಹಣ ಎಷ್ಟು ; ಖರ್ಚು ಮಾಡಿದ ಹಣ ಎಷ್ಟು ; ಫಲಾನುಭವಿಗಳ ಸಂಖ್ಯೆ ಎಷ್ಟು ; ಈ ಯೋಜನೆಗಳಿಗೆ ಕೇಂದ್ರ ಸರ್ಕಾರದ ಅನುದಾನ ಎಷ್ಟು; ರಾಜ್ಯ ಸರ್ಕಾರದ ಅನುದಾನ ಎಷ್ಟು ? (ಯೋಜನಾವಾರು, ವರ್ಷಾವಾರು ವಿವರ ನೀಡುವುದು)

## ರೈತರ ಅಲ್ಪಾವಧಿ ಬೆಳೆ ಸಾಲ ಮನ್ನಾ ಮಾಡಿರುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೧೨೪ (೩೪೯೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರ ರೈತರು ಸಹಕಾರ ಸಂಘ / ಸಹಕಾರ ಬ್ಯಾಂಕುಗಳಿಂದ ಪಡೆದಿರುವ ಅಲ್ಪಾವಧಿ ಬೆಳೆ ಸಾಲ ಮನ್ನಾ ಮಾಡುವ ಬಗ್ಗೆ ಘೋಷಣೆ ಮಾಡಿರುವುದು ನಿಜವೇ ;

(ಆ) ಹಾಗಿದ್ದರೆ, ರಾಜ್ಯ ಸರ್ಕಾರ ಇದುವರೆವಿಗೆ ಎಷ್ಟು ರೈತರ ಬೆಳೆ ಸಾಲ ಮನ್ನಾ ಮಾಡಿದೆ ; (ಜಿಲ್ಲಾವಾರು ಫಲಾನುಭವಿಗಳ ಸಂಖ್ಯೆ ಸಹಿತ ಮನ್ನಾ ಮಾಡಿದ ಹಣದ ಸಂಪೂರ್ಣ ವಿವರ ನೀಡುವುದು)

(ಇ) ಮನ್ನಾ ಮಾಡಿರುವ ಸಾಲವನ್ನು ಸರ್ಕಾರ ಸಹಕಾರ ಬ್ಯಾಂಕುಗಳಿಗೆ ಮರುಪಾವತಿ ಮಾಡಲಾಗಿದೆಯೇ ; ರೈತರಿಗೆ ಮನ್ನಾ ಮಾಡಿರುವ ಲಾಭ ತಲುಪಿದೆಯೇ ; ಮನ್ನಾ ಮಾಡಿರುವ ದಿನದಿಂದ ಇದುವರೆವಿಗೆ ಸರ್ಕಾರ ಎಷ್ಟು ಮರುಪಾವತಿ ಮಾಡಿದೆ ? (ವಿವರ ನೀಡುವುದು)

## ಸರ್ಕಾರಿ ಸ್ವಾಮ್ಯದ ಕೆಪಿಸಿಎಲ್ ಸಂಸ್ಥೆ ದಂಡ ಪಾವತಿಸಿರುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೧೨೫ (೩೪೯೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲ್‌ಗೇಟ್ ಹಗರಣದಲ್ಲಿ ಗೌರವಾನ್ವಿತ ಸುಪ್ರೀಂಕೋರ್ಟ್ ಒಪ್ಪಂದ ರದ್ದುಪಡಿಸಿದ ನಂತರ ವಿಧಿಸಿದ್ದ ದಂಡವನ್ನು ರಾಜ್ಯ ಸರ್ಕಾರಿ ಸ್ವಾಮ್ಯದ ಕೆಪಿಸಿಎಲ್ ಸಂಸ್ಥೆ ಪಾವತಿಸಿರುವುದು ನಿಜವೇ ;

(ಆ) ಹಾಗಿದ್ದರೆ, ಪಾವತಿ ಮಾಡಿದ ದಂಡದ ಮೊತ್ತ ಎಷ್ಟು ; ಕೆಪಿಸಿಎಲ್ ಸಂಸ್ಥೆ ಹಣ ಪಾವತಿಸಲು ಕಾರಣವೇನು ; ಸಂಪೂರ್ಣ ವಿವರ ನೀಡುವುದು ?

## ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೧೨೬ (೩೪೮೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ “ಪ್ರಧಾನ ಮಂತ್ರಿ ಫಸಲ್ ಭೀಮಾ (ವಿಮಾ) ಯೋಜನೆ” ಜಾರಿಯಲ್ಲಿರುವುದು ನಿಜವೇ ;

(ಆ) ಹಾಗಿದ್ದರೆ, ಈ ಯೋಜನೆಯ ಪ್ರಾರಂಭದಿಂದ ಈವರೆವಿಗಿನ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವರ್ಷಾವಾರು ವಿವರ ನೀಡುವುದು)

(ಇ) ಯೋಜನೆಯ ಸಂಪೂರ್ಣ ವಿವರ ನೀಡುವುದು ?

## ಲೋಕೋಪಯೋಗಿ ರಸ್ತೆಯ ಸುರಕ್ಷತೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೨೭ (೩೬೨೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ನಿರ್ಮಿಸಲಾದ ಮತ್ತು ನಿರ್ವಹಿಸುತ್ತಿರುವ ರಾಜ್ಯ ಹೆದ್ದಾರಿ, ಜಿಲ್ಲಾ ಮುಖ್ಯ ರಸ್ತೆ ಮತ್ತು ಇತರೆ ರಸ್ತೆಗಳ ಸಂಖ್ಯೆ ಮತ್ತು ಉದ್ದವೆಷ್ಟು ; (ರಸ್ತೆವಾರು ವಿವರ ನೀಡುವುದು)

(ಆ) ಕೋಟ್ಯಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ಈ ರಸ್ತೆಗಳನ್ನು ಇಲಾಖೆಯ ಅನುಮತಿಯನ್ನು ಪಡೆಯದೇ ಅಕ್ರಮವಾಗಿ ರಸ್ತೆಯನ್ನು ತುಂಡರಿಸಿ ವಿವಿಧ ಕಾಮಗಾರಿಯನ್ನು ನಡೆಸುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ;

(ಇ) ಹೌದಾದಲ್ಲಿ ಕಳೆದ ೩ ವರ್ಷಗಳಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು; ಇಲ್ಲವಾದಲ್ಲಿ ಅಕ್ರಮವಾಗಿ ರಸ್ತೆಯನ್ನು ತುಂಡರಿಸುವವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡುವ ಯೋಜನೆ ಸರಕಾರದ ಮುಂದಿದೆಯೇ ; ಮತ್ತು ಈ ಬಗ್ಗೆ ಕ್ರಮ ವಹಿಸದ ಅಧಿಕಾರಿಗಳ ವಿರುದ್ಧ ಸರಕಾರದ ಕ್ರಮವೇನು ;

(ಈ) ಕೋಟ್ಯಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ಲೋಕೋಪಯೋಗಿ ಇಲಾಖೆ ರಸ್ತೆಗಳ ಅಂಚಿನಲ್ಲಿ ಕುರುಚಲು ಗಿಡಗಳು ಬೆಳೆದು ಪಾದಚಾರಿಗಳು, ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ; ರಸ್ತೆ ಸುರಕ್ಷತೆಯ ದೃಷ್ಟಿಯಿಂದ ಸಾರ್ವಜನಿಕರ ಬೇಡಿಕೆಯ ಹೊರತಾಗಿಯು ಇಲಾಖೆಯು ಅಧಿಕಾರಿಗಳು ಸ್ಪಂದನೆ ನೀಡದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರಕಾರದ ಕ್ರಮವೇನು ?

## ಕೃಷಿ ಇಲಾಖೆಯ ಕಛೇರಿಗಳು ಮತ್ತು ತೆರವಾಗಿರುವ ಹುದ್ದೆಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೨೮ (೩೬೨೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ವಿವಿಧ ಕಡೆಗಳಲ್ಲಿ ಕೃಷಿ ಇಲಾಖೆಯ ಅಧೀನದಲ್ಲಿರುವ ಜಮೀನು ಮತ್ತು ಕಟ್ಟಡಗಳು ಯಾವುವು ;

ಅವುಗಳಲ್ಲಿ ಇಲಾಖೆಯಿಂದ ಸದ್ಬಳಕೆಯಾಗುತ್ತಿರುವ ಕಟ್ಟಡ ಮತ್ತು ಜಮೀನುಗಳು ಯಾವುವು ; ಬಳಕೆಯಾಗದ ಕಟ್ಟಡ ಮತ್ತು ಜಮೀನುಗಳು ಯಾವುವು ; (ಗ್ರಾಮವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಕೃಷಿ ಇಲಾಖೆಯ ವಿವಿಧ ಹಂತದ ಕಛೇರಿಗಳು ಯಾವುವು ; ಇವುಗಳಲ್ಲಿ ಮಂಜೂರಾದ ಮತ್ತು ತೆರವಿರುವ ಹುದ್ದೆಗಳೆಷ್ಟು ; (ಕಛೇರಿವಾರು, ಹುದ್ದೆವಾರು ವಿವರ ನೀಡುವುದು) ಕೊರತೆಯಿರುವ ಹುದ್ದೆಗಳನ್ನು ತುಂಬಲು ಸರಕಾರದ ಕ್ರಮವೇನು ;

(ಇ) ಇಲಾಖೆಯಲ್ಲಿ ಬಹಳಷ್ಟು ಹುದ್ದೆಗಳು ಖಾಲಿಯಿರುವುದರಿಂದ ಸರಕಾರದ ಕಾರ್ಯಕ್ರಮಗಳು ಜನಸಾಮಾನ್ಯರಿಗೆ ತಲುಪಲು ಸಮಸ್ಯೆಯಾಗಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ; ಹೌದಾದಲ್ಲಿ ಸರಕಾರದ ತುರ್ತು ಕ್ರಮವೇನು ?

## ತೋಟಗಾರಿಕಾ ಇಲಾಖೆಯ ಕಛೇರಿಗಳು ಮತ್ತು ತೆರವಾಗಿರುವ ಹುದ್ದೆಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೨೯ (೩೬೮೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ವಿವಿಧ ಕಡೆಗಳಲ್ಲಿ ತೋಟಗಾರಿಕಾ ಇಲಾಖೆಯ ಅಧೀನದಲ್ಲಿರುವ ಜಮೀನು ಮತ್ತು ಕಟ್ಟಡಗಳು ಯಾವುವು ; ಅವುಗಳಲ್ಲಿ ಸದ್ಬಳಕೆಯಾಗದ ಮತ್ತು ಸದ್ಬಳಕೆಯಾಗುತ್ತಿರುವ ಕಟ್ಟಡ ಮತ್ತು ಜಮೀನುಗಳಾವುವು ; (ಗ್ರಾಮವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ತೋಟಗಾರಿಕಾ ಇಲಾಖೆಯ ವಿವಿಧ ಹಂತದ ಕಛೇರಿಗಳು ಯಾವುವು ; ಇವುಗಳಲ್ಲಿ ಮಂಜೂರಾದ ಮತ್ತು

ತೆರವಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಕಛೇರಿವಾರು ಹುದ್ದೆವಾರು ವಿವರ ನೀಡುವುದು) ಕೊರತೆಯಿರುವ ಹುದ್ದೆಯನ್ನು ತುಂಬಲು ಸರ್ಕಾರದ ತುರ್ತು ಕ್ರಮವೇನು ;

(ಇ) ಇಲಾಖೆಯಲ್ಲಿ ಬಹಳಷ್ಟು ಹುದ್ದೆಗಳು ಖಾಲಿಯಿರುವುದರಿಂದ ಸರಕಾರದ ಕಾರ್ಯಕ್ರಮಗಳು ಜನಸಾಮಾನ್ಯರಿಗೆ ತಲುಪಲು ಸಮಸ್ಯೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೌದಾದಲ್ಲಿ ಸರ್ಕಾರದ ಕ್ರಮವೇನು ?

## ಉಡುಪಿ ಜಿಲ್ಲೆಯ ಕೃಷಿಯನ್ನು ಉತ್ತೇಜಿಸುವ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

೩೧೩೦ (೩೬೧೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ರೈತರಿಗೆ ಕೃಷಿ ಇಲಾಖೆಯಿಂದ ೨೦೧೭–೧೮ನೇ ಸಾಲಿನಲ್ಲಿ ನೀಡಲಾಗುತ್ತಿರುವ ಸವಲತ್ತುಗಳು ಯಾವುವು; ಇಲಾಖೆಯ ಕಾರ್ಯಕ್ರಮಗಳಾವುವು ;

(ಆ) ಯಾಂತ್ರಿಕ ಕೃಷಿಯು ಉತ್ತೇಜನಕ್ಕಾಗಿ ಇಲಾಖೆಯಿಂದ ನೀಡಲಾಗುತ್ತಿರುವ ಸವಲತ್ತುಗಳು ಯಾವುವು ; ರೈತರಿಗೆ ಸಕಾಲದಲ್ಲಿ ನಾಟಿಯಂತ್ರ ಕಟಾವು ಯಂತ್ರಗಳು ದೊರೆಯದೇ ಬೆಳೆ ಹಾನಿಯಾಗಿ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಪ್ರತಿ ಸಹಕಾರ ಸಂಘಗಳಲ್ಲಿ ಒಂದೊಂದು ನಾಟಿ ಯಂತ್ರ ಮತ್ತು ಕಟಾವು ಯಂತ್ರ ಒದಗಿಸುವ ಬಗ್ಗೆ ಸರ್ಕಾರದ ಕ್ರಮವೇನು ;

(ಇ) ಸಾವಯವ ಕೃಷಿಯ ಉತ್ತೇಜನಕ್ಕಾಗಿ ಸರ್ಕಾರದ ಕಾರ್ಯಕ್ರಮಗಳು ಯಾವುವು ; ಸಾವಯವ ಕೃಷಿಯ ಉತ್ತೇಜನಕ್ಕಾಗಿ ಇಲಾಖೆಯಿಂದ ರೈತರಿಗೆ ಮಾರುಕಟ್ಟೆಯ ಸೌಲಭ್ಯ ಒದಗಿಸಲಾಗಿದೆಯೇ; ಹೌದಾದಲ್ಲಿ ಮಾಹಿತಿ ನೀಡುವುದು ; ಇಲ್ಲವಾದಲ್ಲಿ ಈ ಬಗ್ಗೆ ಸರ್ಕಾರದ ಕ್ರಮವೇನು ?

## ತೆಂಗು ಮತ್ತು ಅಡಿಕೆ ಬೆಳೆಯುವ ರೈತರು ನಷ್ಟ ಅನುಭವಿಸುತ್ತಿರುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೩೧ (೩೫೬೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ನಾಲ್ಕು ವರ್ಷಗಳಲ್ಲಿ ಬರಗಾಲದಿಂದ ರಾಜ್ಯದಲ್ಲಿ "ತೆಂಗು ಮತ್ತು ಅಡಿಕೆ" ಬೆಳೆಗಳು ನಾಶವಾಗಿದ್ದು, ರೈತರು ನಷ್ಟ ಅನುಭವಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೆ;

(ಆ) ನಾಲ್ಕು ವರ್ಷಗಳಲ್ಲಿ ರಾಜ್ಯದಲ್ಲಿ ಒಟ್ಟು ಎಷ್ಟು ಹೆಕ್ಟೇರ್ ತೆಂಗು ಮತ್ತು ಅಡಿಕೆ ಬೆಳೆ ನಾಶವಾಗಿದೆ ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ನಾಲ್ಕು ವರ್ಷಗಳಲ್ಲಿ ರಾಜ್ಯದಲ್ಲಿ ಒಟ್ಟು ಎಷ್ಟು ಹೆಕ್ಟೇರ್ ತೆಂಗು ಮತ್ತು ಅಡಿಕೆ ಬೆಳೆಗಳ ಇಳುವರಿ ಕುಸಿದಿದೆ ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ನಷ್ಟ ಹೊಂದಿರುವ ರೈತರಿಗೆ ರಾಜ್ಯ ಸರ್ಕಾರದಿಂದ ಪರಿಹಾರ ನೀಡಲಾಗಿದೆಯೇ; ಈ ವಿಚಾರವಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ತೆಂಗು ಮತ್ತು ಅಡಿಕೆ ಬೆಳಗಾರರ ಅಭಿವೃದ್ಧಿಗಾಗಿ ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಅರ್ಚಕರಿಗೆ, ಮೌಲ್ವಿಗಳಿಗೆ, ಪಾದ್ರಿಗಳಿಗೆ ಮಾಸಿಕ ವೇತನ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೧೩೨ (೩೪೭೭) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಒಟ್ಟು ದೇವಾಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಈ ದೇವಾಲಯಗಳಿಂದ ವಾರ್ಷಿಕ ಸರ್ಕಾರಕ್ಕೆ ಬರುವ ಆದಾಯವೆಷ್ಟು ;

(ಇ) ವಾರ್ಷಿಕವಾಗಿ ಈ ದೇವಾಲಯಗಳ (ಮುಜರಾಯಿ) ಅಭಿವೃದ್ಧಿಗೆ ನೀಡುವ ಅನುದಾನವೆಷ್ಟು ;

(ಈ) ೨೦೧೬–೧೭ ನೇ ಸಾಲಿನ ರಾಜ್ಯದ ಮಸೀದಿ ಮತ್ತು ಚರ್ಚ್‌ಗಳ ಅಭಿವೃದ್ಧಿಗೆ ನೀಡಿರುವ ಅನುದಾನವೆಷ್ಟು; ಸ್ಪಷ್ಟ ಮಾಹಿತಿ ನೀಡುವುದು;

(ಉ) ಧಾರ್ಮಿಕ ದತ್ತಿ ಇಲಾಖೆಯಡಿ ಕೆಲಸ ನಿರ್ವಹಿಸುವ ಅರ್ಚಕರಿಗೆ ಹಾಗೂ ಮಸೀದಿಗಳಲ್ಲಿ ಕೆಲಸ ನಿರ್ವಹಿಸುವ ಮೌಲ್ವಿಗಳಿಗೆ / ಪಾದ್ರಿಗಳಿಗೆ ನೀಡುವ ಮಾಸಿಕ ವೇತನ ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಪಾಲಿಹೌಸ್ ನಿರ್ಮಾಣದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೧೩೩ (೩೪೭೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ೦೩ ವರ್ಷಗಳಲ್ಲಿ ಪಾಲಿಹೌಸ್ ನಿರ್ಮಾಣಕ್ಕೆ ಬಿಡುಗಡೆಯಾಗಿರುವ ಅನುದಾನವೆಷ್ಟು ; (ವಿವರ ಒದಗಿಸುವುದು)

(ಆ) ಒಟ್ಟು ಎಷ್ಟು ಪಾಲಿಹೌಸ್‌ಗಳನ್ನು ಬೀದರ್ ಜಿಲ್ಲೆಯಲ್ಲಿ ನಿರ್ಮಾಣ ಮಾಡಲಾಗಿದೆ ; (ತಾಲ್ಲೂಕುವಾರು, ವಿವರ ನೀಡುವುದು)

(ಇ) ಪಾಲಿಹೌಸ್ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಲು ಅನುಸರಿಸುವ ಮಾನದಂಡಗಳೇನು ?

## ಬೀದರ್ ಜಿಲ್ಲೆಯ ಲಘು ನೀರಾವರಿ ಯೋಜನೆ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೩೪ (೩೪೮೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ೦೩ ವರ್ಷಗಳ ಅವಧಿಯಲ್ಲಿ ಲಘು ನೀರಾವರಿ ಯೋಜನೆ ಅಡಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು; (ಯೋಜನಾವಾರು ಮಾಹಿತಿ ನೀಡುವುದು)

(ಆ) ರೈತರ ಎಷ್ಟು ಎಕರೆ ಜಮೀನನ್ನು ಹನಿ ನೀರಾವರಿಗೆ ಒಳಪಡಿಸಲಾಗಿದೆ; ಇದಕ್ಕಾಗಿ ಬಿಡುಗಡೆ ಮಾಡಲಾಗಿರುವ ಅನುದಾನ ಎಷ್ಟು ;

(ಇ) ಈ ಯೋಜನೆಗಾಗಿ ಅಗತ್ಯವಿರುವ ಅನುದಾನ ಎಷ್ಟು ; ಬಿಡುಗಡೆ ಮಾಡಲು ಬಾಕಿ ಇರುವ ಅನುದಾನವೆಷ್ಟು ; ಬಿಡುಗಡೆ ಮಾಡದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು ? (ವಿವರ ನೀಡುವುದು)

## ಪಶು ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಸಂಶೋಧನೆಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೩೫ (೩೪೭೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ಕಳೆದ ೧೦ ವರ್ಷಗಳಲ್ಲಿ ರೈತರಿಗೆ ಹಾಗೂ ಜನಸಾಮಾನ್ಯರಿಗೆ ಅನುಕೂಲವಾಗುವಂತಹ ಯಾವ ಯಾವ ಪ್ರಮುಖ ಸಂಶೋಧನೆಗಳು ನಡೆದಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಎಮ್ಮೆ ತಳಿ ಅಭಿವೃದ್ಧಿ ಕೇಂದ್ರವನ್ನು ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು ;

(ಇ) ಈ ವಿಶ್ವವಿದ್ಯಾಲಯಗಳಲ್ಲಿ ಯಾವ ಯಾವ ಯೋಜನೆಗಳಿಗೆ ಕಳೆದ ನಾಲ್ಕು ವರ್ಷಗಳಲ್ಲಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; (ವರ್ಷಾವಾರು, ಯೋಜನೆವಾರು ಸಂಪೂರ್ಣ ವಿವರ ನೀಡುವುದು)

(ಈ) ಕಳೆದ ನಾಲ್ಕು ವರ್ಷಗಳಲ್ಲಿ ಈ ವಿಶ್ವವಿದ್ಯಾಲಯಗಳ ಮೀನುಗಾರಿಕೆ ಯೋಜನೆಗಳಿಗೆ ಹಾಗೂ ಅಭಿವೃದ್ಧಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ? (ವರ್ಷಾವಾರು ಸಂಪೂರ್ಣ ವಿವರ ನೀಡುವುದು)

## ರಾಜ್ಯದ ಹಿಂದೂ ದೇವಾಲಯಗಳಿಗೆ " ವ್ಯವಸ್ಥಾಪನಾ ಸಮಿತಿ" ರಚಿಸಲು ಮುಂದಾಗಿರುವ ಅಸಮರ್ಪಕ ಕ್ರಮದ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೧೩೬ (೩೬೧೦) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಹಾಗೂ ಧರ್ಮಾದಾಯ ದತ್ತಿ ಅಧಿನಿಯಮ ೨೦೦೧ ಹಾಗೂ ೨೦೧೧ರ ಕಾನೂನು ಕುರಿತಂತೆ ಸುಪ್ರೀಂ ಕೋರ್ಟಿನಲ್ಲಿ ಮೊಕದ್ದಮೆ ಇರುವುದು ನಿಜವೇ; (ವಿವರ ನೀಡುವುದು)

(ಆ) ರಾಜ್ಯದ ಹಿಂದೂ ದೇವಾಲಯಗಳಿಗೆ ಸಂಬಂಧಪಟ್ಟಂತೆ ವ್ಯವಸ್ಥಾಪನಾ ಸಮಿತಿ ರಚಿಸಲು ಸರ್ಕಾರ ಮುಂದಾಗಿರುವುದು ನಿಜವೇ ;

(ಇ) ವ್ಯವಸ್ಥಾಪನಾ ಸಮಿತಿಯು ಮುಜರಾಯಿಗೆ ಸೇರಿದ ದೇವಾಲಯಗಳಿಗೆ ಮಾತ್ರ ಅನ್ವಯವಾಗುತ್ತದೆಯೇ ; ಅಥವಾ ರಾಜ್ಯದ ಎಲ್ಲಾ ದೇವಾಲಯಗಳಿಗೂ ಅನ್ವಯವಾಗುತ್ತದೆಯೇ ; (ವಿವರ ನೀಡುವುದು) ;

(ಈ) ವ್ಯವಸ್ಥಾಪನಾ ಸಮಿತಿ ರಚನೆ ಸಮಿತಿಯ ಸದಸ್ಯರ ಕುರಿತು ಹಾಗೂ ಕಾರ್ಯ ವ್ಯಾಪ್ತಿಯ ಕುರಿತು ವಿವರ ನೀಡುವುದು ;

(ಉ) ಮೇಲ್ಕಂಡ ಕಾನೂನು ಕುರಿತಂತೆ ಸುಪ್ರೀಂ ಕೋರ್ಟಿನಲ್ಲಿ ಮೊಕದ್ದಮೆ ಇರುವಾಗ ಈ ರೀತಿ ಸಮಿತಿ ರಚಿಸುವುದು ನ್ಯಾಯಾಂಗ ನಿಂದನೆಯಾಗುವುದಿಲ್ಲವೆ?

## ತೋಟಗಾರಿಕೆಯಲ್ಲಿ ಕೀಟಬಾಧೆ ತಪ್ಪಿಸಲು ಸುರಕ್ಷಿತವಾದ ಗಮ್ ಶೀಟ್ ಅಳವಡಿಕೆ ವಿಧಾನವನ್ನು ವ್ಯಾಪಕಗೊಳಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೩೧೩೭ (೩೬೧೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆ ಬೆಳೆಗಳಿಗೆ ಬರುವ ಕೀಟ ಬಾಧೆ ನಿಯಂತ್ರಿಸಲು, ಬೆಳೆಗಳ ಮಧ್ಯೆ ಗಮ್ ಶೀಟ್ (ಅಂಟಿನ ಗಾರ್ಡ್) ತೂಗುಬಿಡುವ ಪದ್ಧತಿಯಿಂದ ಕೀಟಗಳಿಗೆ ಕಡಿವಾಣ ಹಾಕಬಹುದು ಎನ್ನುವುದು ನಿಜವೇ ; (ಈ ಪದ್ಧತಿಯ ಕುರಿತು ವಿವರ ನೀಡುವುದು)

(ಆ) ಈ ರೀತಿ ಮಾಡುವುದರಿಂದ ಕೀಟ ನಿಯಂತ್ರಣಕ್ಕೆ ಲಕ್ಷಾಂತರ ರೂ. ವೆಚ್ಚದ ರಾಸಾಯನಿಕ ಸಿಂಪಡಣೆ ಪ್ರಮಾಣ ಕಡಿಮೆ–ಯಾಗುವುದಲ್ಲದೆ, ಭೂಮಿಯ ಆರೋಗ್ಯವನ್ನೂ ಕಾಪಾಡ–ಬಹುದೆನ್ನುವುದು ನಿಜವೇ ;

(ಇ) ಗಮ್ ಶೀಟ್ ತೂಗುಬಿಡುವ ಈ ಕ್ರಮವನ್ನು ರೈತರಿಗೆ ತಿಳಿಸಲು ಮತ್ತು ಹೆಚ್ಚು ಹೆಚ್ಚು ತೋಟಗಾರಿಕೆದಾರರು ಬಳಸುವಂತೆ ಮಾಡಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ?

## ಭಾರತದ ಹಸಿರು ಕ್ರಾಂತಿಯ ಪಿತಾಮಹ ಎಂ.ಎಸ್.ಸ್ವಾಮಿನಾಥನ್ ವರದಿಯ ಸಮರ್ಪಕ ಅನುಷ್ಠಾನದ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೧೩೮ (೩೬೨೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭಾರತದ ಹಸಿರು ಕ್ರಾಂತಿಯ ಪಿತಾಮಹ ಎಂ.ಎಸ್.ಸ್ವಾಮಿನಾಥನ್ ವರದಿಯ ಶಿಫಾರಸ್ಸುಗಳಾವುವು ; ಈ ಕುರಿತು ಸಂಕ್ಷಿಪ್ತ ವಿವರ ನೀಡುವುದು ;

(ಆ) ಕೃಷಿ ಕ್ಷೇತ್ರವನ್ನು ಸದೃಢಗೊಳಿಸಲು ಹಾಗೂ ರೈತರ ಆರ್ಥಿಕ ಪರಿಸ್ಥಿತಿಯನ್ನು ಅಭಿವೃದ್ಧಿ ಪಡಿಸಲು ಸ್ವಾಮಿನಾಥನ್‌ರವರ ವರದಿಯಲ್ಲಿರುವ ಪ್ರಮುಖ ಅಂಶಗಳು ಯಾವುವು ;

(ಇ) ಕಳೆದ ಮೂರು ವರ್ಷಗಳಿಂದ ಕೃಷಿ ಕ್ಷೇತ್ರದಲ್ಲಿ ಸ್ವಾಮಿನಾಥನ್ ವರದಿ ಸಲಹೆಗಳನ್ನು ಅನುಷ್ಠಾನಗೊಳಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ;

(ಈ) ಇನ್ನೂ ಯಾವ ಯಾವ ಸಲಹೆಗಳನ್ನು ಅನುಷ್ಠಾನಗೊಳಿಸಲು ಸರ್ಕಾರವು ಮುಂದಾಗಿದೆ ? (ವಿವರ ನೀಡುವುದು)

## ೨೦೧೫–೧೬ನೇ ಸಾಲಿನಿಂದಲೂ ಪಶುಭಾಗ್ಯ ಯೋಜನೆಯ ಅನುದಾನ ಸಂಪೂರ್ಣ ವಿನಿಯೋಗವಾಗದೆ ಇರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೩೧೩೯ (೩೬೨೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶು ಭಾಗ್ಯ ಯೋಜನೆ ಮತ್ತು ರೈತರಿಗೆ ಅದರಿಂದ ಉಂಟಾಗುವ ಪ್ರಯೋಜನದ ಬಗ್ಗೆ ವಿವರ ನೀಡುವುದು ;

(ಆ) ೨೦೧೫–೧೬ನೇ ಸಾಲಿನಿಂದ ಈವರೆಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು ; ಬಳಕೆಯಾಗದೆ ಉಳಿದಿರುವ ಅನುದಾನ ಎಷ್ಟು ವಿವರ ನೀಡುವುದು ; ಬಳಕೆ ಮಾಡದೆ ಇರುವ ಕಾರಣ ಉಳಿಕೆ ಅನುದಾನ ಕೈತಪ್ಪುವ ಸಾಧ್ಯತೆ ಇದೆಯೇ ; ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡದಿರಲು ಕಾರಣವೇನು ;

(ಇ) ಅಸಮರ್ಪಕ ಬಳಕೆಯನ್ನು ತಡೆಗಟ್ಟಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

## ಪಶುಸಂಗೋಪನೆಯ ವೈದ್ಯಾಧಿಕಾರಿಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೧೪೦ (೩೫೫೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವೈದ್ಯಾಧಿಕಾರಿಗಳು ಗ್ರಾಮಗಳಿಗೆ ತಪಾಸಣೆಗೆ ಹೋಗುವ ಸಮಯದಲ್ಲಿ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಲಾಗಿದೆಯೇ; ಕಲ್ಪಿಸಿದ್ದಲ್ಲಿ ವಿವರ ನೀಡುವುದು ;

(ಆ) ಇಲಾಖೆ ವೈದ್ಯಾಧಿಕಾರಿಗಳು ಪಶು ಹಾಗೂ ಸಾಕು ಪ್ರಾಣಿಗಳ ಪರೀಕ್ಷೆ, ಗರ್ಭಧಾರಣೆ ತಪಾಸಣೆಗಾಗಿ ಬಂದಲ್ಲಿ, ವೈದ್ಯಾಧಿಕಾರಿಗಳಿಗೆ ರೈತರು ಅಥವಾ ನಾಗರಿಕರು ಪರೀಕ್ಷಾ ಶುಲ್ಕ ತಪಾಸಣಾ ಶುಲ್ಕ ನೀಡುವುದಕ್ಕೆ ಸರ್ಕಾರದಿಂದ ಆದೇಶ ನೀಡಲಾಗಿದೆಯೇ; ನೀಡಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು;

(ಇ) ಬೆಂಗಳೂರು ನಗರ ಜಿಲ್ಲೆಯಲ್ಲಿ ಪಶು ಸಂಗೋಪನಾ ಇಲಾಖೆಯಲ್ಲಿರುವ ಪಶು ಸಂಗೋಪನಾ ವೈದ್ಯಾಧಿಕಾರಿಗಳ ವಿವರಗಳನ್ನು ನೀಡುವುದು? (ಸಂಖ್ಯೆ ಹಾಗೂ ಕಾರ್ಯವ್ಯಾಪ್ತಿಯ ವಿವರ ನೀಡುವುದು)

## ತೋಟಗಾರಿಕೆಯಲ್ಲಿ ರೈತರಿಗೆ ನೀಡುತ್ತಿರುವ ಸವಲತ್ತು ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೧೪೧ (೩೫೩೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆ ರೈತರು ಅವಲಂಬಿಸಿರುವ ನೀರಿನ ಮೂಲ ಯಾವುದು; ತಾಲ್ಲೂಕು, ಹೋಬಳಿ, ಗ್ರಾಮ ಅಂತರ್ಜಲದ ಗುಣಮಟ್ಟ ಹಾಗೂ ಭೌತಿಕ ನೀರಿನ ಮಟ್ಟದ ಬಗ್ಗೆ ವಿವರ ನೀಡುವುದು;

(ಆ) ತೋಟಗಾರಿಕೆ ಇಲಾಖೆಯಲ್ಲಿ ಮಣ್ಣಿನ ಗುಣಮಟ್ಟ ಪರೀಕ್ಷಿಸಲು ಇರುವ ಕೇಂದ್ರಗಳೆಷ್ಟು; (ವಿವರಗಳನ್ನು ನೀಡುವುದು)

(ಇ) ಬೆಂಗಳೂರು ನಗರ ಹಾಗೂ ಗ್ರಾಮಾಂತರ ಜಿಲ್ಲೆಯಲ್ಲಿ ತೋಟಗಾರಿಕೆಗೆ ಉಪಯೋಗಿಸುತ್ತಿರುವ ಖಾಸಗಿ ಸ್ವತ್ತು ಪ್ರದೇಶಗಳ ವಿವರ ನೀಡುವುದು; (ಎಕರೆವಾರು ವಿವರ ನೀಡುವುದು)

(ಈ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆ ವ್ಯಾಪ್ತಿಯಲ್ಲಿ ಇಲಾಖೆಗೆ ಸೇರಿರುವ ಉದ್ಯಾನವನಗಳು, ತೋಟಗಳು, ನರ್ಸರಿ ಹಾಗೂ ಇತರೆ ಸ್ವತ್ತುಗಳ ಮಾಹಿತಿ ನೀಡುವುದು?

## ಬೆಂಗಳೂರು ಕರಗಕ್ಕೆ ಸಂಬಂಧಿಸಿದಂತೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೧೪೨ (೩೫೩೫) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಹಲಸೂರು ಪೇಟೆಯಲ್ಲಿರುವ ಶ್ರೀ ಧರ್ಮರಾಯ ಸ್ವಾಮಿ ದೇವಸ್ಥಾನದ ೨೦೧೮ರ ಕರಗ ಉತ್ಸವದ ಪೂಜಾರಿಯನ್ನು ಸರ್ಕಾರದಿಂದ ನೇಮಿಸಲಾಗಿದೆಯೇ; (ನೇಮಿಸಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು)

(ಆ) ನೇಮಿಸುವ ಪ್ರಕ್ರಿಯೆಗೆ ಯಾವುದಾದರೂ ಅಡೆತಡೆ ಉಂಟಾಗಿದ್ದಲ್ಲಿ, ವಿವರವಾದ ಮಾಹಿತಿಯನ್ನು ನೀಡುವುದು;

(ಇ) ಶ್ರೀ ಧರ್ಮರಾಯ ಸ್ವಾಮಿ ದೇವಸ್ಥಾನದ ಕಾರ್ಯಕಾರಿ ಸಮಿತಿಯನ್ನು ನೇಮಿಸಲಾಗಿದೆಯೇ; ನೇಮಿಸಿದ್ದಲ್ಲಿ, ವಿವರಗಳನ್ನು ನೀಡುವುದು?

## ರೈತ ಸಂಪರ್ಕ ಕೇಂದ್ರಗಳ ಸಿಬ್ಬಂದಿಗಳ ವಿವರ ನೀಡುವ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೧೪೩ (೩೫೩೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಇಲಾಖೆಯಲ್ಲಿ ರಾಜ್ಯಾದ್ಯಂತ ರೈತ ಸಂಪರ್ಕ ಕೇಂದ್ರಗಳಲ್ಲಿ ಸರ್ಕಾರಿ ಹಾಗೂ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ಹೋಬಳಿವಾರು ತಾಲ್ಲೂಕುವಾರು, ವಿವರ ನೀಡುವುದು)

(ಆ) ೧೯೯೨-೯೩ರಲ್ಲಿ ಹಾಗೂ ಈಗ ೨೦೧೬-೧೭ರಲ್ಲಿ ಕೃಷಿ ಇಲಾಖೆಯಲ್ಲಿ ಪ್ರತಿ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸರ್ಕಾರಿ ಸಿಬ್ಬಂದಿ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಈ ಎಲ್ಲಾ ಸಂಪರ್ಕ ಕೇಂದ್ರದಿಂದ ಕಳೆದ ೫ ವರ್ಷಗಳಿಂದ ರೈತರಿಗೆ ನೀಡುತ್ತಿರುವ ಸವಲತ್ತುಗಳ ವಿವರಗಳೇನು; (ಸಂಪೂರ್ಣ ವಿವರ ನೀಡುವುದು)

(ಈ) ಕಳೆದ ೫ ವರ್ಷಗಳಿಂದ ಬೆಳೆ ಪರಿಹಾರ ನೀಡಲು ಕೈಗೊಂಡ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಉ) ಕೃಷಿ ಇಲಾಖೆಯಿಂದ ಬೆಂಗಳೂರು ನಗರ ಜಿಲ್ಲೆಯಲ್ಲಿ ಇರುವ ರೈತ ಸಂಪರ್ಕ ಕೇಂದ್ರಗಳ ಸಂಖ್ಯೆ ಎಷ್ಟು; ಇದರಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಅಧಿಕಾರಿ/ಸಿಬ್ಬಂದಿಗಳ ಹಾಗೂ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಖ್ಯೆ ಎಷ್ಟು? (ಸಂಪೂರ್ಣ ವಿವರ ನೀಡುವುದು)

## ಶ್ರೀ ಧರ್ಮರಾಯಸ್ವಾಮಿ ದೇವಸ್ಥಾನದ ಸ್ವತ್ತಿನ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೧೪೪ (೩೫೩೬) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಯ ಅಡಿಯಲ್ಲಿ ಬರುವ ಶ್ರೀ ಧರ್ಮರಾಯ ಸ್ವಾಮಿ ದೇವಸ್ಥಾನದ ಒಟ್ಟು ಸ್ವತ್ತುಗಳೆಷ್ಟು; (ಸಂಪೂರ್ಣ ವಿವರಗಳನ್ನು ನೀಡುವುದು)

(ಆ) ಈ ದೇವಸ್ಥಾನಕ್ಕೆ ಸೇರಿರುವ ಸ್ವತ್ತುಗಳಲ್ಲಿ ಯಾವುದಾದರೂ ಈ ಹಿಂದೆ ಭೂಸ್ವಾಧೀನವಾಗಿದೆಯೇ; ಆಗಿದ್ದಲ್ಲಿ, ಇದಕ್ಕೆ ಸರ್ಕಾರದಿಂದ ನೀಡಿರುವ ಪರಿಹಾರ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಈ ದೇವಸ್ಥಾನಕ್ಕೆ ಸೇರಿದ ಸ್ವತ್ತುಗಳು ನ್ಯಾಯಾಲಯಗಳಲ್ಲಿ ಅಥವಾ ಇತರೆ ಪ್ರಾಧಿಕಾರಗಳ ಮುಂದೆ ಚಾಲ್ತಿಯಲ್ಲಿರುವ ಹಾಗೂ ಇತ್ಯರ್ಥಗೊಂಡಿರುವ ಪ್ರಕರಣಗಳ ಮಾಹಿತಿ ನೀಡುವುದು; ಸರ್ಕಾರ ಆಡಳಿತಾತ್ಮಕವಾಗಿ ದೇವಸ್ಥಾನದ ಎಲ್ಲಾ ಸ್ವತ್ತುಗಳ ಮೇಲೆ ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)

## ಮುಜರಾಯಿ ಇಲಾಖೆ ಅನುದಾನ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೩೧೪೫ (೩೬೪೪) ಮಾನ್ಯ ಜವಳಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ೨೦೧೭–೧೮ನೇ ಸಾಲಿನ ಬಜೆಟ್‌ನಲ್ಲಿ ಮುಜರಾಯಿ ಇಲಾಖೆಗೆ ಎಷ್ಟು ಅನುದಾನವನ್ನು ಮಂಜೂರು ಮಾಡಿರುತ್ತದೆ; ಇಲ್ಲಿಯವರೆಗೆ ಎಷ್ಟು ಅನುದಾನ ಬಿಡುಗಡೆಯಾಗಿರುತ್ತದೆ;

(ಆ) ಮುಜರಾಯಿ ಇಲಾಖೆಯು ಪ್ರಸಕ್ತ ಸಾಲಿನಲ್ಲಿ ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ದೇವಾಲಯಗಳ ಅಭಿವೃದ್ಧಿಗೆ ಕ್ರಿಯಾ ಯೋಜನೆಯನ್ನು ರೂಪಿಸಿರುತ್ತದೆ; (ತಾಲ್ಲುಕುವಾರು ಮಾಹಿತಿ ನೀಡುವುದು) ಇಲ್ಲಿಯವರೆಗೆ ಮುಜರಾಯಿ ಇಲಾಖೆಯು ಸದರಿ ಜಿಲ್ಲೆಗಳಲ್ಲಿ ಎಷ್ಟು ದೇವಾಲಯಗಳ ಅಭಿವೃದ್ಧಿಗೆ ಹಣ ಮಂಜೂರು ಮಾಡಿರುತ್ತದೆ;

(ಇ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಮುಜರಾಯಿ ಇಲಾಖೆಗೆ ಒಳಪಟ್ಟ ಎಷ್ಟು ದೇವಾಲಯಗಳು ಇರುತ್ತವೆ ; ಇವುಗಳ ನಿರ್ವಹಣೆಗೆ ಮುಜರಾಯಿ ಇಲಾಖೆ ವಾರ್ಷಿಕ ಎಷ್ಟು ಹಣ ಬಿಡುಗಡೆ ಮಾಡುತ್ತಿದೆ; ಮುಜರಾಯಿ ಇಲಾಖೆಯು ದೇವಾಲಯಗಳಿಗೆ ಅರ್ಚಕರನ್ನು ನೇಮಿಸಲಾಗಿರುತ್ತದೆಯೇ; ನೇಮಿಸಿದ್ದಲ್ಲಿ, ಅವರ ವಿವರಗಳನ್ನು ನೀಡುವುದು;

(ಈ) ರಾಜ್ಯ ಸರ್ಕಾರವು ರಾಜ್ಯದಲ್ಲಿರುವ ಮುಜರಾಯಿ ದೇವಾಲಯಗಳ ಅಭಿವೃದ್ಧಿಗೆ ಮತ್ತು ನಿರ್ವಹಣೆಗೆ ಕ್ರಿಯಾ ಯೋಜನೆಯನ್ನು ರೂಪಿಸಿರುತ್ತದೆಯೇ; ಮುಜರಾಯಿ ದೇವಾಲಯಗಳ ಅಭಿವೃದ್ಧಿಗೆ ಸೆಸ್ ಮುಖಾಂತರ ಹಣ ಸಂಗ್ರಹಣೆ ಮಾಡಿ ದೇವಾಲಯಗಳನ್ನು ಅಭಿವೃದ್ಧಿಗೊಳಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಉ) ರಾಜ್ಯ ಸರ್ಕಾರವು ಮುಜರಾಯಿ ದೇವಾಲಯಗಳ ಆದಾಯ ರಹಿತವಾದ ದೇವಾಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಚಕರ ಗೌರವ ಸಂಭಾವನೆಯನ್ನು ಹೆಚ್ಚಿಸುವಲ್ಲಿ ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ?

## ಹೆದ್ದಾರಿ ಅಭಿವೃದ್ಧಿ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೩೧೪೬ (೩೬೪೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಯು ಕಟ್ಟಡ ಕಾರ್ಮಿಕರ ಅಭಿವೃದ್ಧಿಗಾಗಿ/ಕಲ್ಯಾಣಕ್ಕಾಗಿ ಗುತ್ತಿಗೆದಾರರಿಂದ ಸೆಸ್ ಅಥವಾ ಕಲ್ಯಾಣ ನಿಧಿಯನ್ನು ಪಡೆಯುತ್ತಿದೆಯೇ; ಪಡೆಯುತ್ತಿದ್ದಲ್ಲಿ, ಇಂತಹ ಕಲಾಣ ನಿಧಿಯುನ್ನು ಯಾವ ವರ್ಷದಿಂದ ಪಡೆಯಲಾಗುತ್ತಿದೆ ಮತ್ತು ಇಲ್ಲಿಯವರೆಗೆ ಸಂಗ್ರಹವಾಗಿರುವ ಒಟ್ಟು ಹಣವೆಷ್ಟು;

(ಆ) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ವತಿಯಿಂದ ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲುಕಿನಲ್ಲಿ ಎಷ್ಟು ರಾಷ್ಟ್ರೀಯ ಹೆದ್ದಾರಿ ಹಾಗೂ ರಾಜ್ಯ ಹೆದ್ದಾರಿ ಕಾಮಗಾರಿಗಳನ್ನು ಕಳೆದ ೨ ವರ್ಷಗಳಲ್ಲಿ ಕೈಗೊಳ್ಳಲಾಗಿದೆ; ಇವುಗಳಿಗೆ ನೀಡಿರುವ ಟೆಂಡರ್ ಹಣವೆಷ್ಟು; (ಪೂರ್ಣ ವಿವರಗಳನ್ನು ನೀಡುವುದು)

(ಇ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಎಷ್ಟು ಉದ್ದದ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಹೆದ್ದಾರಿ ರಸ್ತೆಗಳಿರುತ್ತವೆ; ಕಳೆದ ೪ ವರ್ಷಗಳಲ್ಲಿ ಈ ರಸ್ತೆಗಳ ಕಾಮಗಾರಿಗಳಿಗೆ ರಾಜ್ಯ ಸರ್ಕಾರ ಎಷ್ಟು ಹಣ ವಿನಿಯೋಗಿಸಿರುತ್ತದೆ;

(ಈ) ತುಮಕೂರು ಜಿಲ್ಲೆಯಲ್ಲಿ ಕಳೆದ ೪ ವರ್ಷಗಳಲ್ಲಿ ಎಷ್ಟು ರಾಜ್ಯ ಹೆದ್ದಾರಿಯ ರಸ್ತೆ ಅಭಿವೃದ್ದಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಬಾಕಿಯಿರುವ ಕಾಮಗಾರಿಗಳೆಷ್ಟು; ಪ್ರಸಕ್ತ ಸಾಲಿನಲ್ಲಿ ರಾಜ್ಯ ಹೆದ್ದಾರಿ ಅಭಿವೃದ್ಧಿಗೆ ತುಮಕೂರು ಜಿಲ್ಲೆಗೆ ಬಿಡುಗಡೆಯಾಗಿರುವ ತಾಲ್ಲೂಕುವಾರು ಹಣವೆಷ್ಟು?

## ತೆಂಗು ಮರಗಳ ಸಮಸ್ಯೆ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೩೧೪೭ (೩೬೪೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ, ೦೧/೦೪/೨೦೧೬ ರಿಂದ ಇಲ್ಲಿಯವರೆಗೆ ಎಷ್ಟು ತೆಂಗಿನ ಮರಗಳು ನುಸಿ ಪೀಡೆ ಮತ್ತು ಸುಳಿ ರೋಗದಿಂದ ನಾಶವಾಗಿರುತ್ತವೆ ;

(ಆ) ತುಮಕೂರು ಜಿಲ್ಲೆ, ಚಿತ್ರದುರ್ಗ ಜಿಲ್ಲೆ ಹಾಗೂ ಹಾಸನ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ ಎಷ್ಟು ತೆಂಗಿನ ಮರಗಳು ನಾಶವಾಗಿರುತ್ತವೆ ; (ತಾಲ್ಲೂಕುವಾರು ವಿವರ ನೀಡುವುದು) ಸದರಿ ತೆಂಗಿನ ಮರಗಳಿಗೆ ರಾಜ್ಯ ಸರ್ಕಾರದ ವತಿಯಿಂದ ಎಷ್ಟು ಪರಿಹಾರ ನೀಡಲಾಗಿದೆ;

(ಇ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಎಷ್ಟು ತೆಂಗಿನ ಮರಗಳು ಮತ್ತು ಅಡಿಕೆ ಮರಗಳು ನಾಶವಾಗಿರುತ್ತವೆ; ಇದರಿಂದ ಎಷ್ಟು ರೈತ ಕುಟುಂಬಗಳಿಗೆ ನಷ್ಟವಾಗಿರುತ್ತದೆ; ಸದರಿ ರೈತರಿಗೆ ರಾಜ್ಯ ಸರ್ಕಾರದ ವತಿಯಿಂದ ಪರಿಹಾರ ನೀಡಲಾಗಿದೆಯೇ; ನೀಡಿದ್ದಲ್ಲಿ, ಪ್ರತಿ ಮರಕ್ಕೆ ಎಷ್ಟು ಪರಿಹಾರ ನೀಡಲಾಗಿರುತ್ತದೆ;

(ಈ) ಕರ್ನಾಟಕ ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಎಷ್ಟು ತೆಂಗಿನ ಮರ ಮತ್ತು ಅಡಿಕೆ ಮರ ನಾಶವಾಗಿರುತ್ತದೆ; ಇವುಗಳ ರಕ್ಷಣೆಗೆ ರಾಜ್ಯ ಸರ್ಕಾರವು ಕೈಗೊಂಡ ಕ್ರಮಗಳೇನು?

## ಸಾಲಮನ್ನಾ ಯೋಜನೆ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೩೧೪೮ (೩೬೪೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಸರ್ಕಾರವು ರಾಜ್ಯದಲ್ಲಿ ರೂ. ೫೦,೦೦೦/– ಗಳ ಅಲ್ಪಾವಧಿ ಸಾಲಮನ್ನಾ ಯೋಜನೆ ಪ್ರಕಟಿಸಿದ ನಂತರ ಇಲ್ಲಿಯವರೆಗೆ ಎಷ್ಟು ರೈತರು ಇದರ ಪ್ರಯೋಜನ ಪಡೆದಿರುತ್ತಾರೆ; ರಾಜ್ಯ ಸರ್ಕಾರವು ಸಾಲಮನ್ನಾ ಯೋಜನೆಗೆ ಇಲ್ಲಿಯವರೆಗೆ ಎಷ್ಟು ಹಣ ಬಿಡುಗಡೆ ಮಾಡಿರುತ್ತದೆ ; (ಬಿಡುಗಡೆ ಮಾಡಿರುವ ಹಣದ ಪೂರ್ಣ ವಿವರವನ್ನು ನೀಡತಕ್ಕದ್ದು)

(ಆ) ಕರ್ನಾಟಕ ರಾಜ್ಯ ಸರ್ಕಾರವು ರಾಜ್ಯದ ರೈತರ ಸಂಪೂರ್ಣ ಸಾಲಮನ್ನಾ ಮಾಡುವ ಯೋಜನೆಯನ್ನು ಹೊಂದಿರುತ್ತದೆಯೇ; ಹೊಂದಿದ್ದಲ್ಲಿ, ಈ ಯೋಜನೆಯನ್ನು ಜಾರಿಗೊಳಿಸುವುದು ಯಾವಾಗ ;

(ಇ) ಕರ್ನಾಟಕ ರಾಜ್ಯ ಸರ್ಕಾರವು ಸಹಕಾರಿ ಕಾಯ್ದೆಗೆ ತಿದ್ದುಪಡಿ ಮೂಲಕ ಪ್ರತಿ ಸಹಕಾರ ಸಂಘಗಳ ಆಡಳಿತ ಮಂಡಳಿಯಲ್ಲಿ ಹಿಂದುಳಿದ ವರ್ಗಗಳಿಗೆ/ಜಾತಿಗಳಿಗೆ ಮೀಸಲಾತಿ ನೀಡಿರುತ್ತದೆಯೇ; ನೀಡಿದ್ದಲ್ಲಿ, ಸಹಕಾರ ಸಂಘಗಳ ಚುನಾವಣಾ ಪ್ರಾಧಿಕಾರವು ಸದರಿ ವರ್ಗ ಮತ್ತು ಜಾತಿಗಳಿಗೆ ಚುನಾವಣೆಯನ್ನು ನಡೆಸಿರುತ್ತದೆಯೇ ; ನಡೆಸದೇ ಇದ್ದಲ್ಲಿ ರಾಜ್ಯದ ಎಷ್ಟು ಸಹಕಾರ ಸಂಘಗಳ ಆಡಳಿತ ಮಂಡಳಿಯಲ್ಲಿ ಇಂತಹ ನಿರ್ದೇಶಕ ಸ್ಥಾನಗಳು ಖಾಲಿ ಇರುತ್ತವೆ ;

(ಈ) ರಾಜ್ಯ ಸಹಕಾರ ಸಂಘಗಳ ಚುನಾವಣಾ ಪ್ರಾಧಿಕಾರವು ಸಹಕಾರ ಸಂಘಗಳಿಗೆ ಚುನಾವಣೆ ನಡೆಸಲು ತನ್ನದೇ ಆದ ಸಿಬ್ಬಂದಿಯನ್ನು ಹೊಂದಿರುತ್ತದೆಯೇ ; ಇಲ್ಲದೇ ಹೋದಲ್ಲಿ, ಯಾವ ಸಿಬ್ಬಂದಿಯನ್ನು ಬಳಸಿ ಸಹಕಾರ ಸಂಘಗಳ ಚುನಾವಣೆ ನಡೆಸಲಾಗುತ್ತಿದೆ ; ಚುನಾವಣಾ ಪ್ರಾಧಿಕಾರಕ್ಕೆ ರಾಜ್ಯ ಸರ್ಕಾರ ವಾರ್ಷಿಕ ಎಷ್ಟು ಅನುದಾನ ನೀಡುತ್ತಿದೆ ; ಸದರಿ ಪ್ರಾಧಿಕಾರದಲ್ಲಿ ಎಷ್ಟು ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದಾರೆ ? (ಸಿಬ್ಬಂದಿಯ ಪೂರ್ಣ ವಿವರ ನೀಡುವುದು)

## ಬೆಳೆ ವಿಮಾ ಯೋಜನೆ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೩೧೪೯ (೩೬೪೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಬೆಳೆ ವಿಮಾ ಯೋಜನೆ ಅಡಿಯಲ್ಲಿ ೨೦೧೬–೧೭ನೇ ಸಾಲಿನಿಂದ ಇಲ್ಲಿಯವರೆಗೆ ಎಷ್ಟು ಬೆಳೆ ನಷ್ಟ ಪರಿಹಾರ ನೀಡಲಾಗಿರುತ್ತದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬೆಳೆ ವಿಮಾ ಯೋಜನೆಯಡಿಯಲ್ಲಿ ಇಲ್ಲಿಯವರೆಗೆ (ಫಸಲ್ ಭೀಮಾ ಯೋಜನೆ) ಪರಿಹಾರ ಪಾವತಿಸದೇ ಬಾಕಿ ಇರುವ ಅರ್ಜಿಗಳು ಎಷ್ಟು ; ಪ್ರಸಕ್ತ ಸಾಲಿನಲ್ಲಿ ಎಷ್ಟು ರೈತರು ವಿಮಾ ಯೋಜನೆಯನ್ನು ಪಡೆದಿರುತ್ತಾರೆ ;

(ಇ) ಕರ್ನಾಟಕ ರಾಜ್ಯದಲ್ಲಿ ೦೧–೦೪–೨೦೧೭ ರಿಂದ ಇಲ್ಲಿಯವರೆಗೆ ಅಲ್ಪಾವಧಿ ಸಾಲಕ್ಕೆ ಎಷ್ಟು ಸಹಾಯಧನವನ್ನು ನೀಡಲಾಗಿರುತ್ತದೆ; ಪಾವತಿಗೆ ಬಾಕಿಯಿರುವ ಸಹಾಯಧನದ ಹಣವೆಷ್ಟು ;

(ಈ) ಕರ್ನಾಟಕ ರಾಜ್ಯದಲ್ಲಿ ಕಳೆದ ೪ ವರ್ಷಗಳಲ್ಲಿ ಎಷ್ಟು ರೈತರ ಆಕಸ್ಮಿಕ ಮರಣ ಪ್ರಕರಣಗಳು ವರದಿಯಾಗಿರುತ್ತವೆ ; ರಾಜ್ಯ ಸರ್ಕಾರವು ಕಳೆದ ೪ ವರ್ಷಗಳಲ್ಲಿ ಎಷ್ಟು ರೈತ ಕುಟುಂಬಗಳಿಗೆ ಆಕಸ್ಮಿಕ ಮರಣದ ಪರಿಹಾರವನ್ನು ನೀಡಿರುತ್ತದೆ ;

(ಉ) ಕರ್ನಾಟಕ ರಾಜ್ಯದಲ್ಲಿ ಕಳೆದ ೪ ವರ್ಷಗಳಲ್ಲಿ ಬೆಂಕಿ ಆಕಸ್ಮಿಕದಿಂದ ಎಷ್ಟು ಮೆದೆ/ಬಣವೆಗಳು ನಷ್ಟಕ್ಕೆ ಒಳಗಾಗಿರುತ್ತವೆ; ಇದರ ಅಡಿಯಲ್ಲಿ ಎಷ್ಟು ರೈತರಿಗೆ ಕಳೆದ ೪ ವರ್ಷಗಳಲ್ಲಿ ರಾಜ್ಯ ಸರ್ಕಾರ ಪರಿಹಾರವನ್ನು ಪಾವತಿಸಿರುತ್ತದೆ ?

## ಸಹಕಾರ ಇಲಾಖೆ ಮುಖಾಂತರ ಮಂಜೂರಾದ ಶುದ್ಧ ಕುಡಿಯುವ ನೀರಿನ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೩೧೫೦ (೩೫೪೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿ ಸಹಕಾರಿ ಇಲಾಖೆ ಮುಖಾಂತರ ಮಂಜೂರಾದ ಶುದ್ಧ ಕುಡಿಯುವ ನೀರಿನ ಘಟಕಗಳು ಎಷ್ಟು ;

(ಆ) ಪ್ರತಿ ತಾಲ್ಲೂಕಿನಲ್ಲಿ ಆಯ್ಕೆಯಾದ ಸಂಘಗಳ ಹೆಸರು ಮತ್ತು ಮೊತ್ತ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಶುದ್ಧ ಕುಡಿಯುವ ನೀರಿನ ಘಟಕದ ಟೆಂಡರ್‌ದಾರರ ಹೆಸರು ಮತ್ತು ವಿಳಾಸ ಹಾಗೂ ಪ್ರತಿ ಟೆಂಡರ್‌ದಾರರು ಎಷ್ಟು ಘಟಕಗಳನ್ನು ಸ್ಥಾಪಿಸಿದ್ದಾರೆ ? (ಅವುಗಳ ಹೆಸರು, ಊರು ಖರ್ಚಾದ ಮೊತ್ತದ ವಿವರ ಒದಗಿಸುವುದು)

## ತೋಟಗಾರಿಕೆ ಇಲಾಖೆಗೆ ಹನಿ ನೀರಾವರಿ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೩೧೫೧ (೩೫೪೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ತೋಟಗಾರಿಕೆ ಬೆಳೆಗಳಿಗೆ ತುಂತುರು/ಹನಿ ನೀರಾವರಿ ಹಾಗೂ ಕೃಷಿ ಹೊಂಡಗಳಿಗಾಗಿ ಸಹಾಯಧನ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದರಲ್ಲಿ ಸಹಾಯಧನ ಪಡೆದ ರೈತರ ಸಂಖ್ಯೆ ಎಷ್ಟು ; ಸಹಾಯಧನ ಪಡೆದ ಫಲಾನುಭವಿಗಳ ಹೆಸರು, ಸಹಾಯಧನ ಪಡೆದ ಮೊತ್ತದ ವಿವರವೆಷ್ಟು ; (ಯೋಜನೆವಾರು ತುಂತುರು ಹನಿ/ನೀರಾವರಿ ಕೃಷಿ ಹೊಂಡಗಳವಾರು ವಿವರ ನೀಡುವುದು)

(ಇ) ಈ ಎಲ್ಲಾ ಯೋಜನೆಯ ಬಾಕಿ ರೈತರಿಗೆ ಸಹಾಯಧನ ಪಾವತಿಸಲು ಸರ್ಕಾರ ಕೈಗೊಂಡ ಕ್ರಮವೇನು ; ಬಾಕಿ ಉಳಿಯಲು ಕಾರಣಗಳೇನು ?

## ಪಶುಭಾಗ್ಯ ಯೋಜನೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೩೧೫೨ (೩೫೪೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭, ೨೦೧೭–೧೮ನೇ ಸಾಲಿನಲ್ಲಿ ಪಶುಭಾಗ್ಯ ಯೋಜನೆಯಡಿ ಇಲಾಖೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಹಾಗೂ ಆಯಾ ಜಿಲ್ಲೆಗಳಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ವಿವರವಾದ ಮಾಹಿತಿ ನೀಡುವುದು)

(ಆ) ಹಾವೇರಿ ಜಿಲ್ಲೆಗೆ ಈ ಯೋಜನೆಯಡಿ ಬಿಡುಗಡೆ ಮಾಡಿರುವ ಅನುದಾನದಲ್ಲಿ ರೈತರು ಮತ್ತು ಅತೀ ಸಣ್ಣ ರೈತರಿಗೆ ಮತ್ತು ಭೂರಹಿತ ಫಲಾನುಭವಿಗಳಿಗೆ ಯಾವ ಯಾವ ಪ್ರಯೋಜನವನ್ನು ಕಲ್ಪಿಸಿಕೊಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ನಂಜುಂಡಪ್ಪನವರ ವರದಿಯಂತೆ ಹಾವೇರಿ ಜಿಲ್ಲೆಯಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿ ಹಾಗೂ ಆರ್.ಕೆ.ವಿ.ವೈ ಕಾರ್ಯಕ್ರಮದಡಿ ಗುರುತಿಸಿರುವ ಫಲಾನುಭವಿಗಳ ಸಂಖ್ಯೆ ಎಷ್ಟು;

(ಈ) ಗುರುತಿಸಿರುವ ಫಲಾನುಭವಿಗಳಿಗೆ ಎಷ್ಟು ಹಣವನ್ನು ಖರ್ಚು ಮಾಡಿ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಅಮೃತ ಯೋಜನೆಯಡಿ ಹಾವೇರಿ ಜಿಲ್ಲೆಗೆ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; ಎಷ್ಟು ಫಲಾನುಭವಿಗಳಿಗೆ ಅನುಕೂಲ ಮಾಡಿಕೊಡಲಾಗಿದೆ ; ಹಾಗೂ ಈ ಸೌಲಭ್ಯಕ್ಕಾಗಿ ಖರ್ಚು ಮಾಡಿರುವ ಹಣವೆಷ್ಟು ? (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

## ಸಂಚಾರಿ ಪಶು ಚಿಕಿತ್ಸಾಲಯದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೩೧೫೩ (೩೫೪೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರತಿ ತಾಲ್ಲೂಕಿಗೆ ಸಂಚಾರ ಪಶು ಚಿಕಿತ್ಸಾಲಯಗಳ ಸೌಲಭ್ಯ ಒದಗಿಸುವ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಯಿತು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಈಗ ಒಟ್ಟು ಎಷ್ಟು ಸಂಚಾರಿ ಪಶು ಚಿಕಿತ್ಸಾಲಯಗಳು ಕಾರ್ಯನಿರ್ವಹಿಸುತ್ತಲಿವೆ ; (ಹಾವೇರಿ ಜಿಲ್ಲೆಯ ಪ್ರತ್ಯೇಕ ವಿವರ ನೀಡುವುದು)

(ಇ) ಈ ಸಂಚಾರಿ ಪಶು ಚಿಕಿತ್ಸಾಲಯಗಳು ತಾಂತ್ರಿಕ ತೊಂದರೆ ಹಾಗೂ ಸಿಬ್ಬಂದಿಗಳ ಕೊರತೆಯಿಂದಾಗಿ ಸರಿಯಾಗಿ ಕಾರ್ಯನಿರ್ವಹಿಸದಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ಸಂಚಾರಿ ಪಶು ಚಿಕಿತ್ಸಾಲಯಗಳು ಸುಸಜ್ಜಿತವಾಗಿ ಕಾರ್ಯನಿರ್ವಹಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಅಣುವಿದ್ಯುತ್ ಸ್ಥಾವರದ ಸಾಧಕ–ಬಾಧಕಗಳ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೧೫೪ (೩೫೭೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅಣುವಿದ್ಯುತ್ ಸ್ಥಾವರ ಘಟಕಗಳ ಸಂಖ್ಯೆ ಎಷ್ಟು; ಸದರಿ ಘಟಕಗಳಿಂದ ಉತ್ಪಾದನೆಯಾಗುವ ವಿದ್ಯುತ್ ಪ್ರಮಾಣ ಎಷ್ಟು ; (ವಿವರ ನೀಡುವುದು)

(ಆ) ಸದರಿ ಘಟಕಗಳಲ್ಲಿ ವಿಸ್ತರಣಾ ಘಟಕಗಳನ್ನು ಸ್ಥಾಪಿಸಲು ಸರ್ಕಾರ ಮುಂದಾಗಿದೆಯೇ ;

(ಇ) ಈ ಘಟಕಗಳಿಂದ ಉತ್ಪಾದನೆಯಾಗುವ ವಿದ್ಯುತ್‌ಗೆ ತಗಲುವ ವೆಚ್ಚವೆಷ್ಟು ; ಇದನ್ನು ಯಾವ ದರಕ್ಕೆ ಮಾರಾಟ ಮಾಡಲಾಗುತ್ತದೆ;

(ಈ) ಈ ಘಟಕಗಳಿಂದ ಪರಿಸರಕ್ಕೆ ಹಾನಿಯಾಗುವುದರಿಂದ ಪುನಃ ಮುಂದುವರೆದ ಘಟಕ ಸ್ಥಾಪನೆಗೆ ಕಡಿವಾಣ ಹಾಕಲು ಸರ್ಕಾರ ಸಿದ್ಧವಿದೆಯೇ ;

(ಉ) ಹಾಗಿದ್ದಲ್ಲಿ, ಕೈಗಾ ಅಣು ವಿದ್ಯುತ್ ಸ್ಥಾವರದ ಸಾಧಕ–ಬಾಧಕಗಳನ್ನು ತಿಳಿಸುವುದು ?

## ಬೆಂಗಳೂರು–ಮೈಸೂರು ೬ ಪಥ ರಸ್ತೆ ನಿರ್ಮಿಸುವ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೧೫೫ (೩೪೭೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು–ಮೈಸೂರು ರಸ್ತೆಯನ್ನು ೬ ಪಥಗಳ ರಸ್ತೆಯನ್ನಾಗಿ ನಿರ್ಮಿಸುವ ಯೋಜನೆ ಯಾವ ಹಂತದಲ್ಲಿದೆ ; ಈ ಯೋಜನೆಗೆ ಅನುದಾನ ಮೀಸಲಿರಿಸಲಾಗಿದೆಯೇ ; ಮೀಸಲಿಟ್ಟಿದ್ದಲ್ಲಿ ಅನುದಾನದ ಮೊತ್ತ ತಿಳಿಸುವುದು ;

(ಆ) ಭೂಸ್ವಾಧೀನದ ಪ್ರಕ್ರಿಯೆ ಯಾವ ಹಂತದಲ್ಲಿದೆ ; ಭೂ ಮಾಲೀಕರಿಗೆ ಯಾವ ಪ್ರಮಾಣದಲ್ಲಿ ಪರಿಹಾರ ಒದಗಿಸಲಾಗುತ್ತಿದೆ ;

(ಇ) ಈ ಕಾಮಗಾರಿ ಪ್ರಾರಂಭವಾಗಿದೆಯೇ ; ಇಲ್ಲದಿದ್ದಲ್ಲಿ ಕಾರಣವೇನು; ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು ? (ಮಾಹಿತಿ ನೀಡುವುದು)

## ರಾಜ್ಯಕ್ಕೆ ಉಂಟಾಗುತ್ತಿರುವ ವಿದ್ಯುತ್ ಸಮಸ್ಯೆ ಹಾಗೂ ಖರೀದಿ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೩೧೫೬ (೩೫೭೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಕ್ಕೆ ಸಮರ್ಪಕ ವಿದ್ಯುತ್ ಸರಬರಾಜು ಕೊರತೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿದ್ಯುತ್ ಸರಬರಾಜಿಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ; (ವಿವರ ಒದಗಿಸುವುದು)

(ಆ) ವಿದ್ಯುತ್ ಕೊರತೆ ನೀಗಿಸಲು ಎಷ್ಟು ಪ್ರಮಾಣದ ವಿದ್ಯುತ್‌ನ್ನು ಖರೀದಿ ಮಾಡಲು ಸರ್ಕಾರ ಮುಂದಾಗಿದೆ ;

(ಇ) ಕಳೆದ ವರ್ಷ ಪ್ರತಿ ಯೂನಿಟ್‌ಗೆ ಖರೀದಿ ಮಾಡಿದ ದರವೆಷ್ಟು; ಈಗಿನ ಖರೀದಿ ದರವೆಷ್ಟು ; (ಮಾಹಿತಿ ಒದಗಿಸುವುದು)

(ಈ) ಖರೀದಿಯ ಮಾನದಂಡಗಳೇನು ; ಪರ್ಯಾಯ ಇಂಧನ ಮೂಲಗಳ ಬಗ್ಗೆ ಸರ್ಕಾರ ಮುಂದಾಗುವುದೇ ; ಯಾವ ಕ್ರಮಗಳನ್ನು ಕೈಗೊಂಡಿದೆ ವಿವರಗಳನ್ನು ಒದಗಿಸುವುದು ?

## ರಾಜ್ಯದಲ್ಲಿನ ಪಶು ಚಿಕಿತ್ಸಾಲಯ ಪಶು ಆಸ್ಪತ್ರೆ ಹಾಗೂ ಸಿಬ್ಬಂದಿಗಳ ಬಗ್ಗೆ ಮಾಹಿತಿ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ):–**

೩೧೫೭ (೩೫೭೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪ್ರತಿ ಗ್ರಾಮ ಪಂಚಾಯಿತಿಗೆ ಒಂದರಂತೆ ಪಶು ಚಿಕಿತ್ಸಾಲಯ ಹಾಗೂ ತಾಲ್ಲೂಕಿಗೆ ಒಂದರಂತೆ ಪಶು ಆಸ್ಪತ್ರೆ ಮತ್ತು ಜಿಲ್ಲೆಗೆ ಒಂದರಂತೆ ಪಾಲಿ ಕ್ಲಿನಿಕ್ ಆಸ್ಪತ್ರೆಗಳನ್ನು ಸ್ಥಾಪಿಸಲಾಗಿದೆಯೇ ; ಹಾಗಿದ್ದಲ್ಲಿ, ಈ ಕುರಿತು ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು ;

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ಜನ ಪಶು ವೈದ್ಯ ಪರೀಕ್ಷಕರು, ಪಶು ವೈದ್ಯಾಧಿಕಾರಿಗಳು ಹಾಗೂ ಜಿಲ್ಲಾ ಉಪ ನಿರ್ದೇಶಕರು (ವಿಷಯ ತಜ್ಞರು) ಕಾರ್ಯ ನಿರ್ವಹಿಸುತ್ತಿದ್ದಾರೆ ;

(ಇ) ರಾಜ್ಯದ ಪಶು ಆಸ್ಪತ್ರೆಗಳಲ್ಲಿ ಪಶು ವೈದ್ಯ ಪರೀಕ್ಷಕರು, ಪಶು ವೈದ್ಯಾಧಿಕಾರಿಗಳು ಮುಂತಾದ ಸಿಬ್ಬಂದಿಯ ಕೊರತೆ ಇದೆಯೇ? (ಜಿಲ್ಲಾವಾರು, ಹುದ್ದೆವಾರು ಮಾಹಿತಿ ನೀಡುವುದು)

## "ಇ ಡೈರಿ" ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೫೮ (೩೬೦೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಹಾಲು ಮಹಾಮಂಡಳಿಯು ನೂತನವಾಗಿ ಆರಂಭಿಸಿರುವ ; ಇ–ಡೈರಿ ಸೇವೆಯ ಉದ್ದೇಶವೇನು ;

(ಆ) "ಇ–ಡೈರಿ" ಮೂಲಕ ಗ್ರಾಹಕರು ತಾವಿರುವ ಸ್ಥಳದಲ್ಲೇ ನಂದಿನಿಯ ಯಾವ ಯಾವ ಉತ್ಪನ್ನಗಳನ್ನು ನಿಗಧಿಪಡಿಸಿದ ಸಮಯಕ್ಕೆ ತರಿಸಿಕೊಳ್ಳಬಹುದಾಗಿದೆ ;

(ಇ) ಗ್ರಾಹಕರ ಬೇಡಿಕೆಗೆ ಅನುಗುಣವಾಗಿ ಉತ್ಪನ್ನಗಳನ್ನು ಸಮಯಕ್ಕೆ ಸರಿಯಾಗಿ ತಲುಪಿಸಲು ಎಲ್ಲೆಲ್ಲಿ ಸಂಗ್ರಹಣಾ ಕೇಂದ್ರಗಳನ್ನು ತೆರಯಲಾಗಿದೆ ;

(ಈ) ಇದನ್ನು ಇಡೀ ರಾಜ್ಯದಲ್ಲಿ ವಿಸ್ತರಿಸಲು ಕ್ರಮ ಜರುಗಿಸಲಾಗುವುದೇ ?

## ಸಮುದಾಯ ಭವನ ನಿರ್ಮಾಣ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೫೯ (೩೬೦೧) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಬಸವನಗುಡಿ ವಿಧಾನಸಭಾ ಕ್ಷೇತ್ರದ ಪ್ರಸಿದ್ದ ಶ್ರೀ ಕಾರಂಜಿ ಆಂಜನೇಯ ಸ್ವಾಮಿ ದೇವಾಲಯದಲ್ಲಿ ಸಮುದಾಯ ಭವನ ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಸಮುದಾಯ ಭವನ ನಿರ್ಮಿಸಲು ತಗಲುವ ವೆಚ್ಚವೆಷ್ಟು;

(ಇ) ಈ ಸಮುದಾಯ ಭವನವು ಯಾವಾಗ ಪೂರ್ಣಗೊಳ್ಳಲಿದೆ ;

(ಈ) ಈ ದೇವಾಲಯದಲ್ಲಿ ಎಷ್ಟು ಜನ ಅರ್ಚಕರು ಮತ್ತು ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ; (ಆ ಅರ್ಚಕರು ಮತ್ತು ಸಿಬ್ಬಂದಿಗಳ ವೇತನ ಮತ್ತು ಇತರೆ ವಿವರಗಳನ್ನು ಸಂಪೂರ್ಣವಾಗಿ ಒದಗಿಸುವುದು)

(ಉ) ಈ ಕ್ಷೇತ್ರದಲ್ಲಿ ಕಾರಂಜಿಯನ್ನು ನಿರ್ಮಾಣ ಮಾಡುವ ಕಲ್ಪನೆ ಇದೆಯೇ ?

## ಸೋಲಾರ್ ಪಾರ್ಕ್ ನಿರ್ಮಿಸುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೬೦ (೩೬೦೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆ, ಪಾವಗಡದಲ್ಲಿರುವ ಸೋಲಾರ್ ಪಾರ್ಕ್‌ನ್ನು ಯಾರ ಸಹಯೋಗದೊಂದಿಗೆ ನಿರ್ಮಾಣ ಮಾಡಲಾಗಿದೆ ; ಇದಕ್ಕೆ ಖರ್ಚಾಗಿರುವ ಹಣವೆಷ್ಟು ;

(ಆ) ಈ ಸೋಲಾರ್ ಪಾರ್ಕ್‌ನಿಂದ ಎಷ್ಟು ಮೆಗಾವ್ಯಾಟ್ ವಿದ್ಯುತ್‌ನ್ನು ಉತ್ಪಾದನೆ ಮಾಡಲಾಗುತ್ತದೆ ; (ವಿವರವಾದ ಮಾಹಿತಿ ಒದಗಿಸುವುದು)

(ಇ) ಸೋಲಾರ್ ಪಾರ್ಕ್‌ನಿಂದ ಎಷ್ಟು ಜನರಿಗೆ ಉದ್ಯೋಗ ದೊರೆಯಲಿದೆ ;

(ಈ) ಈ ಸೋಲಾರ್ ಪಾರ್ಕ್ ನಿರ್ಮಾಣ ಮಾಡುವುದಕ್ಕೆ ಜನ ರೈತರ ಜಮೀನನ್ನು ಗುತ್ತಿಗೆ ಪಡೆಯಲಾಗಿದೆ ; ರೈತರಿಗೆ ಒಂದು ಎಕರೆಗೆ ನೀಡುತ್ತಿರುವ ಹಣವೆಷ್ಟು ?

## ರಸ್ತೆ ಟೋಲ್‌ಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೬೧ (೩೬೦೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ರಸ್ತೆ ಟೋಲ್‌ಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಆ) ಇವುಗಳನ್ನು ಯಾವ ಸಂಸ್ಥೆಯವರು ನಿರ್ವಹಿಸುತ್ತಿದ್ದಾರೆ ; (ಟೋಲ್‌ವಾರು ಮಾಹಿತಿ ನೀಡುವುದು)

(ಇ) ಅಂಬುಲೆನ್ಸ್ ಮತ್ತು ವಿ.ಐ.ಪಿ. ವಾಹನಗಳಿಗೆ ಪ್ರತ್ಯೇಕ ದ್ವಾರ ನಿರ್ಮಿಸಿದ್ದಾರೆಯೇ ; ನಿರ್ಮಿಸಿದ್ದರೆ, ಟೋಲ್‌ವಾರು ವಿವರವಾದ ಮಾಹಿತಿ ನೀಡುವುದು ;

(ಈ) ನಿರ್ಮಿಸದಿದ್ದರೆ, ಯಾವಾಗ ನಿರ್ಮಿಸಲಾಗುವುದು ;

(ಉ) ಅಂಬುಲೆನ್ಸ್ ಮತ್ತು ವಿ.ಐ.ಪಿ. ವಾಹನಗಳಿಗೆ ಇಲ್ಲಿಯವರೆಗೆ ಪ್ರತ್ಯೇಕ ದ್ವಾರ ನಿರ್ಮಿಸದೇ ಇರುವ ಸಂಸ್ಥೆಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರವಾದ ಮಾಹಿತಿ ಕೊಡುವುದು)

## ರಾಜ್ಯದಲ್ಲಿ ವಿದ್ಯುತ್ ಹಣ ಪಾವತಿಯಲ್ಲಿ ಖಾಸಗಿಯವರಿಂದ ಆಗುತ್ತಿರುವ ಮೋಸದ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೬೨ (೩೫೪೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇಂಧನ ಇಲಾಖೆಯಿಂದ ಗ್ರಾಹಕರ ಮನೆಗಳ ಮೀಟರ್ ರೀಡಿಂಗ್ ಕಾರ್ಯವನ್ನು ಖಾಸಗಿ ಏಜೆನ್ಸಿಯವರಿಗೆ ನೀಡಲಾಗಿದೆಯೇ ;

(ಆ) ನೀಡಿದ್ದಲ್ಲಿ, ಯಾವ ಯಾವ ಏಜೆನ್ಸಿಯವರಿಗೆ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಏಜೆನ್ಸಿಯವರು ಸಾಮಾನ್ಯ ಜನರಿಗೆ ವಂಚಿಸುತ್ತಿರುವ ಪ್ರಕರಣ ಬೆಳಕಿಗೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ಜಿಲ್ಲೆಗಳಿಂದ ವಂಚನೆ ಪ್ರಕರಣದ ಬಗ್ಗೆ ದೂರು ಬಂದಿರುತ್ತದೆ ; (ಮಾಹಿತಿ ನೀಡುವುದು)

(ಈ) ಕೊಡಗು ಜಿಲ್ಲೆಯಲ್ಲಿ ಬೆಂಗಳೂರಿನ ಮೂಲಕ "ಐಡಿಯಾ ಇನ್ಫಿನಿಟಿ ಸಲ್ಯೂಷನ್" ಏಜೆನ್ಸಿ ವಿದ್ಯುತ್ ಬಳಕೆದಾರರನ್ನು ವಂಚಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ರಾಜ್ಯದಲ್ಲಿ ವಿದ್ಯುತ್ ಬಿಲ್ಲುಗಳನ್ನು ಪಾವತಿಸಲು ಇಲಾಖೆಯ ನೌಕರರನ್ನೇ ಬಳಸಲು ಇರುವ ತೊಡಕುಗಳೇನು ?

## ರಾಜ್ಯದ ರೈತರಿಗೆ ಕೃಷಿ ಸಾಲವನ್ನು ಹೆಚ್ಚು ಮಾಡುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೬೩ (೩೫೬೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ರೈತರಿಗೆ ಮಂಜೂರು ಮಾಡುವ ಕೃಷಿ ಸಾಲದ ಮೊತ್ತದ ಮಿತಿ ಎಷ್ಟು ; ಕೊಡಗು ಜಿಲ್ಲೆಯಲ್ಲಿ ನೀಡಿರುವ ಕೃಷಿ ಸಾಲವೆಷ್ಟು ; (ವಿವರ ನೀಡುವುದು)

(ಆ) ರೈತರ ಹೆಸರಿನಲ್ಲಿರುವ ಜಮೀನಿಗೆ ಸಾಲದ ಮಿತಿಯನ್ನು ಜಾಗಕ್ಕಿರುವ ಸರ್ಕಾರಿ ಬೆಲೆಗನುಗುಣವಾಗಿ ಮಂಜೂರು ಮಾಡಲು ಇರುವ ತೊಡಕುಗಳೇನು ; ಈ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ ? (ವಿವರ ನೀಡುವುದು)

## ಮಂಡ್ಯ ಜಿಲ್ಲೆಯ ತೋಟಗಾರಿಕಾ ಇಲಾಖೆಯಲ್ಲಿನ ಅಕ್ರಮಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೧೬೪ (೩೬೧೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ತೋಟಗಾರಿಕಾ ಇಲಾಖೆಯಿಂದ ವಿವಿಧ ಯೋಜನೆಗಳ ಅಡಿಯಲ್ಲಿ ೨೦೧೩ ರಿಂದ ಇಲ್ಲಿಯವರೆಗೆ ಎಷ್ಟು ಜನ ರೈತರಿಗೆ ಸಹಾಯಧನ ವಿತರಿಸಿದೆ ; (ವಿವರ ನೀಡುವುದು)

(ಆ) ವಿಶೇಷವಾಗಿ "ಹಸಿರು ಮನೆ" ಯೋಜನೆಯಲ್ಲಿ ಎಷ್ಟು ಫಲಾನುಭವಿಗಳಿಗೆ ಹಣ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು–೨೦೧೩ ರಿಂದ ಇಲ್ಲಿಯವರೆಗೆ ಫಲಾನುಭವಿಗಳ ವಿವರ ನೀಡುವುದು)

(ಇ) "ಈ ಹಸಿರು ಮನೆ" ಯೋಜನೆಯ ಮಾರ್ಗಸೂಚಿ ನಿಯಮಗಳು ಏನು ; (ವಿವರ ನೀಡುವುದು)

(ಈ) "ಈ ಹಸಿರು ಮನೆ" ಯೋಜನೆಯಲ್ಲಿ ಸರ್ಕಾರಿ ಮಾರ್ಗಸೂಚಿಗಳನ್ನು ಮೀರಿ ಸಹಾಯಧನ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿಶೇಷವಾಗಿ ನಾಗಮಂಗಲ ತಾಲ್ಲೂಕಿನಲ್ಲಿ)

(ಉ) ಗಮನಕ್ಕೆ ಬಂದಿದ್ದಲ್ಲಿ, ಮಾರ್ಗಸೂಚಿ ಮೀರಿ ಹಣ ಬಿಡುಗಡೆಗೆ ಕಾರಣರಾದವರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕೃಷಿ ಬೆಳೆ ವಿಮೆ ಪರಿಹಾರದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೧೬೫ (೩೫೫೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಎಷ್ಟು ವಿಸ್ತೀರ್ಣದ ಕೃಷಿ ಜಮೀನು ಬೆಳೆ ವಿಮೆ ವ್ಯಾಪ್ತಿಗೆ ಒಳಪಟ್ಟಿದೆ ; (ವಿವರ ನೀಡುವುದು)

(ಆ) ರೈತರು ಎಕರೆ ಒಂದಕ್ಕೆ ಕಟ್ಟಿದ ಬೆಳೆ ವಿಮೆ ಎಷ್ಟು ; (ಬೆಳೆವಾರು ವಿವರ ನೀಡುವುದು)

(ಇ) ಬೆಳೆ ವಿಮೆಗೆ ಒಳಪಟ್ಟ ಜಮೀನಿನ ಪೈಕಿ ಎಷ್ಟು ಜಮೀನು ಬೆಳೆ ಹಾನಿಯಾದ ವಿಮೆ ಹಣ ಪಡೆದಿದೆ ;

(ಈ) ಅನೇಕ ರೈತರ ಬೆಳೆ ಅನಾವೃಷ್ಟಿ ಮತ್ತು ಅತಿವೃಷ್ಟಿಯಿಂದ ಹಾನಿಯಾಗಿದ್ದರೂ ಬೆಳೆ ವಿಮೆ ಪರಿಹಾರ ಬಾರದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ರೈತರಿಗೆ ವಿಮೆ ಮೊತ್ತ ತಲುಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯಕ್ಕೆ ಮಂಜೂರಾಗಿರುವ ರಾಷ್ಟ್ರೀಯ ಹೆದ್ದಾರಿಗಳ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೩೧೬೬ (೩೫೭೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಲ್ಲಿ ರಾಜ್ಯಕ್ಕೆ ಮಂಜೂರಾಗಿರುವ ಹೊಸ ರಾಷ್ಟ್ರೀಯ ಹೆದ್ದಾರಿಗಳ ಸಂಖ್ಯೆ ಎಷ್ಟು ; ಅವು ಯಾವುವು ; ಮಂಜೂರಾದ ವರ್ಷ ಹಾಗೂ ಕಿ.ಮೀ. ವ್ಯಾಪ್ತಿ ಸಮೇತ ವಿವರ ನೀಡುವುದು ;

(ಆ) ಮೇಲ್ದರ್ಜೆಗೇರಿಸಲು ಮಂಜೂರಾತಿ ದೊರೆತ ರಸ್ತೆಗಳು ಯಾವುವು ; ನಿರ್ಮಿಸಲಾದ ನಿರ್ಮಾಣ ಹಂತದಲ್ಲಿರುವ ಹಾಗೂ ನಿರ್ಮಿಸಲು ಪ್ರಸ್ತಾವಿತ ರಸ್ತೆಗಳು ಯಾವುವು ; (ಕಿ.ಮೀ. ಸಮೇತ ಮಾಹಿತಿ ಒದಗಿಸುವುದು)

(ಇ) ಕಳೆದ ೫ ವರ್ಷಗಳಲ್ಲಿ ಕರ್ನಾಟಕಕ್ಕೆ ಎಲ್ಲಾ ರೀತಿಯ ರಸ್ತೆಗಳಿಗಾಗಿ ಒದಗಿಸಿರುವ ಹಣವೆಷ್ಟು ; ಬಿಡುಗಡೆಯಾದ ಮತ್ತು ವಿನಿಯೋಗಿಸಲಾದ ಹಣ ಎಷ್ಟು ? (ವಿವರ ನೀಡುವುದು)

## ಕೊಡಗು ಜಿಲ್ಲೆಯ ಸೋಮವಾರಪೇಟೆ ತಾಲ್ಲೂಕಿನ ಮಾವಿನಕಟ್ಟೆಯಿಂದ ಕಿಕ್ಕರಳ್ಳಿ ರಸ್ತೆ ದುರಸ್ತಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದರು):–**

೩೧೬೭ (೩೫೪೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯ ಮಾವಿನಕಟ್ಟೆ ಕಿಕ್ಕರಳ್ಳಿ ರಸ್ತೆಯ ತುಂಬಾ ಹಾಳಾಗಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ರಸ್ತೆಯ ಅಗಲೀಕರಣ, ದುರಸ್ತಿ ಹಾಗೂ ಡಾಂಬರೀಕರಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಯಾವ ಕಾಲಮಿತಿಯೊಳಗೆ ಸದರಿ ರಸ್ತೆಯನ್ನು ಅಭಿವೃದ್ಧಿ ಪಡಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದು ?

## ಕೊಡಗು ಜಿಲ್ಲೆಯ ಮುಜರಾಯಿ ದೇವಸ್ಥಾನಗಳಲ್ಲಿ ಸ್ವಚ್ಛತೆ, ಸುರಕ್ಷತೆಗಾಗಿ ಕೈಗೊಂಡಿರುವ ಕ್ರಮಗಳ ಕುರಿತು

**ಶ್ರೀಮತಿ ವೀಣಾ ಅಚ್ಚಯ್ಯ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೬೮ (೨೫೪೪೮) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಮುಜರಾಯಿ ವ್ಯಾಪ್ತಿಗೆ ಒಳಪಡುವ ದೇವಸ್ಥಾನಗಳು ಯಾವುವು ; (ಸಂಪೂರ್ಣ ಪಟ್ಟಿ ನೀಡುವುದು)

(ಆ) ಸದರಿ ದೇವಸ್ಥಾನಗಳಲ್ಲಿ ಸ್ವಚ್ಛತೆ ಕಾಪಾಡಲು ಹಾಗೂ ಮಹಿಳಾ ಸುರಕ್ಷತೆ ಸಲುವಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಪ್ರತಿಯೊಂದು ದೇವಸ್ಥಾನಕ್ಕೆ ಸಂಬಂಧಿಸಿದ ವಿವರ ನೀಡುವುದು)

(ಇ) ಸದರಿ ದೇವಸ್ಥಾನಗಳಲ್ಲಿ ಈ ಸಲುವಾಗಿ ವಿನಿಯೋಗಿಸಿರುವ ಅನುದಾನವೆಷ್ಟು ; ಹಾಗೂ ಕೈಗೊಂಡಿರುವ ಕಾಮಗಾರಿಗಳೇನು; (ಸಂಪೂರ್ಣ ವಿವರ ನೀಡುವುದು)

## ತೋಟಗಾರಿಕೆ ಇಲಾಖೆಯಿಂದ ದೊರೆಯುವ ಸೌಲಭ್ಯಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೬೯ (೨೫೪೪೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ತೋಟಗಾರಿಕೆ ಬೆಳೆ ಬೆಳೆಯುವ ರೈತರಿಗೆ ಸಿಗುವ ಸೌಲಭ್ಯಗಳು, ಯೋಜನೆಗಳು ಯಾವುವು; (ಪ್ರತಿ ಸೌಲಭ್ಯದ ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಕಾರ್ಯಕ್ರಮ/ಸೌಲಭ್ಯಗಳಿಗಾಗಿ ಕೊಡಗು ಜಿಲ್ಲೆಗೆ ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನವೆಷ್ಟು; (ಕಳೆದ ೫ ವರ್ಷಗಳ ಮಾಹಿತಿಯನ್ನು ಯೋಜನೆವಾರು, ತಾಲ್ಲೂಕುವಾರು ನೀಡುವುದು)

(ಇ) ಜಿಲ್ಲೆಯಲ್ಲಿ ತೋಟಗಾರಿಕಾ ಬೆಳೆಗಳ ಪುನಶ್ಚೇತನಕ್ಕಾಗಿ ಇಲಾಖೆ ಕೈಗೊಂಡಿರುವ ವಿಶೇಷ ಕ್ರಮಗಳೇನು? (ವಿವರ ನೀಡುವುದು)

## ಕೃಷಿ ಇಲಾಖೆಯಿಂದ ದೊರೆಯುವ ಸಾಲ, ಸೌಲಭ್ಯಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೩೧೭೦ (೩೫೪೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೃಷಿ ಇಲಾಖೆಯಿಂದ ರೈತರಿಗೆ ಸಿಗುತ್ತಿರುವ ಸಾಲ, ಸೌಲಭ್ಯಗಳು, ಯೋಜನೆಗಳು ಹಾಗೂ ಕಾರ್ಯಕ್ರಮಗಳು ಯಾವುವು; (ಪ್ರತಿ ಸೌಲಭ್ಯದ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಕಾರ್ಯಕ್ರಮಗಳಿಗಾಗಿ ಕೊಡಗು ಜಿಲ್ಲೆಗೆ ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನವೆಷ್ಟು; (ಕಳೆದ ೫ ವರ್ಷಗಳ ಮಾಹಿತಿಯನ್ನು ಯೋಜನೆವಾರು, ತಾಲ್ಲೂಕುವಾರು ನೀಡುವುದು)

(ಇ) ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ, ಜಿಲ್ಲೆಯಲ್ಲಿ ವೈವಿಧ್ಯಮಯ ಬೆಳೆಗಳನ್ನು ಬೆಳೆಯುವ ಹಿನ್ನೆಲೆಯಲ್ಲಿ ವಿಶೇಷ ಅನುದಾನ ಅಥವಾ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ ? (ವಿವರ ನೀಡುವುದು)

## ತೋಟಗಾರಿಕೆಯಿಂದ ಬೀದರ್ ಜಿಲ್ಲೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಯೋಜನೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೭೧ (೩೫೫೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆ ಇಲಾಖೆಯಿಂದ ಬೀದರ್ ಜಿಲ್ಲೆಯಲ್ಲಿ ಎಷ್ಟು ಪ್ರದೇಶದಲ್ಲಿ ಸಸಿಗಳನ್ನು ನೆಡಲಾಗಿದೆ ; (ವಿವರ ನೀಡುವುದು)

(ಆ) ತೋಟಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಇ) ಈ ಇಲಾಖೆಯಿಂದ ರೈತರಿಗೆ ಸಿಗುತ್ತಿರುವ ಸವಲತ್ತುಗಳೇನು? (ವಿವರ ನೀಡುವುದು)

## ಬೀದರ್ ಔರಾದ್ ರಸ್ತೆಯ ಅಭಿವೃದ್ಧಿಯ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೭೨ (೩೫೫೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್‌ನಿಂದ ಔರಾದ್‌ಗೆ ಹೋಗುವ ರಸ್ತೆ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಸ್ತೆ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು; ಹಾಗೂ ರಸ್ತೆಗೆ ನೀಡಿರುವ ಅನುದಾನ ಎಷ್ಟು; (ವಿವರ ನೀಡುವುದು)

(ಇ) ರಸ್ತೆ ಅಭಿವೃದ್ಧಿಗೆ ಅನುದಾನ ನೀಡಿ ರಸ್ತೆ ಕಾಮಗಾರಿಗಳು ಆಗದಿರಲು ಕಾರಣಗಳೇನು ? (ವಿವರ ನೀಡುವುದು)

## ಕೃಷಿ ಪತ್ತಿನ ಸಹಕಾರ ಸಂಘಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೭೩ (೩೪೭೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ಸಹಕಾರ ಸಂಘಗಳು ಎಷ್ಟು ಹಾಗೂ ಯಾವುವು; (ತಾಲ್ಲೂಕುವಾರು, ವಿಳಾಸ ಸಹಿತ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಎಷ್ಟು ಹೊಸ ಪತ್ತಿನ ಸಹಕಾರ ಸಂಘಗಳು ಪ್ರಾರಂಭವಾಗಿವೆ; (ತಾಲ್ಲೂಕುವಾರು, ವಿಳಾಸ ಸಹಿತ ಸಂಪೂರ್ಣ ವಿವರ ನೀಡುವುದು)

(ಇ) ಈ ಜಿಲ್ಲೆಗಳ ವ್ಯಾಪ್ತಿಯ ವಿವಿಧ ಸಹಕಾರ ಸಂಘಗಳಲ್ಲಿ ನಡೆದಿರುವ ಅವ್ಯವಹಾರಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಅವುಗಳು ಯಾವುವು; ಅವುಗಳ ವಿರುದ್ಧ ಯಾವ ಯಾವ ನಿಯಮಗಳಡಿಯಲ್ಲಿ ತನಿಖೆ ಕೈಗೊಳ್ಳಲಾಗಿದೆ; ತನಿಖೆಯ ಪ್ರಗತಿ ಯಾವ ಹಂತದಲ್ಲಿದೆ ; ತನಿಖೆಯಲ್ಲಿ ಸಾಬೀತಾಗಿರುವ ಪ್ರಕರಣಗಳೆಷ್ಟು ; (ತಾಲ್ಲೂಕುವಾರು ಪ್ರಕರಣವಾರು ಮೊತ್ತದ ಸಹಿತ ವಿವರ ನೀಡುವುದು)

## ಗದಗ ಪಶುವೈದ್ಯಕೀಯ ಮಹಾವಿದ್ಯಾಲಯದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೭೪ (೩೪೭೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಿಂದ ಪ್ರಗತಿಯಲ್ಲಿರುವ ಗದಗ ಪಶುವೈದ್ಯಕೀಯ ಮಹಾವಿದ್ಯಾಲಯದ ಕಾಮಗಾರಿ ಹಾಲಿ ಯಾವ ಹಂತದಲ್ಲಿ ಇದೆ; ಇದರ ನಿರ್ಮಾಣಕ್ಕಾಗಿ ಈವರೆವಿಗೂ ಖರ್ಚಾಗಿರುವ ಮೊತ್ತ ಎಷ್ಟು; ಅಂದಾಜಿಸಲಾಗಿರುವ ವೆಚ್ಚ ಎಷ್ಟು ;

(ಆ) ಸದರಿ ವಿಶ್ವದ್ಯಾಲಯದ ಕಟ್ಟಡ ನಿರ್ಮಾಣ ಕಾಮಗಾರಿಯು ಮುಕ್ತಾಯಗೊಂಡಿದೆಯೇ; ಮುಕ್ತಾಯಗೊಂಡಿದ್ದಲ್ಲಿ ಸದರಿ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಯಾವ ಕ್ರಮ ಕೈಗೊಂಡಿದೆ; (ಸಂಪೂರ್ಣ ವಿವರ ನೀಡುವುದು)

(ಇ) ಇದರಲ್ಲಿ ವಿದ್ಯಾರ್ಥಿಗಳಿಗೆ ಯಾವಾಗಿನಿಂದ ಪ್ರವೇಶಾವಕಾಶ ಕಲ್ಪಿಸಲಾಗುವುದು ;

(ಈ) ಈ ವಿದ್ಯಾಲಯಕ್ಕೆ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ನೇಮಕ ಮಾಡಲು ಅಧಿಸೂಚನೆ ಹೊರಡಿಸಲಾಗಿದೆಯೇ ;

(ಉ) ಈ ನೇಮಕಾತಿಯಲ್ಲಿ ಉತ್ತರ ಕರ್ನಾಟಕದ ಹಾಗೂ ಸ್ಥಳೀಯ ಭಾಗದ ಜನರಿಗೆ ಎಷ್ಟರ ಪ್ರಮಾಣದಲ್ಲಿ ಆದ್ಯತೆ ನೀಡಲಾಗುವುದು ?

## ಕೇಂದ್ರ ಸರ್ಕಾರದಿಂದ ಬಂದಿರುವ ಅನುದಾನ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೭೫ (೩೪೬೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳ ಲೋಕೋಪಯೋಗಿ ಇಲಾಖೆಗೆ ಯಾವ ಯಾವ ಶೀರ್ಷಿಕೆಯಡಿ ಎಷ್ಟೆಷ್ಟು ಹಣ ಬಂದಿದೆ; (ಕಳೆದ ೩ ವರ್ಷಗಳಿಂದ ಈವರೆಗಿನವರೆಗೆ ಸಂಪೂರ್ಣ ವಿವರ ನೀಡುವುದು)

(ಆ) ಆ ಪೈಕಿ ಹಂಚಿಕೆ ಮಾಡಲಾಗಿರುವ ಹಣ ಎಷ್ಟು;

(ಇ) ಆ ಹಣವನ್ನು ಯಾವ ಯಾವ ಕಾಮಗಾರಿಗಳಿಗೆ ಹಂಚಿಕೆ ಮಾಡಲಾಗಿದೆ; ಇದರಲ್ಲಿ ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಿಗೆ ಯಾವ ಕಾಮಗಾರಿಗಳಿಗೆ ಹಂಚಿಕೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಈ ಜಿಲ್ಲೆಗಳಲ್ಲಿನ ಸದರಿ ಕಾಮಗಾರಿಗಳ ಪೈಕಿ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು? (ವಿವರ ನೀಡುವುದು)

## ಖರೀದಿ ಕೇಂದ್ರಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೭೬ (೨೪೬೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಈವರೆಗೆ ಬೆಳೆ ಖರೀದಿಗೆ ಖರೀದಿ ಕೇಂದ್ರಗಳನ್ನು ಪ್ರಾರಂಭಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಖರೀದಿ ಕೇಂದ್ರಗಳನ್ನು ಪ್ರಾರಂಭಿಸದೇ ಇರುವುದಕ್ಕೆ ಕಾರಣವೇನು; ಇದರ ನಿವಾರಣೆಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಖರೀದಿ ಕೇಂದ್ರ ಹಾಗೂ ಕೃಷಿ ಉತ್ಪನ್ನ ಮಾರುಕಟ್ಟೆಯ ನಡುವೆ ದರ ವ್ಯತ್ಯಾಸದಿಂದ ರೈತರಿಗೆ ಅನ್ಯಾಯವಾಗುತ್ತಿರುವುದನ್ನು ತಡೆಗಟ್ಟಲು ಹಾಗೂ ರೈತರಿಗೆ ಅನುಕೂಲವಾಗುವಂತೆ ಖರೀದಿ ಕೇಂದ್ರಗಳನ್ನು ಯಾವ ಕಾಲಮಿತಿಯಲ್ಲಿ ಪ್ರಾರಂಭಿಸಲಾಗುವುದು; ಈ ಕೇಂದ್ರವನ್ನು ಪ್ರಾರಂಭಿಸಲು ಇರುವ ಮಾನದಂಡವೇನು? (ವಿವರ ನೀಡುವುದು)

## ಅಮೃತ ಯೋಜನೆಯಲ್ಲಿ ದಮನಿತ ಮಹಿಳೆ/ ಲಿಂಗತ್ವ ಅಲ್ಪಸಂಖ್ಯಾತರಿಗೆ ಅವಕಾಶ ನೀಡುವ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿರುವರು) :–**

೨೧೭೭ (೨೬೨೪) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶುಸಂಗೋಪನೆ ಇಲಾಖೆಯಿಂದ ಕೆ.ಎಂ.ಎಫ್ ಸಹಯೋಗದೊಂದಿಗೆ ಅನುಷ್ಠಾನಗೊಳ್ಳುತ್ತಿರುವ ಅಮೃತ ಯೋಜನೆ ರಾಜ್ಯಾದಂತ ಜಾರಿಗೊಳಿಸಲಾಗುತ್ತಿದೆಯೇ ;

(ಆ) ಈ ಯೋಜನೆಯಲ್ಲಿ ನೀಡಲ್ಪಡುವ ಜಾನುವಾರುಗಳನ್ನು ಎಷ್ಟು ದೇವದಾಸಿಯರಿಗೆ ಮತ್ತು ನಿರ್ಗತಿಕ ಮಹಿಳೆಯರಿಗೆ ನೀಡಲಾಗುತ್ತಿದೆ; (ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಯೋಜನೆಯ ಫಲಾನುಭವಿಗಳಾಗಿರುವ ದೇವದಾಸಿಯರು ಮತ್ತು ನಿರ್ಗತಿಕ ಮಹಿಳೆಯರಿಗೆ ಬ್ಯಾಂಕಿನ ಸಾಲವನ್ನು ಮನ್ನಾ ಮಾಡುವ ಬಗ್ಗೆ ಸರ್ಕಾರದ ನಿಲುವೇನು ;

(ಈ) ಈ ಯೋಜನೆಯಲ್ಲಿ ರಾಜ್ಯಾದಂತ ನೋಂದಾಯಿತ ದಮನಿತ ಮಹಿಳೆಯರ ಹಾಗೂ ಲಿಂಗತ್ವ ಅಲ್ಪಸಂಖ್ಯಾತರ ಸಮಾಜಿಕ ಏಳಿಗೆಯ ಬಗ್ಗೆ ಸರ್ಕಾರ ಚಿಂತಿಸಿದೆಯೇ ?

## ಜಲಮಾರ್ಗಗಳನ್ನು ಅಭಿವೃದ್ಧಿ ಪಡಿಸುವ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೩೧೭೮ (೩೬೨೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಜಲಮಾರ್ಗ ವಿಧೇಯಕದಲ್ಲಿ ೨೦೧೫ ರಲ್ಲಿ ಗುರುತಿಸಲ್ಪಟ್ಟಿರುವ ಕರ್ನಾಟಕದ ನದಿಗಳಾದ ಭೀಮಾ, ಘಟಪ್ರಭಾ, ಕಬಿನಿ, ಮಲಪ್ರಭಾ, ನೇತ್ರಾವತಿ ಮತ್ತು ಶರಾವತಿ ಜಲಮಾರ್ಗಗಳನ್ನು ಅಭಿವೃದ್ಧಿ ಪಡಿಸಿ ಸಾರ್ವಜನಿಕರ ಉಪಯೋಗಕ್ಕಾಗಿ ಬಳಸಲು ಸರ್ಕಾರದ ನೀತಿ/ ನಿಲುವೇನು ; (ವಿವರ ನೀಡುವುದು)

(ಆ) ಸದರಿ ಜಲಮಾರ್ಗಗಳಿಂದಾಗುವ ಉಪಯೋಗಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಮಿತವ್ಯಯಿ ಅಲ್ಪ ಸಮಯದ ಪ್ರಯಾಣ ಹಾಗೂ ಮಾಲಿನ್ಯ ರಹಿತ ಜಲಸಾರಿಗೆ ಅಭಿವೃದ್ಧಿ ಕುರಿತು ಸರ್ಕಾರದ ಮುಂದಿನ ರೂಪುರೇಷೆಗಳೇನು ; (ವಿವರ ನೀಡುವುದು)

(ಈ) ಒಳನಾಡು ಜಲಮಾರ್ಗಗಳನ್ನು ಜಲಸಾರಿಗೆ ಮಾರ್ಗವಾಗಿ ಅಭಿವೃದ್ಧಿಪಡಿಸಿ ತ್ವರಿತ ಒಳಸಂಪರ್ಕಗಳನ್ನು ಕಲ್ಪಿಸಿ ಅವುಗಳನ್ನು ಪ್ರವಾಸಿ ಆಕರ್ಷಣೆಯನ್ನಾಗಿ ಅಭಿವೃದ್ಧಿ ಪಡಿಸುವ ಚಿಂತನೆ ಸರ್ಕಾರದ ಗಮನದಲ್ಲಿದೆಯೇ ?

## ಕೃಷಿ ಇಲಾಖೆ ಮತ್ತು M.G.N.R.E.G.A ಯೋಜನೆಗಳನ್ನು ಒಗ್ಗೂಡಿಸುವ ಕಾಮಗಾರಿಗಳ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೩೧೭೪(೩೬೨೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಇಲಾಖೆ ವತಿಯಿಂದ ಕಳೆದ ೨ ವರ್ಷಗಳಿಂದ M.G.N.R.E.G.A ಯೋಜನೆಯಡಿಯಲ್ಲಿ ಒಗ್ಗೂಡಿಸುವಿಕೆ ಕಾಮಗಾರಿಗಳು ಅನುಷ್ಠಾನವಾಗುತ್ತಿದೆಯೇ ;

(ಆ) ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ; (ವಿವರಗಳನ್ನು ಒದಗಿಸುವುದು)

(ಇ) ಈ ಒಗ್ಗೂಡಿಸುವಿಕೆ ಕಾಮಗಾರಿಗಳ ಬಗ್ಗೆ ಸರ್ಕಾರದ ವತಿಯಿಂದ ರೈತರಿಗೆ ಅರಿವು ಮೂಡಿಸಲು ತೆಗೆದುಕೊಂಡ ಕ್ರಮಗಳೇನು ;

(ಈ) ಸದರಿ ಕಾಮಗಾರಿಗಳ ಅನುಷ್ಠಾನದಲ್ಲಿ ಪ್ರಗತಿ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಜಿಲ್ಲಾವಾರು ಅನುಷ್ಠಾನಗೊಂಡ ಕಾಮಗಾರಿಗಳ / ವರ್ಗಾವಾರು ವಿವರಗಳನ್ನು ಅಂಕಿ ಅಂಶ ಸಹಿತ ನೀಡುವುದು?

## ರೇಷ್ಮೆ ಇಲಾಖೆ ಮತ್ತು M.G.N.R.E.G.A ಯೋಜನೆಗಳನ್ನು ಒಗ್ಗೂಡಿಸುವ ಕಾಮಗಾರಿಗಳ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೩೧೮೦(೩೬೨೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೇಷ್ಮೆ ಇಲಾಖೆ ವತಿಯಿಂದ ಕಳೆದ ೨ ವರ್ಷಗಳಿಂದ M.G.N.R.E.G.A ಯೋಜನೆಯಡಿಯಲ್ಲಿ ಒಗ್ಗೂಡಿಸುವಿಕೆ ಕಾಮಗಾರಿಗಳು ಅನುಷ್ಠಾನವಾಗುತ್ತಿದೆಯೇ ;

(ಆ) ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ; (ವಿವರಗಳನ್ನು ಒದಗಿಸುವುದು)

(ಇ) ಈ ಒಗ್ಗೂಡಿಸುವಿಕೆ ಕಾಮಗಾರಿಗಳ ಬಗ್ಗೆ ಸರ್ಕಾರದ ವತಿಯಿಂದ ರೈತರಿಗೆ ಅರಿವು ಮೂಡಿಸಲು ತೆಗೆದುಕೊಂಡ ಕ್ರಮಗಳೇನು ;

(ಈ) ಸದರಿ ಕಾಮಗಾರಿಗಳ ಅನುಷ್ಠಾನದಲ್ಲಿ ಪ್ರಗತಿ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಜಿಲ್ಲಾವಾರು ಅನುಷ್ಠಾನಗೊಂಡ ಕಾಮಗಾರಿಗಳ / ವರ್ಗಾವಾರು ವಿವರಗಳನ್ನು ಅಂಕಿ ಅಂಶ ಸಹಿತ ನೀಡುವುದು?

## ದೇವಸ್ಥಾನಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೩೧೮೧ (೩೬೦೭) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಕಳೆದ ೪ ವರ್ಷಗಳಿಂದ ಮುಜರಾಯಿ ಇಲಾಖೆಯಡಿ ಯಾವ ಯಾವ ದೇವಸ್ಥಾನಗಳಿಗೆ ಎಷ್ಟೆಷ್ಟು ಅನುದಾನ ನೀಡಲಾಗಿದೆ ; (ತಾಲ್ಲೂಕುವಾರು ಪಂಚಾಯಿತಿವಾರು ಪೂರ್ಣ ವಿವರ ನೀಡುವುದು)

(ಆ) ಸದರಿ ದೇವಾಲಯಗಳಲ್ಲಿ ಮುಜರಾಯಿ ಇಲಾಖೆಯಡಿಯಲ್ಲಿ ಬರುವ ದೇವಾಲಯಗಳು ಯಾವುವು ; ಖಾಸಗಿ ದೇವಾಲಯಗಳು ಯಾವುವು? (ತಾಲ್ಲೂಕುವಾರು ಪಂಚಾಯಿತಿವಾರು ಪೂರ್ಣ ಮಾಹಿತಿ ನೀಡುವುದು)

## ಮಲೆಮಹದೇಶ್ವರ ಬೆಟ್ಟದಲ್ಲಿ ನಡೆಯುತ್ತಿರುವ ವಿವಿಧ ನಿರ್ಮಾಣ ಕಾಮಗಾರಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೮೨ (೩೪೮೪) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಲೆಮಹದೇಶ್ವರ ಬೆಟ್ಟದಲ್ಲಿ ಯಾತ್ರಾರ್ಥಿಗಳಿಗೆ ಒದಗಿಸುತ್ತಿರುವ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ನಡೆಯುತ್ತಿರುವ ವಿವಿಧ ನಿರ್ಮಾಣ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳ ಅಂದಾಜು ವೆಚ್ಚ ಎಷ್ಟು ; ಈ ಕಾಮಗಾರಿಗಳು ಪ್ರಾರಂಭಗೊಂಡಿದ್ದು

ಯಾವಾಗ; ಇದುವರೆಗೆ ಆಗಿರುವ ವೆಚ್ಚ ಎಷ್ಟು ; ಪ್ರಸ್ತುತ ಕಾಮಗಾರಿ ಯಾವ ಹಂತದಲ್ಲಿದೆ ; ಯಾವ ಕಾಲಮಿತಿಯೊಳಗೆ ಸದರಿ ಕಾಮಗಾರಿಗಳು ಪೂರ್ಣಗೊಳ್ಳಲಿದೆ;

(ಆ) ಉಪಹಾರ ದರ್ಶಿನಿ ಕಟ್ಟಡಗಳು ನಿರ್ಮಾಣವಾಗಿದ್ದರೂ ಸಾರ್ವಜನಿಕರ ಬಳಕೆಗೆ ನೀಡದೆ ಇರಲು ಕಾರಣವೇನು;

(ಇ) ಬೆಟ್ಟಕ್ಕೆ ಬರುವ ಭಕ್ತರ ಸಂಖ್ಯೆಗೆ ಅನುಗುಣವಾಗಿ ಶೌಚಾಲಯಗಳ ಕೊರತೆ ಹಾಗೂ ನೀರಿನ ಸೌಲಭ್ಯ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬೆಟ್ಟದ ಮೇಲೆ ಹಾಗೂ ತಾಳಬೆಟ್ಟದಲ್ಲಿ ಉತ್ತಮ ಶೌಚಾಲಯ ಸೌಲಭ್ಯಗಳನ್ನು ಕಲ್ಪಿಸಿಕೊಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಿದೆ ?

## ಸತ್ತೇಗಾಲ– ಉಗನಿ ಪಾಳ್ಯ ರಸ್ತೆ ದುರಸ್ಥಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್ ) ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೮೩(೩೪೮೩) ಮಾನ್ಯ ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಳ್ಳೇಗಾಲ ತಾಲ್ಲೂಕು ಸತ್ತೇಗಾಲ–ಉಗನಿಯ–ಪಾಳ್ಯ ಮೂಲಕ ಕೊಳ್ಳೇಗಾಲ–ಮಲೆ ಮಹದೇಶ್ವರ ಬೆಟ್ಟ ರಸ್ತೆಗೆ ಸಂಪರ್ಕ ಕಲ್ಪಿಸುವ ರಸ್ತೆಯು ಹದಗೆಟ್ಟಿದ್ದು, ಪ್ರವಾಸಿಗರಿಗೆ ಮತ್ತು ಗ್ರಾಮೀಣ ಜನರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಮಳವಳ್ಳಿ, ಕನಕಪುರ, ಬೆಂಗಳೂರು ಮೊದಲಾದ ಕಡೆಗಳಿಂದ ಬರುವ ವಾಹನಗಳು ಮಲೆಮಹದೇಶ್ವರ ಬೆಟ್ಟಕ್ಕೆ ಹೋಗಲು

ಸಮೀಪದ ಈ ಮಾರ್ಗಗಳನ್ನು ಬಳಸುತ್ತಿದ್ದು, ಈ ರಸ್ತೆ ಹದಗಡಟ್ಟು, ಗುಂಡಿಬಿದ್ದು, ಅಪಘಾತಗಳಿಗೆ ಕಾರಣವಾಗುತ್ತಿರುವುದರಿಂದ ಕೂಡಲೇ ಈ ರಸ್ತೆಯ ದುರಸ್ಥಿ ಕೈಗೊಳ್ಳಲಾಗುವುದೇ ?

## ಕೃಷ್ಣರಾಜ ಸಾಗರಕ್ಕೆ ಹೋಗುವ ರಸ್ತೆಗಳು ಹದಗೆಟ್ಟಿರುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್ ) ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೮೪ (೩೪೮೨) ಮಾನ್ಯ ಲೊಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರಿನಿಂದ ಪಂಪ್ ಹೌಸ್ – ಬಳಗೊಳ ಮೂಲಕ, ಪಶ್ಚಿಮವಾಹಿನಿಯಿಂದ – ಪಂಪ್‌ಹೌಸ್ ಬಳಗೊಳ ಮೂಲಕ ಇಲವಾಲದಿಂದ– ಬಳಗೊಳ ಮೂಲಕ ಕೃಷ್ಣರಾಜ ಸಾಗರಕ್ಕೆ ಹೋಗುವ ರಸ್ತೆಗಳು ಗುಂಡಿ ಬಿದ್ದು, ಹದಗೆಟ್ಟು ಸಂಚಾರಕ್ಕೆ ಅನಾನುಕೂಲ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೃಷ್ಣರಾಜ ಸಾಗರದ ಸಂತೆಮಾಳದಿಂದ ನಾರ್ತ್‌ಬ್ಯಾಂಕ್ ಕಡೆಗೆ ಹೋಗುವ ರಸ್ತೆಯಲ್ಲಿರುವ ಕಾವೇರಿ ಸೇತುವೆಯು ಕಿತ್ತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ರಿಪೇರಿ ಮಾಡಲು ಕ್ರಮ ಜರುಗಿಸಲಾಗಿದೆಯೇ ; ಈ ರಸ್ತೆಯಲ್ಲಿ ಸಂಚರಿಸಲು ವಾಹನಗಳಿಗೆ ಸುಂಕವನ್ನು ನಿಗಧಿಪಡಿಸಲಾಗಿದೆಯೇ; ಯಾವ ಯಾವ ವಾಹನಗಳಿಗೆ ಎಷ್ಟು ಸುಂಕ ವಿಧಿಸಲಾಗಿದೆ ;

(ಇ) ಪ್ರವಾಸೋದ್ಯಮ ದೃಷ್ಟಿಯಿಂದ ಮತ್ತು ಸಾರ್ವಜನಿಕ ಸಾರಿಗೆ ದೃಷ್ಟಿಯಿಂದ ಅತ್ಯಂತ ಪ್ರಮುಖವಾಗಿರುವ ಈ ರಸ್ತೆಗಳನ್ನು ದುರಸ್ಥಿ ಮಾಡಿ ಸುಸ್ಥಿತಿಯಲ್ಲಿಡಲು ಯಾವ ಕ್ರಮಗಳನ್ನು ಜರುಗಿಸಲಾಗುವುದು?

## ಲೋಕೋಪಯೋಗಿ ರಸ್ತೆಗಳ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೮೫ (೩೫೮೩) ಮಾನ್ಯ ಲೊಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳ ಲೋಕೋಪಯೋಗಿ ರಸ್ತೆಗಳ ದುರಸ್ತಿ ಮತ್ತು ಅಭಿವೃದ್ಧಿಗಾಗಿ ಕಳೆದ ೩ ವರ್ಷಗಳಲ್ಲಿ ರಾಜ್ಯ ಸರ್ಕಾರ ನಿಗಧಿಪಡಿಸಿ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು ; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವನ್ನು ಎರಡು ಜಿಲ್ಲೆಗಳ ಎಲ್ಲಾ ತಾಲ್ಲೂಕುಗಳಿಗೆ ಸಮಾನವಾಗಿ ಹಂಚಿಕೆ ಮಾಡಲಾಗಿದೆಯೇ; (ತಾಲ್ಲೂಕುವಾರು, ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವನ್ನು ಲೋಕೋಪಯೋಗಿ ರಸ್ತೆಗಳ ದುರಸ್ತಿ ಮತ್ತು ಅಭಿವೃದ್ಧಿಗಾಗಿ ಎಲ್ಲಾ ತಾಲ್ಲೂಕುಗಳಲ್ಲಿಯೂ ಸಮರ್ಪಕವಾಗಿ ಬಳಸಿಕೊಳ್ಳಲಾಗಿದೆಯೇ ;

(ಈ) ಹಾಗಿದ್ದಲ್ಲಿ, ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಅನುದಾನದಲ್ಲಿ ಎರಡು ಜಿಲ್ಲೆಗಳ ಎಷ್ಟು ಲೋಕೋಪಯೋಗಿ ರಸ್ತೆಗಳನ್ನು ದುರಸ್ತಿಪಡಿಸಿ ಅಭಿವೃದ್ಧಿಪಡಿಸಲಾಗಿದೆ ; (ತಾಲ್ಲೂಕುವಾರು, ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವನ್ನು ಕೆಲವು ತಾಲ್ಲೂಕುಗಳಲ್ಲಿ ಲೋಕೋಪಯೋಗಿ ರಸ್ತೆಗಳ ದುರಸ್ತಿ ಮತ್ತು ಅಭಿವೃದ್ಧಿಗಾಗಿ ಸಮರ್ಪಕವಾಗಿ ಬಳಸಿಕೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಿದ್ದಲ್ಲಿ, ಅಂತಹ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಲಬುರಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ಕಾಗಿಣಾ ಸೇತುವೆ ಪ್ರವಾಹದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೮೬ (೩೬೨೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ಮಳಖೇಡದಲ್ಲಿನ ಕಾಗಿಣಾ ಸೇತುವೆ ಪ್ರವಾಹ ಬಂದಾಗ ಮುಳುಗಿ ಸಂಚಾರ ಸ್ಥಗಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಹೊಸ ಸೇತುವೆ ನಿರ್ಮಾಣ ಮಾಡಲು ಸರ್ಕಾರ ನಿರ್ಧರಿಸಿದೆಯೇ ; ನಿರ್ಧರಿಸಿದ್ದರೆ ವಿವರ ಒದಗಿಸುವುದು ;

(ಇ) ಹೊಸ ಸೇತುವೆ ಮಂಜೂರಾಗಿದ್ದರೆ, ಎಂದಿನಿಂದ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ?

## ಕಲಬುರಗಿ ಜಿಲ್ಲೆಯ ಪಶು ಆಸ್ಪತ್ರೆಗಳ ಬಗ್ಗೆ

**ಶ್ರೀ ಇಕ್ಬಾಲ್ ಅಹಮ್ಮದ್ ಸರಡಗಿ(ನಾಮನಿರ್ದೇಶನ ಹೊಂದಿದವರು):–**

೩೧೮೭ (೩೫೪೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿರುವ ಒಟ್ಟು ಪಶು ಆಸ್ಪತ್ರೆಗಳ ಸಂಖ್ಯೆಗಳೆಷ್ಟು;

(ಆ) ಜಿಲ್ಲೆಯಲ್ಲಿನ ಗ್ರಾಮೀಣ ಪಶು ಆಸ್ಪತ್ರೆಗಳಲ್ಲಿ ಪಶು ವೈದ್ಯರು ಹಾಗೂ ಇತರೆ ಪಶುವೈದ್ಯಕೀಯ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರಿಪಡಿಸಲು ಕೈಗೊಂಡಿರುವ ಕ್ರಮಗಳೇನು ;

(ಇ) ಜಿಲ್ಲೆಯಲ್ಲಿ ಪಶು ಆಸ್ಪತ್ರೆಗಳಲ್ಲಿನ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಇದರಲ್ಲಿ ಪಶು ವೈದ್ಯಕೀಯರೆಷ್ಟು, ಹಾಗೂ ಇತರೆ ಸಿಬ್ಬಂದಿಗಳೆಷ್ಟು ?

**ಕೆ.ಆರ್.ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0195/700 ಪ್ರತಿಗಳು/07–11–2017